ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 170 ಸಂಚಿಕೆ- 170 | PAGE-8 ಪುಟ-8 | ಶನಿವಾರ 16.08.2025 | RS.2/- ಬೆಲೆ 2/-

## ಡಬಲ್ ದೀಪಾವಳಿ ಪ್ರಧಾನಿ ಘೋಷಣೆ



ಮಲ್ಲಮ್ಮನುಡಿವಾರ್ತೆನವದೆಹಲಿ:ಆ.15: ಈ ಬಾರಿ ದೀಪಾವಳಿ ಹಬ್ಬಕ್ಕೆ ಭರ್ಜರಿ ಉಡುಗೊರೆಯೊಂದನ್ನು ನೀಡುವುದಾಗಿ ಪ್ರಧಾನಮಂತ್ರಿ ನರೇಂದ್ರಮೋದಿಯವರು ಶುಕ್ರವಾರ ಘೋಷಣೆ ಮಾಡಿದ್ದಾರೆ.

ಈ ಬಾರಿ ಡಬಲ್ ದೀಪಾವಳಿ ಎಂದಿರುವ ಮೋದಿ ಮೋದಿಯವರು, ಜಿಎಸ್‌ಟಿಯಲ್ಲಿ ಮಹತ್ವದ ಸುಧಾರಣೆ ತಂದು ತೆರಿಗೆ ಹೊರೆ ಕಡಿಮೆ ಮಾಡಲಾಗುವುದು ಎಂದು ಹೇಳಿದ್ದಾರೆ.

79ನೇ ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ನವದೆಹಲಿಯ ಕೆಂಪು ಕೋಟೆಯಲ್ಲಿ ಧ್ವಜಾರೋಹಣ ನೆರವೇರಿಸಿ,ದೇಶದಜನತೆಯನ್ನುದ್ದೇಶಿಸಿ ಮಾತನಾಡಿದ ಮೋದಿಯವರು, ಕಳೆದ 8 ವರ್ಷಗಳಲ್ಲಿ, ನಾವು ಜಿಎಸ್‌ಟಿಯಲ್ಲಿಪ್ರಮುಖಸುಧಾರಣೆಯನ್ನು ಕೈಗೊಂಡಿದ್ದೇವೆ. ಮುಂದುವರೆದು ಮತ್ತಷ್ಟು ಜಿಎಸ್‌ಟಿ ಸುಧಾರಣೆಗಳನ್ನು ತರುತ್ತಿದ್ದೇವೆ. ಇದು ದೇಶಾದ್ಯಂತ ತೆರಿಗೆ ಹೊರೆಯನ್ನು ಕಡಿಮೆ ಮಾಡುತ್ತದೆ ಎಂದು ತಿಳಿಸಿದರು.

ತೆರಿಗೆಸ್ಲ್ಯಾಬ್‌ಗಳನ್ನುತರ್ಕಬದ್ಧಗೊಳಿಸುವುದು, ಅಗತ್ಯ ಮತ್ತು ದಿನನಿತ್ಯದ ವಸ್ತುಗಳ ಮೇಲಿನ ಜಿಎಸ್‌ಟಿ ದರಗಳನ್ನು ಕಡಿಮೆ ಮಾಡುವುದರ ಮೇಲೆ ಗಮನ ನೀಡಲಾಗುತ್ತಿದೆ. ಈ ಬಗ್ಗೆ ರಾಜ್ಯಗಳೊಂದಿಗೆ ಮಾತನಾಡಿದ್ದೇವೆ ನಮ್ಮ ಕೈಗಾರಿಕೆಗಳು ದೊಡ್ಡ ಲಾಭವನ್ನು ಪಡೆಯುತ್ತವೆ. ದೈನಂದಿನ ವಸ್ತುಗಳು ಅಗ್ಗವಾಗುತ್ತವೆ. ಇದು ಆರ್ಥಿಕತೆಗೆ ದೊಡ್ಡ ಉತ್ತೇಜನ ನೀಡುತ್ತದೆ. ಈ ಮೂಲಕ ಸಾಮಾನ್ಯ ಜನರಿಗೆ ಜೀವನವನ್ನು ಸುಲಭಗೊಳಿಸುವ ಮತ್ತು ನಮ್ಮ ಆರ್ಥಿಕತೆಯನ್ನು ಬಲಪಡಿಸುವುಕ್ಕೆಕ್ರಮವಹಿಸಲಾಗುತ್ತದೆ ಎಂದು ಹೇಳಿದರು.

ಜೊತೆಗೆ ಪ್ರಧಾನಿ ಮೋದಿಯವರು ಪ್ರಧಾನ ಮಂತ್ರಿ ವಿಕಸಿತ್ ಭಾರತ್ ರೋಜ್‌ಗಾರ್ ಯೋಜನೆಯನ್ನೂ ಘೋಷಿಸಿದರು.ಈಯೋಜನೆಯಡಿಯಲ್ಲಿ, ಖಾಸಗಿ ವಲಯದಲ್ಲಿ ಮೊದಲ ಉದ್ಯೋಗ ಪಡೆಯುವವರಿಗೆ ಸರ್ಕಾರದಿಂದ 15,000 ರೂ. ಸಿಗಲಿದೆ.

ಜಿಎಸ್‌ಟಿ ಮಂಡಳಿಯ ಮುಂದಿನ ಸಭೆಯು ಸೆಪ್ಟೆಂಬರ್ 9ರಂದು ನಡೆಯಲಿದೆ. ಪ್ರಸ್ತುತ, ನಮ್ಮ ದೇಶದಲ್ಲಿ ಶೇ.0.5, ಶೇ.12, ಶೇ.18 ಮತ್ತು

(2ನೇ ಪುಟ ನೋಡಿ)

## ಬಸವಣ್ಣನವರ ಧ್ಯೇಯದಂತೆ ನುಡಿದಂತೆ ನಡೆದು, ಜನ ಕಲ್ಯಾಣ ಕಾರ್ಯಕ್ರಮ ಜಾರಿಗೆ ತಂದಿದ್ದೇವೆ: ಸಿಎಂ ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಆ.15:ಬಸವಣ್ಣನವರ ಧ್ಯೇಯದಂತೆ ನಮ್ಮ ಸರ್ಕಾರ ನಡೆಯುತ್ತಿದ್ದು, ನಮ್ಮ ಸರ್ಕಾರ ಜನ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ ಎಂದು ಹೇಳುವ ಮೂಲಕಮುಖ್ಯಮಂತ್ರಿಸಿದ್ದರಾಮಯ್ಯ ಅವರು ಗ್ಯಾರಂಟಿ ಯೋಜನೆಗಳನ್ನು ಶುಕ್ರವಾರ ಕೊಂಡಾಡಿದ್ದಾರೆ.

78ನೇ ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ನಗರದ ಮಾಣಿಕ್ ಶಾ ಮೈದಾನದಲ್ಲಿ ಧ್ವಜಾರೋಹಣ ನೆರವೇರಿಸಿದ ಮುಖ್ಯಮಂತ್ರಿಗಳು ಜನತೆಯನ್ನುದ್ದೇಶಿಸಿ ಭಾಷಣ ಮಾಡಿದರು.

ಭಾಷಣದಲ್ಲಿ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹನೀಯರನ್ನು ಮರೆಯಲಾಗದು. ಸ್ವಾತಂತ್ರ್ಯ ಹೋರಾಟಗಾರರ ತ್ಯಾಗಬಲಿದಾನಕ್ಕೆ ಬೆಲೆಕಟ್ಟಲಾಗದು ಎಂದು ಸ್ವಾತಂತ್ರ್ಯ ಹೋರಾಟಗಾರರನ್ನು ಸ್ಮರಿಸಿದರು.

5 ಗ್ಯಾರಂಟಿ ಗಳಿಂದ 96 ಸಾವಿರ ಕೋಟಿಗೂ ಹೆಚ್ಚು ಹಣವನ್ನೆ ನೀಡಿದ್ದೇವೆ. ಶಕ್ತಿಯೋಜನೆ ಮಹಿಳೆಯರಿಗೆ ಸಹಾಯಕವಾಗಿದೆ. ಯೋಜನೆಗಾಗಿ 5900 ಹೊಸ ಬಸ್ಸುಗಳನ್ನು ಖರೀದಿ ಮಾಡಿದ್ದೇವೆ. ಮಧ್ಯವರ್ತಿಗಳ ಹಾವಳಿಯಿಲ್ಲದೇ ತಲಾದಾಯ ಹೆಚ್ಚಾಗಿದೆ ಎಂದು ತಿಳಿಸಿದರು.

ತಲಾದಾಯದಲ್ಲಿ ಕರ್ನಾಟಕ ದೇಶದಲ್ಲೇ ಮೊದಲಿದೆ. ಕಳೆದ ಹತ್ತು ವರ್ಷಗಳಲ್ಲಿ ಶೇಕಡಾ 101 ರಷ್ಟು ಪ್ರಗತಿ ಸಾಧಿಸಿದೆ. 2013-14 ರಲ್ಲಿ ಸ್ಥಿರ ದರಗಳಲ್ಲಿ 1,01,858 ರೂಪಾಯಿಗಳಷ್ಟಿತ್ತು. ಈಗ 2024-25ರ ವೇಳೆಗೆ 2,04,605 ರೂಪಾಯಿ ತಲುಪಿದೆ ಎಂದು ಹೇಳಿದರು.

ನುಡಿದಂತೆ ನಡೆಯಬೇಕೆಂಬ ಧ್ಯೇಯ ವಾಕ್ಯದ ಮೂಲಕ ನಮ್ಮ ಸರ್ಕಾರ ತನ್ನದೇ

ಆದ ಅಭಿವೃದ್ಧಿ ಮಾದರಿಗಳನ್ನು ನಿರ್ಮಿಸಿದೆ. ಇದಕ್ಕೆ ಕರ್ನಾಟಕ ಅಭಿವೃದ್ಧಿ ಮಾದರಿ ಎಂಬ ಹೆಸರಿನಲ್ಲಿ ಮನ್ನಣೆ ದೊರೆತಿರುವುದು ಹೆಮ್ಮೆಯ ಸಂಗತಿ. ವಿಶ್ವಸಂಸ್ಥೆಯ ಮುಖ್ಯಸ್ಥರಾದ ಫಿಲೆಮನ್ ಯಾಂಗ್ ರವರು ಕರ್ನಾಟಕಕ್ಕೆ ಬಂದು, ನಮ್ಮ ಗ್ಯಾರಂಟಿ ಯೋಜನೆಗಳನ್ನ ಮುಕ್ತ ಕಂಠದಿಂದ ಶ್ಲಾಘಿಸಿದ್ದಾರೆ.

ಕೃಷಿ ವಲಯಕ್ಕೆ 2025-26ರ ಬಜೆಟ್ ನಲ್ಲಿ 51,339 ಕೋಟಿ ಒದಗಿಸಿದ್ದೇವೆ. 2022-23ಕ್ಕೆ ಹೋಲಿಸಿದರೆ ಶೇಕಡಾ 52.34 ರಷ್ಟು ಅನುದಾನವನ್ನು ಕೃಷಿಗೆ ಕೊಟ್ಟಿದ್ದೇವೆ. ನಮ್ಮ ಮೊದಲ ಆದ್ಯತೆ ಕೃಷಿ ಎಂದರು.

ಇದೇ ವೇಳೆ ಕೇಂದ್ರ ಸರ್ಕಾರದ ವಿರುದ್ಧ ಕಿಡಿಕಾರಿದ ಅವರು, ಇಷ್ಟೆಲ್ಲಾ ಜನ ಕಲ್ಯಾಣ ಕಾರ್ಯಕ್ರಮಗಳ ನಡುವೆಯೂ ನಮಗೆ ಬೇಕಾಗಿರುವಷ್ಟು ಯೂರಿಯಾವನ್ನು ಕೇಂದ್ರ ಸರ್ಕಾರ ಪೂರೈಸುತ್ತಿಲ್ಲ. ಇದರಿಂದ ಸ್ವಲ್ಪ ಸಮಸ್ಯೆಗಳು ಉಂಟಾಗಿವೆ. ಈ ಸಮಸ್ಯೆಯನ್ನು ಕೂಡಲೇ ಬಗೆಹರಿಸಬೇಕೆಂದು ಆಗ್ರಹಿಸುತ್ತೇನೆಂದು ಹೇಳಿದರು.

## ಜಾತಿ, ಭೀತಿರಹಿತ ನಾಡು ಕಟ್ಟೋಣ:ಸಚಿವ ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಆ.15-ಪ್ರಜಾಪ್ರಭುತ್ವದ ಆಶಯಗಳನ್ನು ಈಡೇರಿಸಿ ದೇಶವನ್ನು ಸಮೃದ್ಧಗೊಳಿಸಲು ಹಾಗೂ ಜಾತಿ, ಭೀತಿಯಿಲ್ಲದ ಶಾಂತಿ, ಸಮೃದ್ಧಿಯ ನಾಡನ್ನು ಕಟ್ಟಲು ಭಾರತೀಯರಾದ ನಾವುಗಳು ದೀಕ್ಷೆ ತೊಡೋಣ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ಜಿಲ್ಲಾ ಕ್ರೀಡಾಂಗಣದಲ್ಲಿ

(2ನೇ ಪುಟ ನೋಡಿ)

## ಭಾರತ ದೇಶಕ್ಕೆ ಕಾಂಗ್ರೆಸ್ ಕೊಡುಗೆ ಅಪಾರ



ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್: ಭಾರತ ದೇಶದ ಸ್ವಾತಂತ್ರ್ಯಕ್ಕೆ ಹಾಗೂ ದೇಶದ ಸಮಗ್ರ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷದ ನಾಯಕರು ನೀಡಿರುವ ಕೊಡುಗೆ

(2ನೇ ಪುಟ ನೋಡಿ)

## ಸಚಿವ ಪ್ರಿಯಾಂಕ್ ರಿಂದ ರಾಷ್ಟ್ರಧ್ವಜಾರೋಹಣ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಆ.15:ರಾಜ್ಯದಗ್ರಾಮೀಣಾಭಿವೃದ್ಧಿ ಮತ್ತುಪಂಚಾಯತ್‌ರಾಜ್,ಐ.ಟಿ.ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಶುಕ್ರವಾರ ಕಲಬುರಗಿ ನಗರದ ಪೊಲೀಸ್ ಪರೇಡ್ ಮೈದಾನದಲ್ಲಿ 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ-ಯ ಧ್ವಜಾರೋಹಣ ನೆರವೇರಿಸಿ ನಂತರ ವಿವಿಧ ತುಕಡಿಗಳನ್ನು ಪರಿವೀಕ್ಷಿಸಿದರು.

ಪರೇಡ್ ಕಮಾಂಡರ್ ಡಿ.ಎ.ಆರ್ ಆರ್.ಪಿ.ಐ ಮಲ್ಲಯ್ಯ, ಸಹಾಯಕ ಪರೇಡ್ ಕಮಾಂಡರ್ ಡಿ.ಎ.ಆರ್ ಆರ್.ಎಸ್.ಐ ದುರ್ಗಸಿಂಹ ನೇತೃತ್ವದಲ್ಲಿ ಕಲಬುರಗಿ ನಗರ ಸಿ.ಎ.ಆರ್. ಘಟಕ, ಸಿವಿಲ್ ಕಲಬುರಗಿ ಜಿಲ್ಲೆ (ಪುರುಷ), ಸಿವಿಲ್ ಕಲಬುರಗಿ ನಗರ (ಪುರುಷ), ಸಿವಿಲ್ ಕಲಬುರಗಿ ನಗರ ಮತ್ತು ಜಿಲ್ಲೆ (ಮಹಿಳೆ), ಕೆ.ಎಸ್.ಆರ್.ಪಿ 6ನೇ ಪಡೆ, ಪ್ರತಿಭಾನ್ವಿತ ಬಾಲಕಿಯರ ಶಾಲೆ (ಭಾರತ ಸೇವಾ ದಳ ಘಟಕ), ಸೇನಾ ಆಯ್ಕೆ ಪೂರ್ವ

(2ನೇ ಪುಟ ನೋಡಿ)

## ಸ್ವಾತಂತ್ರ್ಯಕ್ಕಾಗಿ ತ್ಯಾಗ, ಬಲಿದಾನ ಮಾಡಿದ ಹೋರಾಟಗಾರರನ್ನು ದೇಶ ಎಂದಿಗೂ ಮರೆಯಲಾರದು: ಸಚಿವ ಈಶ್ವರ ಬಿ.ಖಂಡ್ರೆ



ಮಲ್ಲಮ್ಮನುಡಿ ವಾರ್ತೆ ಬೀದರ,ಆ 15:ಸ್ವಾತಂತ್ರ್ಯಕ್ಕಾಗಿ ತ್ಯಾಗ-ಬಲಿದಾನ ಮಾಡಿದ ಹೋರಾಟಗಾರರನ್ನು ದೇಶ ಎಂದಿಗೂ ಮರೆಯಲಾರದು ಎಂದು ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಅವರು ಹೇಳಿದರು.

ಅವರು ಶುಕ್ರವಾರ ಜಿಲ್ಲಾಡಳಿತ ಬೀದರ ವತಿಯಿಂದ ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ

(2ನೇ ಪುಟ ನೋಡಿ)

## ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನ ಸದಾ ಸ್ಮರಣೀಯ:ಸಚಿವ ಶರಣಬಸಪ್ಪ ದರ್ಶನಾಪುರ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಆ:14: ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಬಲಿದಾನದ ಫಲವಾಗಿ ನಾವು ಸ್ವಾತಂತ್ರ್ಯ ಗಳಿಸಿದ್ದು, ಅತ್ಯಮೂಲ್ಯವಾದ ಈ ಸ್ವಾತಂತ್ರ್ಯವನ್ನು ರಕ್ಷಿಸುವ ಸಂಕಲ್ಪದ ಜೊತೆಗೆ ಸ್ವಾತಂತ್ರ್ಯ ಹೋರಾಟಗಾರರನ್ನೂ ಈ ಶುಭ ಸಂದರ್ಭದಲ್ಲಿ ಸ್ಮರಿಸೋಣ ಎಂದು

(2ನೇ ಪುಟ ನೋಡಿ)

## ರಾಮಲಿಂಗೇಶ್ವರ ಜಾತ್ರೆ 18ರಂದು



ಮಲ್ಲಮ್ಮನುಡಿವಾರ್ತೆಹುಮನಾಬಾದ್ :ರಾಮಲಿಂಗೇಶ್ವರ ಜಾತ್ರಾಮಹೋತ್ಸವ ನಿಮಿತ್ತ ಪಟ್ಟಣದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರಿಗೆ ಸುಲ್ತಾನಬಾದ್ ವಾಡಿ ಗ್ರಾಮಸ್ಥರು ಸನ್ಮಾನಿಸಿ, ಗೌರವಿಸಿ ಆಮಂತ್ರಣ ಪತ್ರಿಕೆ ನೀಡಿದರು.

ಜಾತ್ರಾ ಮಹೋತ್ಸವ ಸಮಿತಿ ಪ್ರಮುಖರು ಮಾತನಾಡಿ, ತಾಲೂಕಿನ ಸುಲ್ತಾನಬಾದ್ ಗ್ರಾಮದಲ್ಲಿ ಆ. 18ರಂದು ರಾಮಲಿಂಗೇಶ್ವರ ಜಾತ್ರಾಮಹೋತ್ಸವ ಕಾರ್ಯಕ್ರಮ ಜರುಗಲಿದೆ. ಬೆಳಗ್ಗೆಯಿಂದ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮ ಪಲ್ಲಕ್ಕಿ ಉತ್ಸವ ಹಾಗೂ ಜಂಗಿ ಕುಸ್ತಿ ಜರುಗಲಿದೆ. ಹೀಗಾಗಿ ಹೆಚ್ಚಿನ ಭಕ್ತರು ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಸಯ್ಯ ಸಿದ್ರಾಮಯ್ಯ ಮಠ, ಸೋಮನಾಥ ಜಾಂತೆ, ಧನರಾಜ ಜಾಂತೆ, ಪ್ರಕಾಶ ದಾಡಗೆ, ಸಂಗಮೇಶ ಹುಡೆ, ಬಲವಂತ ಉಪಾರ, ವೆಂಕಟ ಹುಣಸನಾಳೆ, ರಾಜು ಹಲಗೆ, ಶರಣಪ್ಪ ರಂಜೇರಿ, ವೀರಶಟ್ಟಿ ಭದ್ರಶಟ್ಟಿ, ಜ್ಞಾನೋಬಾ ತೊಗಲೂರೆ ಇದ್ದರು.

## ಸಿಲಿಂಡರ್ ಸ್ಫೋಟ್ ಸ್ಥಳಕ್ಕೆ ಭೇಟಿ ನೀಡಿದ ಸಚಿವ ರಾಮಲಿಂಗಾರೆಡ್ಡಿ



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು:ಆ.15:ಶುಕ್ರವಾರ ಬೆಂಗಳೂರಿನ ಮಧ್ಯಭಾಗದ ವಿಲ್ಸನ್ ಗಾರ್ಡನ್‌ನ ಚಿನ್ನಯ್ಯನಪಾಳ್ಯದಲ್ಲಿ ಸಂಭವಿಸಿದ ಸಿಲಿಂಡರ್ ಸ್ಫೋಟದಲ್ಲಿ 10 ವರ್ಷದ ಮುಬಾರಕ್ ಎಂಬ ಬಾಲಕ ಸಾವಿಗೀಡಾಗಿದ್ದು, ಘಟನೆಯಲ್ಲಿ ಕನಿಷ್ಠ ಒಂಬತ್ತು ಜನರು ಗಾಯಗೊಂಡಿದ್ದು ಸುದ್ದಿ ತಿಳಿದು ಘಟನಾ ಸ್ಥಳಕ್ಕೆ ಭೇಟಿನೀಡಿದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿಯವರು ಸ್ಫೋಟ್‌ದ ಕುರಿತಂತೆ ತನಿಖೆ ನಡೆಸಲಾಗುತ್ತಿದೆ ಎಂದರು. ಇಲ್ಲಿ ತಮ್ಮ ತಂದೆ ಹಾಗೂ

(2ನೇ ಪುಟ ನೋಡಿ)

## ಸಕಲ ಸರಕಾರಿ ಗೌರವಗಳೊಂದಿಗೆ ಡಾ. ಶರಣಬಸವಪ್ಪ ಅಪ್ಪಾ ಪಂಚಭೂತಗಳಲ್ಲಿ ಲೀನ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ;ಆ.15: ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿ ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ ಅವರ ಪಾರ್ಥೀವ ಶರೀರವನ್ನು ಅವರ ತಂದೆ ಹಾಗೂ ಸಂಸ್ಥಾನದ 7ನೇ ಪೀಠಾಧಿಪತಿಗಳಾದ ಲಿಂಗೈಕ್ಯ ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರ ಸಮಾಧಿಯ ಬಲಭಾಗದಲ್ಲಿ ಸಕಲ ಸರಕಾರಿ ಗೌರವಗಳೊಂದಿಗೆ ಅಂತ್ಯಸಂಸ್ಕಾರ ಮಾಡಲಾಯಿತು. ಶರಣಬಸವೇಶ್ವರ ಪುಣ್ಯಕ್ಷೇತ್ರವು ಈ ಪ್ರದೇಶದ ಶೈಕ್ಷಣಿಕ ಸಬಲೀಕರಣಕ್ಕಾಗಿ ಶ್ರಮಿಸಿದ ಈ ಯುಗದ ಅಂತ್ಯಕ್ಕೆ ನಾಂದಿಹಾಡಿದಂತಾಯಿತು.

ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರು ಬೆಂಗಳೂರಿನಿಂದ ಕಲಬುರಗಿಗೆ ವಿಶೇಷ ವಿಮಾನದಲ್ಲಿ ಆಗಮಿಸಿ, ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಜಿಲ್ಲಾಧಿಕಾರಿ ಶ್ರೀಮತಿ ಫೌಜಿಯಾ ತರನ್ನುಮ್ ಹಾಗೂ ಇತರ ಹಿರಿಯ ಅಧಿಕಾರಿಗಳು ಹಾಗೂ ಅನೇಕ ರಾಜಕಾರಣಿಗಳ ಸಮ್ಮುಖದಲ್ಲಿ, ರಾಜ್ಯ ಸರ್ಕಾರದ ಪರವಾಗಿ ಡಾ. ಅಪ್ಪಾಜಿ ಅವರಿಗೆ ನಮಸ್ಕರಿಸಿ ಆಶೀರ್ವಾದ ಪಡೆದು, ಅಪ್ಪಾಜಿಯವರಿಗೆ ಸರಕಾರದ ವತಿಯಿಂದ ಗೌರವ ಸೂಚಕವಾಗಿ ಗಾಳಿಯಲ್ಲಿ 21 ಗುಂಡು ಹಾರಿಸಲಾಯಿತು. ಹಜರತ್ ಖ್ವಾಜಾ ಬಂದನವಾಜ್ ದರ್ಗಾದ ಸಜ್ಜದಾ ನಶೀನ್, ಸೈಯದ್ ಮುಹಮ್ಮದ್ ಅಲಿ ಅಲ್-ಹುಸೇನಿ ಹಾಗೂ ಸಣ್ಣ ಕೈಗಾರಿಕೆಗಳ ರಾಜ್ಯ ಸಚಿವ ಶ್ರೀ ಶರಣಬಸಪ್ಪಗೌಡ ದರ್ಶನಾಪುರ ಸೇರಿದಂತೆ ಅನೇಕ ರಾಜಕೀಯ ಪ್ರಮುಖರು ಅಪ್ಪಾಜಿಯವರಿಗೆ ಪುಷ್ಪ ನಮನ ಸಲ್ಲಿಸಿದರು.

ಡಾ. ಅಪ್ಪಾಜಿಯವರ ಕುಟುಂಬ ಸದಸ್ಯರು, ವಿಶೇಷವಾಗಿ ಅವರ ಪತ್ನಿ ಹಾಗೂ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಚೇರ್‌ಪರ್ಸನ್ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ, ಅವರ ಚಿರಂಜೀವಿ ಹಾಗೂ ಸಂಸ್ಥಾನದ 9ನೇ ಪೀಠಾಧಿಪತಿ ಪೂಜ್ಯ ಚಿರಂಜೀವಿ ದೊಡ್ಡಪ್ಪ ಅಪ್ಪಾಜಿ ಮತ್ತು ಅವರ ಮೂವರು ಹೆಣ್ಣುಮಕ್ಕಳಾದ ಕು. ಶಿವಾನಿ ಎಸ್. ಅಪ್ಪ, ಕು. ಭವಾನಿ ಎಸ್. ಅಪ್ಪ, ಮತ್ತು ಕು. ಮಹೇಶ್ವರಿ ಎಸ್. ಅಪ್ಪ ಅವರು ಸಮಾಧಿ ಸ್ಥಳದಲ್ಲಿ ದುಃಖಿತರಾಗಿ ಕಣ್ಣೀರಿಡುತ್ತಿದ್ದರು. ವೀರಶೈವಲಿಂಗಾಯತ ಮಠಗಳ ಧಾರ್ಮಿಕ ಮುಖ್ಯಸ್ಥರು ಸಮಾಧಿ ಸ್ಥಳದಲ್ಲಿ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿದರು. ಎಲ್ಲಾ ಸಾಂಪ್ರದಾಯಿಕ ಪದ್ಧತಿಗಳ ಪ್ರಕಾರ, ಡಾ. ಅಪ್ಪಾಜಿಯವರಿಗೆ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಕಟ್ಟೋಣ:ಸಚಿವ ತಿಮ್ಮಾಪೂರ

ಶುಕ್ರವಾರ ನಡೆದ 79 ನೇ ಸಾತಂತ್ರ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸಿ, ಪರೇಡ ವೀಕ್ಷಿಸಿ ಮಾತನಾಡಿದ ಸಚಿವರು, ಚಾರಿತ್ರಿಕ ಹಿನ್ನೆಲೆ ಹೊಂದಿರುವ ನಮ್ಮ ಸ್ವಾತಂತ್ರ್ಯ ಹೋರಾಟಕ್ಕೆ ಅನೇಕರ ತ್ಯಾಗವಿದೆ. ಸಾವಿರಾರು ಜನ ಮಹನೀಯರು ಸ್ವಾತಂತ್ರ್ಯ ಪಡೆಯಲು ಹೋರಾಡಿದ್ದಾರೆ. ಅವರ ತ್ಯಾಗ, ಬಲಿದಾನದಿಂದಾಗಿ ನಮಗೆ ಸ್ವಾತಂತ್ರ್ಯ ದೊರಕಿದ್ದು ಅವರೆಲ್ಲರನ್ನು ಸ್ಮರಣೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ರಾಷ್ಟ್ರಧ್ವಜ, ರಾಷ್ಟ್ರಚಿನ್ಹೆ, ರಾಷ್ಟ್ರೀಯ ಲಾಂಛನ, ರಾಷ್ಟ್ರಗೀತೆ, ವಂದೇ ಮಾತರಂ ಸೇರಿ ಎಲ್ಲ ರಾಷ್ಟ್ರೀಯ ಐಕ್ಯತೆಯ ಚಿನ್ಹೆಗಳನ್ನು ಗೌರವಿಸುವುದು ನಮ್ಮ ಆದ್ಯ ಕರ್ತವ್ಯವಾಗಿದ್ದು, ದೇಶದ ಸಾರ್ವಭೌಮತೆಗೆ ಧಕ್ಕೆಯಾಗದಂತೆ ವಿವಿಧತೆಯಲ್ಲಿ ಏಕತೆಯನ್ನು ಸಾಧಿಸಿ ದೇಶಕ್ಕಾಗಿ ತನು, ಮನ ಅರ್ಪಿಸುವ ಪ್ರತಿಜ್ಞೆಗೈಯೋಣ ಎಂದ ಸಚಿವ ತಿಮ್ಮಾಪೂರ, ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿ ಸರಕಾರ ಸದಾ ಸಿದ್ಧವಾಗಿದೆ ಎಂದು ಹೇಳಿದರು.

ಗ್ಯಾರಂಟಿ ಯೋಜನೆಯ ಬಗ್ಗೆ ಪ್ರಸ್ತಾಪಿಸಿದ ಸಚಿವರು, ಗೃಹಲಕ್ಷ್ಮೀ, ಗೃಹಜ್ಯೋತಿ, ಯುವನಿಧಿ, ಶಕ್ತಿ ಯೋಜನೆ ಹಾಗೂ ಅನ್ನಭಾಗ್ಯ ಯೋಜನೆಗಳು ರಾಜ್ಯದ ಜನತೆಯ ಆಶಾಕಿರಣಗಳಾಗಿವೆ. ಕಂದಾಯ, ಆರೋಗ್ಯ, ಕೃಷಿ, ತೋಟಗಾರಿಕೆ, ರೇಷ್ಮೆ ಹಾಗೂ ಅರಣ್ಯ ಇಲಾಖೆಗಳ ಮೂಲಕ ಜಿಲ್ಲೆಯಲ್ಲಿ ಸಾಕಷ್ಟು ಪ್ರಗತಿ ಸಾಧಿಸಲಾಗಿದೆ. ಮಹಿಳಾ ಒಕ್ಕೂಟಗಳ ಬಲವರ್ಧನೆಗೆ ಅನೇಕ ಯೋಜನೆಗಳನ್ನು ಜಾರಿಗೊಳಿಸಿ ಮಹಿಳೆಯರು ಸಬಲತೆ ಸಾಧಿಸಲು ಅನುಕೂಲ ಕಲ್ಪಿಸಲಾಗಿದೆ ಎಂದು ತಿಮ್ಮಾಪೂರ ತಿಳಿಸಿದರು.

ಎನ್.ಆರ್.ಎಲ್.ಎಂ ಯೋಜನೆಯಡಿ ಜಿಲ್ಲೆಯಲ್ಲಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ಉತ್ತಮ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ಒಕ್ಕೂಟಗಳಿಗೆ ನೀಡಲಾಗುವ ರಾಷ್ಟ್ರಮಟ್ಟದ ಆತ್ಮ ನಿರ್ಭರ ಸಂಘಟನಾ ಪ್ರಶಸ್ತಿ ಜಿಲ್ಲೆಯ ಕಟಗೇರಿಯ ಚಾಮುಂಡೇಶ್ವರಿ ಸಂಜೀವಿನಿ ಮಹಿಳಾ ಒಕ್ಕೂಟಕ್ಕೆ ಲಭಿಸಿದ್ದು ಹೆಮ್ಮೆಯ ಸಂಗತಿ. ಬೀಳಗಿ ಮತ್ತು ಇಲಕಲ್ಲ ತಾಲೂಕಿನಲ್ಲಿ ಸಂಜೀವಿನಿ ಸುಫರ್ ಮಾರ್ಕೆಟ್ ತೆರೆಯಲಾಗಿದೆ. ಮಹಿಳಾ ಸಂಘಗಳಿಗೆ ಕೃಷಿಗೆ ಪೂರಕ ಕುರಿ, ಆಡು ಸಾಕಾಣಿಕೆ, ಎರೆಹುಳು ಗೊಬ್ಬರ ತಯಾರಿಕೆ ಚಟುವಟಿಕೆ ಕೈಗೊಳ್ಳಲು ಅನೇಕ ಕಡೆ ಕೇಂದ್ರಗಳನ್ನು ತೆರೆಯಲಾಗಿದೆ. ಹೀಗೆ ಹಲವು ಯೋಜನೆಗಳ ಮೂಲಕ ಮಹಿಳಾ ಶಕ್ತಿಯ ಸದ್ಬಳಕೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಆರ್.ಬಿ.ತಿಮ್ಮಾಪೂರ ಹೇಳಿದರು.

ಪೋಲಿಸ್ ಇಲಾಖೆಯ ಮೂಲಕ ಜಿಲ್ಲೆಯಲ್ಲಿ ಸಾರ್ವಜನಿಕರ ಸುರಕ್ಷತೆ, ಸುಗಮ ಸಂಚಾರಿ ವ್ಯವಸ್ಥೆಗೆ ಹಲವಾರು ವಿನೂತನ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದ್ದು, ಮನೆ ಮನೆಗೆ ಪೋಲಿಸ್ ಎಂಬ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. ಪ್ರವಾಸೋದ್ಯಮ ಉತ್ತೇಜನಕ್ಕೆ 166 ಕೋಟಿ ರೂ.ಗಳ ಯೋಜನೆ ರೂಪಿಸಿ, ಬಾದಾಮಿ, ಐಹೊಳೆ, ಪಟ್ಟದಕಲ್ಲು ಒಳಗೊಂಡು ಉತ್ತರ ಕರ್ನಾಟಕ ಪ್ರವಾಸಿ ವೃತ್ತವನ್ನು ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಅವರು ಹೇಳಿದರು.

ಇದೆಲ್ಲದರ ಮಧ್ಯೆ ಜಿಲ್ಲೆಗೆ ವಿವಿಧ ಕ್ಷೇತ್ರದಲ್ಲಿ ಹಲವಾರು ಪ್ರಶಸ್ತಿ ಬಂದಿರುವುದು ಹೆಮ್ಮೆಯ ಸಂಗತಿ. ಕ್ರೀಡೆ, ಕೈಮಗ್ಗ, ಸಾಹಿತ್ಯಿಕ, ಸಮಾಜ ಸೇವಾ ಕ್ಷೇತ್ರಗಳಲ್ಲಿ ಅನೇಕ ಸಾಧಕರು ಪ್ರಶಸ್ತಿ ಗಳಿಸಿದ್ದಾರೆ. ಈ ದಿಶೆಯಲ್ಲಿ ಜಿಲ್ಲೆಯ ಸರ್ವಾಂಗೀಣ ಪ್ರಗತಿಗೆ ಸರಕಾರ ಕಂಕಣಬದ್ಧವಾಗಿದ್ದು, ಇದಕ್ಕೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದರು.

ಸಮಾಜದಲ್ಲಿರುವ ಅತ್ಯಂತ ದುರ್ಬಲರೂ ಸಹ ಬಲಿಷ್ಠರು ಹೊಂದಿರುವ ಅವಕಾಶಗಳನ್ನು ಪಡೆದಿರಬೇಕು ಎನ್ನುವುದು ಪ್ರಜಾಪ್ರಭುತ್ವದ ಆಶಯ ಎನ್ನುವ ಮಹಾತ್ಮಾಗಾಂಧೀಜಿ ಅವರ ವಾಣಿಯಂತೆ ಸರ್ವರ ಏಳಿಗೆಯೇ ಸರಕಾರದ ಧ್ಯೇಯವಾಗಿದೆ ಎಂದು ಸಚಿವ ತಿಮ್ಮಾಪೂರ ಹೇಳಿದರಲ್ಲದೇ, ಭವ್ಯ ಜಾತ್ಯಾತೀತ ಭಾರತ ದೇಶವನ್ನು ಸಮೃದ್ಧಗೊಳಿಸಲು ಹಾಗೂ ಜಾತಿ, ಭೀತಿಯಿಲ್ಲದ, ಶಾಂತಿ, ಸಮೃದ್ಧಿಯ ನಾಡನ್ನು ಕಟ್ಟಲು ನಾವೆಲ್ಲರೂ ದೀಕ್ಷೆ ತೊಡೋಣ ಎಂದು ಹೇಳಿದರು.

ವಿವಿಧ ಶಾಲಾ ವಿದ್ಯಾರ್ಥಿಗಳಿಂದ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರೇಕ್ಷಕರ ಗಮನ ಸೆಳೆದವು. ಸಮಾರಂಭದಲ್ಲಿ ಪತ್ರಕರ್ತರು ಸೇರಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರನ್ನು ಸನ್ಮಾನಿಸಲಾಯಿತು.

ಸಂಸದ ಪಿ.ಸಿ.ಗದ್ದಿಗೌಡರ, ಶಾಸಕರಾದ ಎಚ್.ವಾಯ್.ಮೇಟಿ, ಹನಮಂತ ನಿರಾಣಿ, ಪಿ.ಎಚ್.ಪೂಜಾರ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಜಿಲ್ಲಾಧಿಕಾರಿ ಸಂಗಪ್ಪ, ಜಿಪಂ ಸಿಇಓ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯೆಲ್, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ ಇದ್ದರು.

**ಸನ್ಮಾನಿತರು**

ಡಾ.ವೈಶಾಲಿ ಮಾನೆ, ಕಟಗೇರಿಯ ಚಾಮುಂಡೇಶ್ವರಿ ಸ್ವಸಹಾಯ ಸಂಘ, ಸಿದ್ದುಬಾ ಮಾಡಿಕ್, ಮಹಾದೇವಿ ಶಿರಬೂರ, ಲಕ್ಷ್ಮಣ ಕಕ್ಕನ್ನವರ, ವೆಂಕಟೇಶ ಮುಖೇ, ಕುಮಾರಿ ಶಿವಾನಿ ನಿಂಬರಗಿ, ಬಸವರಾಜ ಹೊರಡ್ಡಿ, ಬಸವರಾಜ ಸಿಂದಗಿಮಠ, ರಾಜಮಹ್ಮದ ಮದರಿ, ಶಂಕ್ರಮ್ಮ ಬೆಣ್ಣೂರ, ಸಂಗಪ್ಪ ಗೆಣ್ಣೂರ, ಅಭಿಷೇಕ ಪಾಟೀಲ, ಮುಜಫರ ಶಾಲಗಾರ, ಆನಂದಪ್ಪ ಗಾವರವಾಡ, ವಿಶ್ವಶ್ರೀ ಡೊಂಬರ, ಭವಾನಿ ನಿಂಬರಗಿ, ಮಿನಜಾ ಕುರಡಗಿ, ಗಿರಿಮಲ್ಲಪ್ಪ ಪೂಜಾರಿ, ಪ್ರಜ್ವಲ್ ರಾಠೋಡ, ಶಿವಾನಂದ ಪೂಜಾರಿ ಅವರುಗಳನ್ನು ಸನ್ಮಾನಿಸಲಾಯಿತು.

## ದೇಶ ಎಂದಿಗೂ ಮರೆಯಲಾರದು: ಸಚಿವ ಈಶ್ವರ ಬಿ.ಖಂಡ್ರೆ

ಕಾರ್ಯಕ್ರಮದಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

1947 ಆಗಸ್ಟ್ 15 ರಂದು ಬ್ರಿಟಿಷರ ದಾಸ್ಯದ ಮುಕ್ತಿ ಪಡೆದು, ಹೊಸ ಮನ್ವಂತರಕ್ಕೆ ನಾಂದಿ ಹಾಡಿದ ಐತಿಹಾಸಿಕ ದಿನವಾಗಿದೆ. ಭಾರತದ ಸ್ವಾತಂತ್ರ್ಯ ಸಂಗ್ರಾಮದ ಇತಿಹಾಸ ಅತ್ಯಂತ ರೋಚಕವಾಗಿದೆ. ಸತ್ಯ, ಶಾಂತಿ, ಅಹಿಂಸೆಯ ಸಾತ್ವಿಕ ಹೋರಾಟದಿಂದ ಸ್ವಾತಂತ್ರ್ಯ ಇಡೀ ವಿಶ್ವಕ್ಕೆ ಮಾದರಿಯಾಗಿದೆ ಎಂದರು. 1857ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದಿಂದ 1947 ರವರೆಗೆ ಅನೇಕ ಹೋರಾಟಗಳು, ಚಳುವಳಿಗಳು, ಸತ್ಯಾಗ್ರಹಗಳು ನಡೆದವು. ಸಿಪಾಯಿಗಳು, ಮಂದಗಾಮಿಗಳು, ತಿವ್ರಗಾಮಿಗಳು, ಕ್ರಾಂತಿಕಾರಿಗಳು ಮುಂತಾದವರು ಹೋರಾಟದ ಪ್ರತಿಫಲವಾಗಿ ನಮಗೆ ಸ್ವಾತಂತ್ರ್ಯ ದೊರಕಿದೆ ಎಂದರು.

ಮಹಾತ್ಮಾ ಗಾಂಧಿ, ಸುಭಾಷ್ ಚಂದ್ರ ಬೋಸ್, ಜವಾಹರ ಲಾಲ್ ನೆಹರು, ಸರ್ದಾರ್ ವಲ್ಲಭಭಾಯ್ ಪಟೇಲ್, ಸರೋಜನಿ ನಾಯ್ಡು, ಡಾ.ಬಾಬಾ ಸಾಹೇಬ್ ಅಂಬೇಡ್ಕರ್, ಬಾಲಗಂಗಾಧರ ತಿಲಕ್ ಮೊದಲಾದವರು ಈ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ್ದಾರೆ. ಅನೇಕ ಹೋರಾಟಗಾರರು ತಮ್ಮ ಯೌವನವನ್ನು ಜೈಲಿನಲ್ಲಿ ಕಳೆದಿದ್ದಾರೆ. 1857 ಸ್ವಾತಂತ್ರ್ಯ ಹೋರಾಟಕ್ಕೂ ಮೊದಲು ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಸಂಗೊಳ್ಳಿರಾಯಣ್ಣ ಬ್ರಿಟಿಷರ ವಿರುದ್ಧ ಹೋರಾಟ ಮಾಡಿದರು ಹಾಗೂ ಇಂದು ಸಂಗೊಳ್ಳಿರಾಯಣ್ಣ ಹುಟ್ಟಿದ ದಿನ ಕೂಡ ಆಗಿದೆ ಎಂದರು. ಬೀದರ ಜಿಲ್ಲೆಯಲ್ಲಿ ಕೂಡ ಹಲವಾರು ಹೋರಾಟಗಾರರು ಸ್ವಾತಂತ್ರ್ಯಕ್ಕಾಗಿ ಹೋರಾಡಿದ್ದಾರೆ. ಪ್ರಭುರಾವ ಕಂಬಳಿವಾಲೆ, ಆರ್.ವಿ.ಬಿಡಪ್ಪ, ರಾಮಚಂದ್ರ ವೀರಪ್ಪ ಹಾಗೂ ತಮ್ಮ ತಂದೆಯವರಾದ ಭಿಮಣ್ಣ ಖಂಡ್ರೆ ಮೊದಲಾದವರು ಸ್ವಾತಂತ್ರ ?? ಸಂಗ್ರಾಮದಲ್ಲಿ ಸಕ್ರಿಯವಾಗಿ ಭಾಗಿಯಾಗಿದ್ದರು. ಅವರೆಲ್ಲರಿಗೂ ನಾನು ಈ ಸಂದರ್ಭದಲ್ಲಿ ಭಕ್ತಿಪೂರ್ವಕ ನಮನಗಳನ್ನು ಸಲ್ಲಿಸುತ್ತೇನೆ.

ಬೀದರ ಜಿಲ್ಲೆ ಸರ್ವ ಜನಾಂಗದ ಶಾಂತಿಯ ತೋಟವಾಗಿದೆ. ಸೋದರತ್ವದ, ಭಾವೈಕ್ಯತೆಯ ಜೀವನ ಈ ಜಿಲ್ಲೆಯಲ್ಲಿ ಕಾಣಬಹುದು ಹಾಗೂ ಬಸವಾದಿ ಶರಣರ ನಾಡು. ಜಗತ್ತಿನ ಮೊದಲ ಪ್ರಜಾಪ್ರಭುತ್ವದ ಸಂಸತ್ತು ಎಂದು ಕರೆಸಿಕೊಳ್ಳುವ ಅನುಭವ ಮಂಟಪ ನಮ್ಮ ಜಿಲ್ಲೆಯಲ್ಲಿದೆ. ಇಲ್ಲಿ ಹಲವಾರು ಧರ್ಮ, ಜಾತಿ, ಜನಾಂಗಗಳಿದ್ದರು ನಾವೆಲ್ಲರೂ ಸಹೋದರರಂತೆ ಬಾಳುತ್ತಿದ್ದೇವೆ ಎಂದು ಹೇಳಿದರು.

ಬಂಧುಗಳೇ ದೇಶ 79ನೇ ಸ್ವಾತಂತ್ರ್ಯ ದಿನವನ್ನು ಸಂಭ್ರಮ, ಸಡಗರದಿಂದ ಆಚರಿಸುತ್ತಿರುವ ಈ ಸಂದರ್ಭದಲ್ಲಿ ಬೀದರ್ ಜಿಲ್ಲೆಯ ವಿವಿಧ ಇಲಾಖೆಯಗಳ ಸಾಧನೆಯ ಸಿಂಹಾವಲೋಕನ ಮತ್ತು ಭವಿಷ್ಯದ ಯೋಜನೆಗಳ ಬಗ್ಗೆ ಪಕ್ಷಿನೋಟ ಬೀರಲು ನಾನು ಇಚ್ಛಿಸುತ್ತೇನೆ.ಸರ್ಕಾರದ ಮಹತ್ವಕಾಂಕ್ಷಿ 5 ಗ್ಯಾರಂಟಿ ಯೋಜನೆಗಳಾದ ಶಕ್ತಿ ಯೋಜನೆ, ಗೃಹ ಜ್ಯೋತಿ, ಗೃಹಲಕ್ಷ್ಮೀ, ಅನ್ನಭಾಗ್ಯ, ಯುವನಿಧಿ ಯೋಜನೆಗಳು ಈಗಾಗಲೇ ಜಾರಿ ಮಾಡಲಾಗಿದ್ದು, ದೇಶಕ್ಕೆ ಮಾದರಿಯಾರುವ ಗ್ಯಾರಂಟಿ ಯೋಜನೆಗಳು ಜನರ ಜೀವನ ಮಟ್ಟ ಸುಧಾರಿಸುತ್ತಿವೆ ಮತ್ತು ಮಹಿಳಾ ಸಬಲೀಕರಣಕ್ಕೆ ನಾಂದಿ ಹಾಡಿವೆ. ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳಿಗೆ 2300 ಕೋಟಿ ಬಳಕೆಯಿಂದಾಗಿ ಮತ್ತು ಅನ್ನಭಾಗ್ಯ ಯೋಜನೆಯಡಿ 11 ಲಕ್ಷ ಜನರಿಗೆ ಆಹಾರ ಧಾನ್ಯ ನೀಡಿ ಹಸಿವು ಮುಕ್ತ ಜಿಲ್ಲೆಯನ್ನಾಗಿ ಮಾಡಲಾಗಿದೆ ಹಾಗೂ ಗೃಹ ಲಕ್ಷ್ಮೀ ಯೋಜನೆಯಡಿ 3 ಲಕ್ಷ ಹೆಣ್ಣು ಮಕ್ಕಳಿಗೆ ಮಾಹೆ 2000 ರೂಪಾಯಿ ಅಂತೆ ಡಿ.ಬಿ.ಟಿ ಮೂಲಕ ಹಣ ವರ್ಗಾವಣೆ ಮಾಡಲಾಗಿದೆ.ಜಿಲ್ಲೆಯಲ್ಲಿ ತಾವು ಸಚಿವರಾದ ಮೇಲೆ ಹಸಿರು ಹೊದುಕೆ ಹೆಚ್ಚಿಸಲು 35 ಲಕ್ಷ ಸಸಿಗಳನ್ನು ನೆಡಲಾಗಿದೆ ಹಾಗೂ ಕೆ.ಕೆ.ಆರ್.ಡಿ.ಬಿ ಯಿಂದ ಕಲ್ಯಾಣ ಕರ್ನಾಟಕದ ಐದು ಜಿಲ್ಲೆಗಳಾದ ಬೀದರ, ಕಲಬುರ್ಗಿ, ಯಾದಗಿರಿ,

ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳ ಹಸಿರು ಹೊದುಕೆ ಹೆಚ್ಚಿಸಲು 50 ಕೋಟಿ ರೂಪಾಯಿ ಅನುದಾನ ಮೀಸಲಿಡಲಾಗಿದೆ.ಜಿಲ್ಲೆಯಲ್ಲಿ ಬರ್ಡ್ ಪಾರ್ಕ್, ಇಕೋ ಪಾರ್ಕ್, ಇಕೋ ಟೂರಿಸಂ ಪಾರ್ಕ್ ಮುಂತಾದವುಗಳನ್ನು ಕೈಗೊಳ್ಳಲಾಗಿದೆ ಎಂದರು.ಜಿಲ್ಲೆಯಲ್ಲಿ 36 ಕೋಟಿ ವೆಚ್ಚದಲ್ಲಿ ಕ್ಯಾನ್ಸರ್ ಸೆಂಟರ್ ಆರಂಭ ಮಾಡಲಾಗುವುದು ಮತ್ತು ಕ್ಯಾತ್ ಲ್ಯಾಬ್ ಗೆ ಆದಷ್ಟು ಬೇಗ ಕಾರ್ಡಿಯಾಲಾಜಿಸ್ಟ್ ಮತ್ತು ಟೆಕ್ನಿಷಿಯನ್ ಗಳನ್ನು ನೇಮಿಸಿ ಶೀಘ್ರದಲ್ಲೇ ಆರಂಭ ಮಾಡಲಾಗುವುದು ಎಂದರು. 48 ಕೋಟಿ ವೆಚ್ಚದಲ್ಲಿ ಜಿಲ್ಲಾಡಳಿತ ಸಂಕೀರ್ಣ 18 ತಿಂಗಳ ಒಳಗೆ ಪೂರ್ಣಗೊಳ್ಳಲಿದೆ ಹಾಗೂ ಚಿಟಗುಪ್ಪಾ, ಕಮಲನಗರ ಮತ್ತು ಹುಲಸುರನಲ್ಲಿ ಹೊಸ ಪ್ರಜಾ ಸೌಧ ನಿರ್ಮಾಣ ಮಾಡಲಾಗುವುದು ಎಂದರು.

ಒಂದು ವರ್ಷದೊಳಗೆ ಶಾಲೆಗಳ ಶೀತಲ ಅವಸ್ಥೆಯ ಕೋಣೆಗಳು ಇಲ್ಲದಂತೆ ಮಾಡಲಾಗುವುದು ಮತ್ತು ಖಾಸಗಿ ಶಾಲೆಗಳಿಗಿಂತ ಉತ್ತಮ ಶಿಕ್ಷಣ ಮತ್ತು ಶಾಲಾಗಳ ನಿರ್ಮಾಣ ಮಾಡಲಾಗುವುದು ಹಾಗೂ ಖಾನಾಪುರದಲ್ಲಿ 31 ಕೋಟಿ ವೆಚ್ಚದಲ್ಲಿ ಕಾರ್ಮಿಕರ ಮಕ್ಕಳಿಗಾಗಿ ವಸತಿ ಶಾಲೆ ನಿರ್ಮಾಣ ಮಾಡಲಾಗುವುದು. ನಿರಾವರಿ ಯೋಜನೆಯಡಿ ಕೆರೆಗಳ ಪುನಶ್ಚೇತನ ಮತ್ತು ಗೋದಾವರಿ ನದಿಯ ಮುಖಜ ವ್ಯವಸ್ಥೆ ನೀರನ್ನು ಬಳಸಿಕೊಂಡು ಕೃಷಿಗೆ ಮತ್ತು ಕುಡಿಯಲು ನೀರು ಬಳಸಿಕೊಳ್ಳಲಾಗುವುದು. ರಾಜ್ಯದ ಹಿತ, ಉತ್ತಮ ಆಡಳಿತ, ಜನರ ಜೀವನ ನಮ್ಮ ಗುರಿ. ಈ ನಿಟ್ಟಿನಲ್ಲಿ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ. ಯುವಶಕ್ತಿಯು ರಾಷ್ಟದ ಶಕ್ತಿಯಾಗಿದ್ದು ದೇಶ ಅಭಿವೃದ್ಧಿಗೆ ಮತ್ತು ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಶಾಲೆಗಳ ಮಕ್ಕಳಿಂದ ಸ್ವಾತಂತ್ರ ?? ದಿನಾಚರಣೆ ಕುರಿತು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.ಈ ಸಂದರ್ಭದಲ್ಲಿ ಸಂಸದ ಸಾಗರ ಈಶ್ವರ ಖಂಡ್ರೆ, ಬೀದರ ದಕ್ಷಿಣ ಶಾಸಕ ಡಾ. ಶೈಲೇಂದ್ರ ಕೆ.ಬೆಲ್ದಾಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ಬಿ. ನಾರಾಯಣ, ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ಬೀದರ ನಗರ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಅರಣ್ಯ ಉಪ ಸಂರಕ್ಷಣಾಧಿಕಾರಿ ಆಶೀಶ್ ರೆಡ್ಡಿ, ಪ್ರೊಬಿಷನರಿ ಐಎಎಸ್ ಅಧಿಕಾರಿ ರಮ್ಯಾ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಸ್ಮರಣೀಯ:ಸಚಿವ ಶರಣಬಸಪ್ಪ ದರ್ಶನಾಪುರ

ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ ಅವರು ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು 79ನೇ ಸ್ವಾತಂತ್ರ್ಯೋತ್ಸವ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ. ವಿವಿಧ ಕವಾಯತು ಪಡೆಗಳಿಂದ ಗೌರವ ವಂದನೆ ಸ್ವೀಕರಿಸಿ ಅವರು ಮಾತನಾಡಿದರು.

"ಮಾಡು ಇಲ್ಲವೆ ಮಡಿ",ಎಂದು ಹೇಳಿದ ಮಹಾತ್ಮ ಗಾಂಧೀಜಿ, ಸ್ವಾತಂತ್ರ್ಯವೇ "ನನ್ನ ಜನ್ಮಸಿದ್ಧ ಹಕ್ಕು" ಎಂದು ಗುಡುಗಿದ ಲೋಕಮಾನ್ಯ ಬಾಲಗಂಗಾಧರ ತಿಲಕ್,"ನೀವು ನನಗೆ ರಕ್ತ ಕೊಡಿ, ನಾನು ನಿಮಗೆ ಸ್ವಾತಂತ್ರ್ಯ ಕೊಡಿಸುವೆ" ಎಂದು ಘರ್ಜಿಸಿದ ಸುಭಾಷ್ ಚಂದ್ರ ಬೋಸ್, ಜವಾಹರಲಾಲ್ ನೆಹರು,ಡಾ..ಬಿ.ಆರ್.ಅಂಬೇಡ್ಕರ್, ಮೌಲಾನ ಆಜಾದ್, ಸರ್ದಾರ್ ವಲ್ಲಭಭಾಯ್ ಪಟೇಲ್,ಭಗತ್ ಸಿಂಗ್ ಚಂದ್ರ ಶೇಖರ್ ಆಜಾದ್,ರಾಣಿ ಕಿತ್ತೂರು ಚೆನ್ನಮ್ಮ, ಸಂಗೊಳ್ಳಿ ರಾಯಣ್ಣ,ಸುರಪುರದ ರಾಜಾ ವೆಂಕಟಪ್ಪ ನಾಯಕ ಸೇರಿದಂತೆ ಹಲವು ಹೋರಾಟಗಾರರ ತ್ಯಾಗ,ಬಲಿದಾನಗಳಿಗೆ ಶ್ರದ್ಧಾಪೂರ್ವಕವಾಗಿ ನಮಿಸುವುದಾಗಿ ತಿಳಿಸಿದರು.

ಆಧುನಿಕ ಭಾರತದ ನಿರ್ಮಾತೃ ಮೊದಲ ಪ್ರಧಾನಿ ಜವಾಹರಲಾಲ್ ನೆಹರೂ ಅವರು 1947ರ ಆಗಸ್ಟ್ 14 ರಂದು ಮಾಡಿದ ಭಾಷಣ ಸ್ಮರಣೀಯವಾಗಿದೆ. ಪಂಚವಾರ್ಷಿಕ ಯೋಜನೆಗಳ ಮೂಲಕ ಬೆಲೆ ತುಂಬಿದ್ದ

ನವಭಾರತ ನಿರ್ಮಾಣದ ಅವರ ಸಂಕಲ್ಪದಂತೆ ರಾಜ್ಯ ಸರ್ಕಾರವು ಕೂಡ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ, ಬಡ ಎಲ್ಲ ವರ್ಗದ ಜನರಲ್ಲಿ ಶಕ್ತಿ ತುಂಬಿದೆ.ಅಭಿವೃದ್ಧಿಗೆ ಒತ್ತು ನೀಡಿದೆ ಎಂದು ಹೇಳಿದರು.

ಸಂವಿಧಾನದ ತಿದ್ದುಪಡಿ ಕಲಂ 371(ಜೆ) ಮೂಲಕ ಕಲ್ಯಾಣ ಕರ್ನಾಟಕ ಕ್ಕೆ 5000ಕೋ.ರೂಗಳನ್ನು ಒದಗಿಸಿದೆ.ಶಿಕ್ಷಣ,ಆರೋಗ್ಯ, ನೀರಾವರಿ ,ಉದ್ಯೋಗ, ಪ್ರವಾಸೋದ್ಯಮಕ್ಕೆ ಪ್ರಥಮ ಆದ್ಯತೆ ನೀಡಿದೆ.ಇತ್ತೀಚೆಗೆ ಆರೋಗ್ಯ ಅವಿಷ್ಕಾರ ಯೋಜನೆಗೂ ಚಾಲನೆ ನೀಡಿದೆ.

ವಡಗೇರಾ ಕೊನೆಯ ಭಾಗದಲ್ಲಿ ನೀರಾವರಿ ಕ್ಷೇತ್ರಕ್ಕೆ 200ಕೋ.ರೂ ಒದಗಿಸಿದೆ. ಹೊಸ ತಾಲೂಕುಗಳಾದ ಗುರುಮಠಕಲ್,ವಡಗೇರಾ, ಹುಣಸಗಿಗಳಿಗೆ ಪ್ರಜಾಸೌಧ ನಿರ್ಮಾಣಕ್ಕೆ ಗಮನ ನೀಡಿ ಜನಸ್ನೇಹಿ ಆಡಳಿತ ಸರ್ಕಾರ ನೀಡುತ್ತಿದೆ ಎಂದು ಹೇಳಿದರು.

ದೇಶಕ್ಕೆ ಸ್ವಾತಂತ್ರ್ಯ ಸಿಕ್ಕರೂ ಹೈದ್ರಾಬಾದ್ ಕರ್ನಾಟಕ ಭಾಗಕ್ಕೆ ವಿಳಂಬವಾಗಿ ಸ್ವಾತಂತ್ರ್ಯ ದೊರೆತಿದೆ.ಇದಕ್ಕಾಗಿ ಹೋರಾಡಿದ ಸರ್ದಾರ್ ವಲ್ಲಭಭಾಯ್ ಪಟೇಲ್, ಇನ್ನಿತರ ಹೋರಾಟ ಗಾರರನ್ನು ಸ್ಮರಿಸಿ ನಮಿಸುವುದಾಗಿ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು. ಡಾ.ಅಬ್ದುಲ್ ಕಲಾಂ ಅಜಾದ್ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.ಐವರು ಅರ್ಚಕರಿಗೆ ಅನುದಾನ ಚೆಕ್ ವಿತರಿಸಲಾಯಿತು. ರೈತರಿಗೆ ತಾಳೆ ಬೆಳೆ ಸಸಿ ವಿತರಣೆ ಮಾಡಲಾಯಿತು.

ನಗರ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ,ನಗರಸಭೆ ಅಧ್ಯಕ್ಷ ಲಲಿತಾ ಅನಪುರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀ ಬಾಬುರಾವ್ ಕಾಡ್ಲೂರ್, ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್,ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ್ ಉಪಸ್ಥಿತರಿದ್ದರು.

# ಪ್ರಿಯಾಂಕ್ ರಿಂದ ರಾಷ್ಟ್ರಧ್ವಜಾರೋಹಣ

ತರಬೇತಿ ಶಾಲೆ, ಗೃಹ ರಕ್ಷಕ ದಳ, ಅರಣ್ಯ ಇಲಾಖೆ, ಅಗ್ನಿಶಾಮಕ

ಮತ್ತು ತುರ್ತು ಸೇವೆಗಳು, 32ನೇ ಎನ್.ಸಿಮಸಿ. ಬಟಾಲಿಯನ್ ಪಡೆ, ಕೆ.ಸಿ.ಇ.ಡಿ.ಟಿ ಪ್ರೌಢ ಶಾಲೆ, ಭೋಸ್ ಪ್ರಾಥಮಿಕ ಶಾಲೆ, ಕಸ್ತೂರಬಾ ಗಾಂಧಿ ಬಾಲಕೀಯರ ವಸತಿ ಶಾಲೆ ಹೀಗೆ 16 ತುಕಡಿಗಳು ರಾಷ್ಟ್ರಧ್ವಜಕ್ಕೆ ಮತ್ತು ಅತಿಥಿ ಗಣ್ಯರಿಗೆ ಗೌರವ ವಂದನೆ ಸಲ್ಲಿಸಿದರು.

ಅಪ್ಪಾಜಿ ಲಿಂಗೈಕ್ಯ, ಮೌನಾಚರಣೆ: ಕಲಬುರಗಿ ಶರಣಬಸವೇಶ್ವರ ಸಂಸ್ಥಾನದ 8ನೇ ಪೀಠಾಧಿಪತಿಯಾಗಿದ್ದ ಪೂಜ್ಯ ಶ್ರೀ ಡಾ.ಶರಣಬಸವಪ್ಪ ಅಪ್ಪಾಜಿ ಅವರು ಗುರುವಾರ ರಾತ್ರಿ

ಲಿಂಗೈಕ್ಯರಾದ ಹಿನ್ನೆಲೆಯಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರು ನಿಗದಿಯಂತೆ ತಮ್ಮ ಭಾಷಣ ಮಾಡಲಿಲ್ಲ. ಪೂಜ್ಯರ ಗೌರವಾರ್ಥವಾಗಿ ಒಂದು ನಿಮಿಷ ಮೌನಾಚರಣೆ ಕೈಗೊಳ್ಳುವ ಮೂಲಕ ಜ್ಞಾನ ಭಂಡಾರಿಯ ಆತ್ಮಕ್ಕೆ ಶಾಂತಿ ಕೋರಲಾಯಿತು.

ಕಾರ್ಯಕ್ರಮದಲ್ಲಿ ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ, ಕಲಬುರಗಿ ಉತ್ತರ ಶಾಸಕಿ ಮತ್ತು ಕರ್ನಾಟಕ ರೇಷ್ಮೆ ಅಭಿವೃದ್ಧಿ ನಿಯಮಿತದ ಅಧ್ಯಕ್ಷೆ ಕನೀಜ್ ಫಾತಿಮಾ,

ಶ್ರೀ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಬಾಬುರಾವ ಚಿಂಚನಸೂರು, ವಿಧಾನ ಪರಿಷತ್ ಶಾಸಕರಾದ ತಿಪ್ಪಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ, ಮಹಾನಗರ ಪಾಲಿಕೆ ಮೇಯರ್ ವರ್ಷಾ ಜಾನೆ, ಉಪ ಮೇಯರ್ ತೃಪ್ತಿ ಎಸ್.ಅಲ್ಲದ್ (ಲಾಖೆ), ಕಲಬುರಗಿ

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಪ್ರಾದೇಶಿಕ ಆಯುಕ್ತೆ ಜಹೀರಾ ನಸ್ಸೀಮ್, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಶಾಂತನು

ಸಿನ್ಹಾ, ಕೆ.ಕೆ.ಆರ್.ಡಿ.ಬಿ. ಮಂಡಳಿ ಕಾರ್ಯದರ್ಶಿ ನಲಿನ್ ಅತುಲ್, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ.ಅಡ್ಡೂರು ಶ್ರೀನಿವಾಸಲು,

ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಕೆ.ಕೆ.ಆರ್.ಟಿ.ಸಿ. ವ್ಯವಸ್ಥಾಪಕ ನಿರ್ದೇಶಕಿ ಡಾ.ಬಿ.ಸುಶೀಲಾ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಹೆಚ್ಚುವರಿ ಎಸ್.ಪಿ. ಮಹೇಶ ಮೇಘಣ್ಣನವರ್ ಸೇರಿದಂತೆ ಅಧಿಕಾರಿಗಳು, ಸಾರ್ವಜನಿಕರು, ಶಾಲಾ ಮಕ್ಕಳು ಇದ್ದರು.

ಸತ್ಯಂ ಪಿ.ಯು.ಕಾಲೇಜಿನ ಪ್ರಾಚಾರ್ಯ ಬಿ.ಎಚ್.ನಿರಗುಡಿ ಮತ್ತು ಉದನೂರ ಸರ್ಕಾರಿ ಪ್ರೌಢ ಶಾಲೆಯ ಶಿಕ್ಷಕಿ ಸುಜಾತಾ ಪಾಟೀಲ ಅವರು ನಿರೂಪಿಸಿದರು.

# ಕೊಡುಗೆ ಅಪಾರ

ಅಪಾರ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಹೇಳಿದರು.ಸ್ವಾತಂತ್ರ್ಯ ದಿನಾಚರಣೆ ನಿಮಿತ್ತ ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಆಯೋಜಿಸಿದ್ದ ಸಂವಿಧಾನ ರಕ್ಷಿಸಿ ಪ್ರಜಾಪ್ರಭುತ್ವ ಉಳಿಸಿ ಪಥ ಸಂಚಲನ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರು ಸೇರಿದಂರೆ ನೆಹರು, ಸರ್ದಾರ್ ವಲ್ಲಭಭಾಯಿ, ಇಂದಿರಾ ಗಾಂಧಿ ಹೀಗೆ ಅನೇಕ ಮಹನೀಯರು ತಮ್ಮ ಪ್ರಾಣದ ಹಂಗು ತೊರೆದು ದೇಶದ ಬೆಳವಣಿಗೆಗೆ ನಿಸ್ವಾರ್ಥ ಸೇವೆ ಸಲ್ಲಿಸಿದ್ದಾರೆ. ಹೀಗಾಗಿ ಇಂದಿನ ಯುವ ಪೀಳಿಗೆಗಳು ಕಾಂಗ್ರೆಸ್ ಕೊಡುಗೆಯ ಬಗ್ಗೆ ಅರಿತುಕೊಂಡ ಸಂವಿಧಾನ ರಕ್ಷಣೆಗೆ ಕೈಜೋಡಿಸಬೇಕು ಎಂದು ತಿಳಿಸಿದರು.

ರಾಜ್ಯ ಸರಕಾರದಿಂದ ವಿಧಾನ ಸಭಾ ಕ್ಷೇತ್ರಗಳ ಅಭಿವೃದ್ಧಿಗೆ 20 ಕೋಟಿ ಅನುದಾನ ಬರುತ್ತಿತ್ತು. ಆದರೆ ಇದೀಗ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರದಲ್ಲಿ ವಿಧಾನ ಸಭಾ ಕ್ಷೇತ್ರಗಳಿಗೆ 80 ಕೋಟಿಗೂ ಹೆಚ್ಚಿನ ಅನುದಾನ ಬರುತ್ತಿದ್ದು, ಹುಮನಾಬಾದ ಮತಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳ ಮೇಲೆ ಜನಸಾಮಾನ್ಯರು ಕೂಡಾ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಫ್ಸರಮಿಯ, ಗ್ರಾಮೀಣ ಕಾಂಗ್ರೆಸ್ ಅಧ್ಯಕ್ಷ ಓಂಕಾರ ತುಂಬಾ, ಯುವ ಕಾಂಗ್ರೆಸ್ ಅಧ್ಯಕ್ಷ ಉಮೇಶ ಜಮಗಿ, ಪ್ರಮುಖರಾದ ಲಕ್ಷ್ಮಣರಾವ ಬುಳ್ಳಾ, ಸಂಭಾಜಿ ಪಾಟೀಲ್ ರಮೇಶ ಡಾಕುಳಗಿ, ಬಾಬು ಟೈಗರ್, ಶ್ರೀಮಂತ ಪಾಟೀಲ್, ಉಮೇಶ ಕುಲಕರ್ಣಿ, ಕೇಶವರಾವ ತಳಘಟ್ಕರ್, ಕೇಶಪ್ಪ ಬಿರಾದಾರ, ಸೈಯದ್ ಯಾಸೀನ್, ಜೈರಾಜ ವೈದ್ಯ, ಶಿವಕುಮಾರ ಬೆಳಕೇರಾ, ವಿಜಯಕುಮಾರ ನಾತೆ, ಸುರೇಶ ಘಾಂಗ್ರೆ, ಸಚೀನ್ ಕಲ್ಲೂರ್ ಸೇರಿ ಅನೇಕರಿದ್ದರು.

# ಪ್ರಧಾನಿ ಘೋಷಣೆ

ಶೇ.28 ಜಿಎಸ್‌ಟಿ ಸ್ಲ್ಯಾಬ್‌ಗಳಿವೆ. ದೇಶದ ಜನರ ಖರೀದಿ ಶಕ್ತಿಯನ್ನು ಹೆಚ್ಚಿಸುವ ಗುರಿಯೊಂದಿಗೆ, ಕೇಂದ್ರ ಸರ್ಕಾರವು ವಿವಿಧ ವರ್ಗಗಳ ಸರಕುಗಳು, ಉತ್ಪನ್ನಗಳು ಮತ್ತು ಸೇವೆಗಳ ಮೇಲಿನ ಜಿಎಸ್‌ಟಿಯನ್ನು ಕಡಿಮೆ ಮಾಡುವತ್ತ ಕ್ರಮಗಳನ್ನು ತೆಗೆದುಕೊಳ್ಳುವ ಸಾಧ್ಯತೆಯಿದೆ.

ಆರ್‌ಎಸ್‌ಎಸ್ ನ 100 ವರ್ಷ ಸ್ಮರಿಸಿದ ಪ್ರಧಾನಿ:

ರಾಷ್ಟ್ರೀಯ ಸ್ವಯಂಸೇವಕ ಸಂಘದ 100 ವರ್ಷಗಳನ್ನು "ವಿಶ್ವದ ಅತಿದೊಡ್ಡ ಎನ್‌ಜಿಒ"ದ "ಅತ್ಯಂತ ಹೆಮ್ಮೆಯ ಮತ್ತು ಅದ್ಭುತ" ಪ್ರಯಾಣ ಎಂದು ಶ್ಲಾಘಿಸಿದರು ಮತ್ತು ರಾಷ್ಟ್ರಕ್ಕೆ ಅವರ ಸಮರ್ಪಿತ ಸೇವೆಗಾಗಿ ಅದರ ಎಲ್ಲಾ ಸ್ವಯಂಸೇವಕರಿಗೆ ನಮನ ಸಲ್ಲಿಸಿದರು.

"ಇಂದು ನಾನು ಬಹಳ ಹೆಮ್ಮೆಯಿಂದ ಒಂದು ವಿಷಯವನ್ನು ಉಲ್ಲೇಖಿಸಲು ಬಯಸುತ್ತೇನೆ, 100 ವರ್ಷಗಳ ಹಿಂದೆ ಒಂದು ಸಂಸ್ಥೆ ಹುಟ್ಟಿಕೊಂಡಿತು – ರಾಷ್ಟ್ರೀಯ ಸ್ವಯಂಸೇವಕ ಸಂಘ. ಅದರ 100 ವರ್ಷಗಳ ರಾಷ್ಟ್ರೀಯ ಸೇವೆಯು ಬಹಳ ಹೆಮ್ಮೆಯ ಮತ್ತು ಅದ್ಭುತ ಪುಟವಾಗಿದೆ" ಎಂದು ಹಿಂದೆ ಆರ್‌ಎಸ್‌ಎಸ್ ಪ್ರಚಾರಕರಾಗಿದ್ದ ಮೋದಿ ಹೇಳಿದರು.

ಕಳೆದ 100 ವರ್ಷಗಳಿಂದ, ಆರ್‌ಎಸ್‌ಎಸ್ ಸ್ವಯಂಸೇವಕರು (ಸ್ವಯಂಸೇವಕರು) 'ಮಾತೃಭೂಮಿ' (ಮಾತೃಭೂಮಿ) ಯ ಕಲ್ಯಾಣಕ್ಕಾಗಿ 'ವ್ಯಕ್ತಿ ನಿರ್ಮಾಣ' (ಪಾತ್ರ ಅಭಿವೃದ್ಧಿ) ಮತ್ತು 'ರಾಷ್ಟ್ರ ನಿರ್ಮಾಣ' (ರಾಷ್ಟ್ರ ನಿರ್ಮಾಣ) ದ ಸಂಕಲ್ಪವನ್ನು ಪೂರೈಸಲು ತಮ್ಮ ಜೀವನವನ್ನು ಮುಡಿಪಾಗಿಡುತ್ತಿದ್ದಾರೆ ಎಂದು ಅವರು ಹೇಳಿದರು.

"ಇಂದು ಕೆಂಪು ಕೋಟೆಯ ಕೋಟೆಯಿಂದ, ಈ 100 ವರ್ಷಗಳ ರಾಷ್ಟ್ರೀಯ ಸೇವೆಗೆ ಕೊಡುಗೆ ನೀಡಿದ ಎಲ್ಲಾ ಸ್ವಯಂಸೇವಕರನ್ನು ನಾನು ಗೌರವದಿಂದ ಸ್ಮರಿಸುತ್ತೇನೆ" ಎಂದು ಅವರು ಹೇಳಿದರು.

ಸೇವೆ, ಸಮರ್ಪಣೆ, ಸಂಘಟನೆ ಮತ್ತು ಅಪ್ರತಿಮ ಶಿಸ್ತು ವಿಶ್ವದ ಅತಿದೊಡ್ಡ ಸರ್ಕಾರೇತರ ಸಂಸ್ಥೆ (ಎನ್‌ಜಿಒ) ಆರ್‌ಎಸ್‌ಎಸ್‌ನ ಗುರುತು ಎಂದು ಪ್ರಧಾನಿ ಹೇಳಿದರು.

ಆರ್‌ಎಸ್‌ಎಸ್‌ನ 100 ವರ್ಷಗಳ "ಸಮರ್ಪಣ ಮತ್ತು ಅದ್ಭುತ" ಪ್ರಯಾಣದ ಬಗ್ಗೆ ದೇಶವು ಹೆಮ್ಮೆಪಡುತ್ತದೆ ಎಂದು ಅವರು ಹೇಳಿದರು, "ಇದು ನಮಗೆ ಸ್ಫೂರ್ತಿ ನೀಡುತ್ತದೆ" ಎಂದು ಹೇಳಿದರು.

# ಅಪ್ಪಾ ಪಂಚಭೂತಗಳಲ್ಲಿ ಲೀನ

ಐದು ಬಾರಿ ಪೂಜೆ ಸಲ್ಲಿಸಿ, ಅಪ್ಪಾಜಿಯವರ ಪಾರ್ಥಿವ ಶರೀರವನ್ನು ಹೂವಿನಿಂದ ಅಲಂಕರಿಸಿದ ಪಲ್ಲಕ್ಕಿಯಲ್ಲಿರಿಸಿ, ಶರಣಬಸವೇಶ್ವರ ದೇವಾಲಯದ ಸುತ್ತಲೂ ಐದು ಬಾರಿ ಪ್ರದಕ್ಷಿಣೆ ಹಾಕಿ ಸಮಾಧಿ ಸ್ಥಳಕ್ಕೆ ಕರೆ ತರಲಾಯಿತು.

ಪಲ್ಲಕ್ಕಿಯಲ್ಲಿರುವ ಪಾರ್ಥಿವ ಶರೀರವನ್ನು ಸಮಾಧಿ ಸ್ಥಳದ ಬಳಿ ತರುವಾಗ, ಹಾರಕೂಡ್ ಮಠದ ಶ್ರೀ ಚೆನ್ನವೀರ ಶಿವಾಚಾರ್ಯರು ಮತ್ತು ಸಂಸ್ಥಾನದ 9ನೇ ಪೀಠಾಧಿಪತಿ ಪೂಜ್ಯ ಚಿರಂಜೀವಿ ದೊಡ್ಡಪ್ಪ ಅಪ್ಪಾಜಿ ಅವರು ಸಮಾಧಿ ಸ್ಥಳದಲ್ಲಿ ಪೂಜೆ ಸಲ್ಲಿಸಿದರು ಮತ್ತು ಧಾರ್ಮಿಕ ಸ್ವಾಮೀಜಿಗಳು ವಚನಗಳು ಮತ್ತು ವೇದಗಳ ಸ್ತೋತ್ರಗಳನ್ನು ಪಠಿಸುತ್ತಿದ್ದಾಗ ಪೂಜ್ಯ ಡಾ. ಅಪ್ಪಾಜಿಯವರ ಪಾರ್ಥಿವ ಶರೀರವನ್ನು ನಿಧಾನವಾಗಿ ಸಮಾಧಿ ಸ್ಥಳದಲ್ಲಿ ಇಡಲಾಯಿತು. ಧಾರ್ಮಿಕ ಸ್ತುತಿಗೀತೆಗಳನ್ನು ಪಠಿಸುತ್ತಿದ್ದ ಸ್ವಾಮೀಜಿಗಳು, ಡಾ. ಅಪ್ಪಾಜಿಯವರ ಮೃತದೇಹದ ಕೊರಳಿನಿಂದ "ಲಿಂಗ" ಹಾಗೂ ಶಿರದ ಮೇಲೆ ಧರಿಸುತ್ತಿದ್ದ ಪೇಠವನ್ನು ತೆಗೆದು ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ್ ಅವರಿಗೆ ಹಸ್ತಾಂತರಿಸಿದರು. ಅವರು ಪ್ರತಿಯಾಗಿ ಪೂಜ್ಯ ಅಪ್ಪಾಜಿ ಧರಿಸಿದ್ದ ಶಿರಸ್ತ್ರಾಣ ಮತ್ತು "ಲಿಂಗ"ವನ್ನು ಹಾರಕೂಡ ಮಠದ ಪೂಜ್ಯ ಚೆನ್ನವೀರ ಶಿವಾಚಾರ್ಯರು ಅವರಿಗೆ ಹಸ್ತಾಂತರಿಸಿದರು. ಅವರು ಸಂಸ್ಥಾನದ 9ನೇ ಪೀಠಾಧಿಪತಿ ಪೂಜ್ಯ ಚಿರಂಜೀವಿ ದೊಡ್ಡಪ್ಪ ಅಪ್ಪಾಜಿ ಅವರಿಗೆ ಶಿರಸ್ತ್ರಾಣ ಮತ್ತು ಲಿಂಗ ಎರಡನ್ನೂ ಹಸ್ತಾಂತರಿಸಿದರು.

ರಾಜ್ಯ ಸರಕಾರದ ಪರವಾಗಿ ಉಪಮುಖ್ಯಮಂತ್ರಿ ಶ್ರೀ ಡಿ. ಕೆ. ಶಿವಕುಮಾರ್ ಮತ್ತು ಸಚಿವ ಶ್ರೀ ಪ್ರಿಯಾಂಕ್ ಖರ್ಗೆ ಅವರು ಅಗಲಿದ ಡಾ. ಅಪ್ಪಾಜಿಯವರ ಆತ್ಮಕ್ಕೆ ಗೌರವ ಸಲ್ಲಿಸಿದರು. ಶಿಕ್ಷಣ ಮತ್ತು ಸಾಮಾಜಿಕ ಸೇವೆಯ ಕ್ಷೇತ್ರದಲ್ಲಿ ಡಾ. ಅಪ್ಪಾಜಿಯವರು ನೀಡಿದ ಕೊಡುಗೆಯನ್ನು ಸ್ಮರಿಸಿದರು. ರಾಜ್ಯ ಸರಕಾರದ ಪರವಾಗಿ ಡಾ. ಅಪ್ಪಾಜಿ ಅವರಿಗೆ ಗೌರವ ಸಲ್ಲಿಸಲು ವಿಶೇಷವಾಗಿ ಕಲಬುರಗಿಗೆ ಬಂದಿದ್ದೇನೆ ಹಾಗೂ ಅಪ್ಪಾಜಿಯವರ ಆಶೀರ್ವಾದ ಪಡೆದಿದ್ದು ನನ್ನ ಸೌಭಾಗ್ಯವೆಂದು ಎಂದು ಹೇಳಿದರು. ಶರಣಬಸವೇಶ್ವರ ಸಂಸ್ಥಾನವು ಈ ಪ್ರದೇಶದ ಶೈಕ್ಷಣಿಕ ಸಬಲೀಕರಣದಲ್ಲಿ ಪ್ರಮುಖ ಪಾತ್ರ ವಹಿಸಿದೆ ಡಿ. ಕೆ. ಶಿವಕುಮಾರ್ ಹೇಳಿದರು.

ಪೂಜ್ಯ ಡಾ. ಅಪ್ಪಾಜಿಯವರ ಪಾರ್ಥಿವ ಶರೀರಕ್ಕೆ ಗೌರವ ಸಲ್ಲಿಸಲು ವಿಶೇಷ ವಿಮಾನದಲ್ಲಿ ಕಲಬುರಗಿಗೆ ಆಗಮಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಶ್ರೀ ಬಿ. ವೈ. ವಿಜಯೇಂದ್ರ ಅವರು, ಡಾ. ಅಪ್ಪಾಜಿಯವರ ಪಾರ್ಥಿವ ಶರೀರಕ್ಕೆ ಪುಷ್ಪ ನಮನ ಸಲ್ಲಿಸಿದ ನಂತರ ತಮ್ಮ ಸಂಕ್ಷಿಪ್ತ ನುಡಿಗಳಲ್ಲಿ, ಡಾ. ಅಪ್ಪಾಜಿಯವರ ಶಿಕ್ಷಣ ಮತ್ತು ಸಾಮಾಜಿಕ ಸೇವೆಯ ಕ್ಷೇತ್ರದಲ್ಲಿ ಅವರ ಕೊಡುಗೆಯನ್ನು ಹೋಲಿಸಲಾಗದು ಮತ್ತು ಕರ್ನಾಟಕ ಹಾಗೂ ದೇಶವು ಒಬ್ಬ ಮಹಾನ್ ಆತ್ಮವನ್ನು ಕಳೆದುಕೊಂಡಿದೆ ಎಂದು ಹೇಳಿದರು. ಅವರ ತಂದೆ ಬಿ.ಎಸ್. ಯಡಿಯೂರಪ್ಪ ಅವರು ಡಾ. ಅಪ್ಪಾಜಿಯವರ ಕುಟುಂಬಕ್ಕೆ ತಮ್ಮ ಆಳವಾದ ಸಂತಾಪವನ್ನು ವ್ಯಕ್ತಪಡಿಸಿದ್ದಾರೆಂದು ಹೇಳಿದರು. ಪೂಜ್ಯ ಅಪ್ಪಾಜಿಯವರ ಅಂತಿಮ ಸಂಸ್ಕಾರದಲ್ಲಿ ಭಾಗವಹಿಸಿದ ಪ್ರಮುಖರಲ್ಲಿ ಅರಣ್ಯ ಸಚಿವ ಈಶ್ವರ್ ಖಂಡ್ರೆ, ಶಾಸಕರಾದ ಶ್ರೀ ಬಿ ಆರ್ ಪಾಟೀಲ್, ಶ್ರೀ ಅಲ್ಲಮಪ್ರಭು ಪಾಟೀಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನೀಡಿದ ಸಚಿವ ರಾಮಲಿಂಗಾರೆಡ್ಡಿ

ತಾವು ಇಲ್ಲಿ ಕಾರ್ಪೋರೇಟ್ ಆಗಿದ್ದಿವಿ ಎಂದು ಸ್ಮರಿಸಿಕೊಂಡ ಸಚಿವರು, ಇದು ಸಿಲಿಂಡರ್ ಸ್ಫೋಟ್ ನೋ ಇಲ್ಲ ಬೇರೇನೋ ಎಂಬ ಬಗ್ಗೆ ತನಿಖೆ ಕೈಗೊಳ್ಳಲು ಪೊಲೀಸರಿಗೆ ಸಿಎಂ ಸೂಚನೆ ನೀಡಿದ್ದಾರೆ. ತನಿಖೆ ನಂತರ ಸತ್ಯಾಸತ್ಯತೆ ಹೊರಬರಲಿದೆ ಎಂದರು.ಬಿಬಿಎಂಪಿ ಅಧಿಕಾರಿಗಳಿಗೆ ಸ್ಫೋಟ್ ದಿಂದ ಸಂಪೂರ್ಣ ಹಾಳಾಗಿರುವ ಮನೆಯನ್ನು ನಿರ್ಮಿಸಿಕೊಡಲು ಕ್ರಮ ಕೈಗೊಳ್ಳುವಂತೆ ಸಚಿವರು ಸೂಚನೆ ನೀಡಿದರು.ಸ್ಫೋಟ ಸಂಭವಿಸಿದ ಮನೆ ಕಸ್ತೂರಮ್ಮ ಎಂಬುವವರಿಗೆ ಸೇರಿದ್ದು, ಅವರು ಕೂಡ ಸುಟ್ಟ ಗಾಯಗಳಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. 13 ಮನೆಗಳಿಗೆ ಹಾನಿಗೊಳಗಾಗಿವೆ. ಈ ಮನೆಗಳನ್ನು ದುರಸ್ತಿ ಮಾಡುವಂತೆ ಬಿಬಿಎಂಪಿ ಆಯುಕ್ತರಿಗೆ ಸೂಚಿಸಿದ್ದೇನೆ. ಮನೆ ಸಂಪೂರ್ಣವಾಗಿ ಕುಸಿದಿದ್ದರೆ, ನಾವು ಅವುಗಳನ್ನು ನಿರ್ಮಿಸುತ್ತೇವೆ ಎಂದು ಸಿಎಂ ಭರವಸೆ ನೀಡಿದ್ದಾರೆ ಎಂದು ರೆಡ್ಡಿ ತಿಳಿಸಿದರು.

# ಸ್ವಾತಂತ್ರ್ಯ ಹೋರಾಟಗಾರ ತ್ಯಾಗ, ಬಲಿದಾನ ಸ್ಫೂರ್ತಿ: ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.15:ದೇಶಕ್ಕಾಗಿ ತಮ್ಮ ಸರ್ವಸ್ವವನ್ನು ಅರ್ಪಿಸಿ ದೇಶವನ್ನು ಬ್ರಿಟಿಷರ ಗುಲಾಮಗಿರಿಯ ಸಂಕೋಲೆಯಿಂದ ಮುಕ್ತಗೊಳಿಸಿದ ಸ್ವಾತಂತ್ರ್ಯ ಹೋರಾಟಗಾರರ ದೇಶಭಕ್ತಿ,ತ್ಯಾಗ ಸ್ಫೂರ್ತಿಯಾಗಿದೆ ಎಂದು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಹೇಳಿದರು.ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಶಿಕ್ಷಣ ಸಮುಚ್ಛಯದಲ್ಲಿ ಶುಕ್ರವಾರ 79ನೇ ಸ್ವಾತಂತ್ರ್ಯೋತ್ಸವ ನಿಮಿತ್ತ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. ಸ್ವಾತಂತ್ರ್ಯ ಲಭಿಸಿದ ದಿವಸ ಕೇವಲ ಹಬ್ಬವಲ್ಲ. ಅದು ನಮ್ಮ ಜವಬ್ದಾರಿ ನೆನಪಿಸುವ ದಿನವೂ ಆಗಿದೆ. ದೇಶವನ್ನು ಶಾಂತಿ, ಪ್ರಗತಿ ಮತ್ತು ಸೌಹಾರ್ದದಿಂದ ತುಂಬಿಸುವುದು ನಮ್ಮ ಕರ್ತವ್ಯವಾಗಿದೆ. ಎಲ್ಲರೂ ಒಗ್ಗಟ್ಟಿನಿಂದ ದೇಶ ಸೇವೆಯಲ್ಲಿ ತೊಡಗಿದಾಗ ಮಾತ್ರ ಸ್ವಾತಂತ್ರ್ಯದ ಅರ್ಥ ಪರಿಪೂರ್ಣವಾಗುತ್ತದೆ ಎಂದು ಮಾರ್ಮಿಕ ದೃಷ್ಟಾಂತ ಸಮೇತ ತಿಳಿಸಿದರು.ಹಿರೇಮಠದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ವಿದ್ಯಾರ್ಥಿಗಳು ಬಾಲ್ಯದಿಂದಲೇ ಶಿಕ್ಷಣದೊಂದಿಗೆ ಸಂಸ್ಕಾರಯುತ ಗುಣಗಳನ್ನು ಮೈಗೂಡಿಸಿಕೊಂಡು ನಮ್ಮ ರಾಷ್ಟ್ರವನ್ನು ಹಸಿರು, ಸ್ವಚ್ಛ, ಶ್ರೇಷ್ಠ ದೇಶವನ್ನಾಗಿ ರೂಪಿಸಲು ಪ್ರಯತ್ನಿಸಬೇಕು ಎಂದು ಹೇಳಿದರು.ಸೂರ್ಯ ಫೌಂಡೇಶನ್ ಸಂಯೋಜಕ ಗುರುನಾಥ ರಾಜಗೀರಾ, ಸಿದ್ದೇಶ್ವರ ಕೋ ಆಪರೇಟಿವ್ ಬ್ಯಾಂಕ್ ಭಾಲ್ಕಿಯ ಅಧ್ಯಕ್ಷ ಪ್ರಶಾಂತ ಕಾಕನಾಳೆ, ಚಿಕ್ಕಮಗಳೂರಿನ ಡಾ. ನಮನಾ ಬಿ.ಎನ್ ಮಾತನಾಡಿದರು.ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ, ಹಿರೇಮಠ ಸಂಸ್ಥಾನದ ನಿರ್ದೇಶಕರಾದ ಸೋಮನಾಥಪ್ಪ ಅಷ್ಟೂರೆ, ಚನ್ನಬಸವಣ್ಣ ಬಳತೆ, ಜಿಲ್ಲಾ ಪಂಚಾಯಿತಿ ಲೆಕ್ಕಾಧಿಕಾರಿ ಅಹ್ಮದ್ ಚಾಂದಸಾಬ್,ತಳವಾಡ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಅನುಪಮಾ ರವಿ ರಾಜಣ್ಣ, ಪಿಡಿಒ ಪ್ರಭುಶೆಟ್ಟಿ ಬಿರಕುರೆ ಪ್ರಮುಖರಾದ ಬಸವರಾಜ ಪಾಟೀಲ ಗೋರಟಾ, ಕಲ್ಲಪ್ಪಾ ಕಮಲಾಪೂರೆ, ಶಿವರಾಜ ಮಲ್ಲೇಶಿ ಪ್ರಾಚಾರ್ಯ ಬಸವರಾಜ ಮೊಳಕೀರೆ ಇದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.

## ಬಳ್ಳಾರಿ ಜಿಲ್ಲೆಯು ಅಭಿವೃದ್ಧಿಯತ್ತ ಸಾಗುತ್ತಿದೆ: ಸಚಿವ ರಹೀಂ ಖಾನ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.15-ಬಳ್ಳಾರಿಜಿಲ್ಲೆಯಲ್ಲಿ ಅಭಿವೃದ್ಧಿಗೆಪೂರಕವಾಗಿ ಸಾಕಷ್ಟು ಯೋಜನೆ-ಕಾರ್ಯಗಳುನಡೆಯುತ್ತಿವೆ ಎಂದು ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್ ಅವರು ಹೇಳಿದರು.

ಶುಕ್ರವಾರಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಬಳ್ಳಾರಿ ಜಿಲ್ಲೆಯಲ್ಲಿಕಳೆದಎರಡುವರ್ಷಗಳಲ್ಲಿ ವಿವಿಧಅನುದಾನಗಳಡಿ ಸುಮಾರು 2 ಸಾವಿರ ಕೋಟಿ ರೂ.ಗಳಷ್ಟು ಕಾಮಗಾರಿಗಳು ನಡೆದಿದ್ದು, ಜಿಲ್ಲೆಯು ಅಭಿವೃದ್ಧಿಯತ್ತ ಸಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ ಈಗಾಗಲೇ 227 ಕೋಟಿ ರೂ. ವೆಚ್ಚದಲ್ಲಿ 24*7 ಕುಡಿಯುವನೀರಿನ ಯೋಜನೆಗಳ ಕಾಮಗಾರಿಗಳನ್ನುಕೈಗೆತ್ತಿಕೊಳ್ಳಲಾಗಿದೆ. ಸುಮಾರು 135 ರಿಂದ 150 ಕೋಟಿ ರೂ. ವೆಚ್ಚದಲ್ಲಿ ಬಳ್ಳಾರಿಯಲ್ಲಿ ಅತ್ಯಾಧುನಿಕ ತಂತ್ರಜ್ಞಾನದ ಮೆಗಾಡೇರಿ ನಿರ್ಮಿಸಲಾಗುತ್ತಿದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳ ಅಭಿವೃದ್ಧಿ ಕಾರ್ಯಕ್ರಮಗಳಿಗೆ 5 ಸಾವಿರ ಕೋಟಿ ರೂ.ಗಳನ್ನು ಬಜೆಟ್‌ನಲ್ಲಿ ಪ್ರತ್ಯೇಕವಾಗಿ ಮೀಸಲಿಟ್ಟಿದ್ದು, ಆ ಜಿಲ್ಲೆಗಳಲ್ಲಿ ಶಿಕ್ಷಣ, ಆರೋಗ್ಯ, ಕುಡಿಯುವ ನೀರು, ರಸ್ತೆ, ಕಟ್ಟಡ ಕಾಮಗಾರಿಗಳಿಗೆವ್ಯಯಿಸಲಾಗುತ್ತಿದೆ ಎಂದು ತಿಳಿಸಿದರು.

ನಮ್ಮ ಸರ್ಕಾರವು ಜನ ಸಾಮಾನ್ಯರಿಗೆ ಅತ್ಯುತ್ತಮ ಆಡಳಿತ ನೀಡಲು ಮುಂದಾಗಿದ್ದು, ಈ ಕುರಿತು ಎಲ್ಲಾ ಜಿಲ್ಲಾ ಉಸ್ತುವಾರಿ ಸಚಿವರಿಗೆ ಸೂಕ್ತ ನಿರ್ದೇಶನ ನೀಡಿದ್ದಾರೆ ಎಂದರು.

ರಾಜ್ಯದಲ್ಲಿ ಇ-ಖಾತಾ ವಿತರಣೆಗೆ ಸಂಬಂಧಿಸಿದಂತೆ ಈಗಾಗಲೇ ಶೇ.50 ರಷ್ಟು ಪ್ರಗತಿ ಸಾಧಿಸಲಾಗಿದೆ. ಬಳ್ಳಾರಿಯಲ್ಲಿಯೇ 88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜಿಸಲಾಗುವುದು. ಈ ಭಾಗದ ತುಂಗಭದ್ರಾ ಅಣೆಕಟ್ಟಿನ 19 ನೇ ಕ್ರಸ್ಟ್ ಗೇಟ್ ಅಳವಡಿಕೆ ಕುರಿತಂತೆ ಅಧಿವೇಶನದಲ್ಲಿ ಪ್ರಸ್ತಾಪಿಸಲಾಗುವುದು ಎಂದರು.

ಈ ವೇಳೆ ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಬಳ್ಳಾರಿ ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಉಪಸ್ಥಿತರಿದ್ದರು.

## ಪುರಸಭೆಯಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಪಟ್ಟಣದಪುರಸಭೆಯಲ್ಲಿ ಸ್ವಾತಂತ್ರ್ಯ ದಿನಾಚರಣೆ ಮತ್ತು ಸಂಗೋಳಿ ರಾಯಣ್ಣ ಜಯಂತಿ ಇರುವ ಪ್ರಯುಕ್ತ ಮೊದಲಿಗೆ ಸಂಗೊಳ್ಳಿ ರಾಯಣ್ಣನವರ ಭಾವಚಿತ್ರಕ್ಕೆ ಪುರಸಭೆ ಅಧ್ಯಕ್ಷ ದಿಲೀಪಕುಮಾರ ಬಗ್ದಲಕರ, ಉಪಾಧ್ಯಕ್ಷ ಮಹ್ಮದನಸೀರ ಖಾನ, ಪುರಸಭೆಯ ಮುಖ್ಯಾಧಿಕಾರಿ ಹುಸಾಮುದ್ದಿನ ಬಾಬಾ ಅವರು ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವುದರ ಮೂಲಕ ಪೂಜೆಯನ್ನು ನೆರವೇರಿಸಿದರು. ಮಹಾತ್ಮ ಗಾಂಧಿ ಮತ್ತು ಡಾ. ಬಿ. ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆಯನ್ನು ಸಲ್ಲಿಸಿದ ನಂತರ ಪುರಸಭೆ ಆವರಣದಲ್ಲಿ ಅಧ್ಯಕ್ಷ ದಿಲೀಪಕುಮಾರ ಬಗ್ದಲಕರ ಧ್ವಜಾರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ಮಹ್ಮದನಸೀರ ಖಾನ, ಪುರಸಭೆಯ ಮುಖ್ಯಾಧಿಕಾರಿ ಹುಸಾಮುದ್ದಿನ ಬಾಬಾ, ಸದಸ್ಯರಾದ ರಹೇಮಾನ ಪಾಶ, ಮಹ್ಮದ ನಿಸಾರೋದ್ದಿನ್, ವಿಶಾಲ ಬೊರಳೆ, ರೇವಣಸಿದ್ದಪ್ಪಾ ಭೂತಾಳೆ, ಮಹ್ಮದನಸೀರಹಕ್ಕೀಂ, ಜಲೀಸಾ ಬೇಗಂ, ಶೋಭಾ ಸುಭಾಷ, ವನೀತಾಬಾಯಿ ಗೋಪಿನಾಥ, ಪದ್ಮಾವತಿ, ಲಕ್ಷ್ಮಿಬಾಯಿ ಗಡಮಿ, ಮಾಜಿ ಪುರಸಭೆಯ ಸದಸ್ಯರಾದ ಮಲ್ಲಿಕಾರ್ಜುನ ಪಾಟೀಲ ಪ್ರಮುಖರಾದ ಶಾಮರಾವ ಭುತ್ತಾಳೆ, ಶರಣು ಗಡಮಿ, ಸಚಿನ ಮಠಪತಿ, ಮಹ್ಮದ ಶರೀಫ, ಮಹ್ಮದ ನಿಜಾಮುದ್ದಿನ, ಪ್ರಶಾಂತ ಜವಳಿ, ನರಸಪ್ಪ ನರನಾಳ, ಸಿಬ್ಬಂದಿಗಳಾದ ವಿಜಯಕುಮಾರ, ವಿಜಯದೀಪ, ವಾಣಿ, ರವಿಕುಮಾರ, ಚಿದಾನಂದ ಪತ್ರಿ, ಸಂತೋಷ ಬಿರಾದರ, ಆನಂದ, ಶಿವಕುಮಾರ, ರಾಜಕುಮಾರ, ಕವಿತಾ, ಸರೋಜನಿ, ಆನಂದ, ಸಂತೋಷಕುಮಾರ ಹಳ್ಳಿಖೇಡ್, ನಥಾನಿಯೇಲ್, ಸೂರ್ಯಕಾಂತ ಕುಲಕರ್ಣಿ, ಸಚಿನ, ಅಶ್ವಿನಿ, ಮಂಜುಳಾ, ಇಲಾಹಿ, ರಾಜೇಶ್ ತೇಲಂಗ, ಬಕ್ಕಪ್ಪಾ, ಭೀಮಶಾ ಸೇರಿದಂತೆ ಶಾಲಾ ಮಕ್ಕಳು ಇದ್ದರು.

## ಬಸವಕಲ್ಯಾಣದಲ್ಲಿ ಇಂದು ಯುವ ಕ್ರಾಂತಿ ಸಂಘಟನೆಯ 13ನೇ ವಾರ್ಷಿಕೋತ್ಸವ ಹಾಗೂ ಸಮ್ಮೇಳನ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:ಪಟ್ಟಣದ ಮಾತೇ ಮಹಾದೇವಿ ಫಂಕ್ಷನ್ ಹಾಲ್‌ನಲ್ಲಿ ಆ.16 ರಂದು ಯುವ ಕ್ರಾಂತಿ ಸಂಘಟನೆಯ 13ನೇ ವಾರ್ಷಿಕೋತ್ಸವ ಮತ್ತು ಜಿಲ್ಲಾ ಯುವ ಸಮ್ಮೇಳನ ಜರುಗಲಿದೆ ಎಂದು ಬೀದರ ಯುವ ಕ್ರಾಂತಿ ಸಂಘಟನೆಯ ಜಿಲ್ಲಾ ಉಪಾಧ್ಯಕ್ಷ ಎಸ್.ಜೆ.ಸಚೀನ್ ಮೋಳಕೇರಾ ತಿಳಿಸಿದ್ದಾರೆ.

ಈ ಕಾರ್ಯಕ್ರಮದ ಉದ್ಘಾಟಕರಾಗಿ ಜಹೀರಾಬಾದ ಕುಪ್ಪನಗರ ಚಿಲ್ಲಪಲ್ಲಿ ಮಲ್ಲಗಿರಿ ಆಶ್ರಮದ ಪೂಜ್ಯ ಶ್ರೀ ಡಾ.ಬಸವಲಿಂಗ ಅವಧೂತರು ಆಗಮಿಸುವರು. ಯುವ ಕ್ರಾಂತಿ ಸಂಘಟನೆ ಸಂಸ್ಥಾಪಕ ರಾಜ್ಯಾಧ್ಯಕ್ಷ ಗುಂಡುರೆಡ್ಡಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಚಿವ ಈಶ್ವರ ಖಂಡ್ರೆ, ಸಚಿವ ರಹೀಂಖಾನ್, ಸಂಸದ್ ಸಾಗರ ಖಂಡ್ರೆ, ಮಾಜಿ ಸಚಿವ ರಾಜಶೇಖರ ಬಿ. ಪಾಟೀಲ, ಔರದ ಶಾಸಕ ಪ್ರಭು ಚವ್ಹಾನ, ಮಾಜಿ ಸಚಿವ ಬಂಡೆಪ್ಪ ಖಾಶೆಂಪೂರ, ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ, ಶಾಸಕ ಸಿದ್ಧಲಿಂಗಪ್ಪಾ ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಎಂ.ಜಿ ಮೂಳೆ, ಡಾ.ಚಂದ್ರಶೇಖರ ಪಾಟೀಲ, ಭೀಮರಾವ ಪಾಟೀಲ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ಬಿ.ನಾರಾಯಣರಾವ, ಬಸವಕಲ್ಯಾಣ ಮಾಜಿ ಶಾಸಕ ಮಲ್ಲಿಕಾರ್ಜುನ ಖೂಬಾ, ಮಾಜಿ ವಿಧಾನ ಪರಿಷತ್ ಸದಸ್ಯರಾದ ವಿಜಯ್‌ಸಿಂಗ್, ಅರವಿಂದ ಅರಳಿ, ಬೀದರ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆ ಅಧ್ಯಕ್ಷ ಡಿ.ಕೆ.ಸಿದ್ರಾಮ್, ಬೀದರ ಜೆಡಿಎಸ್ ಯುವ ಮುಖಂಡ ಸೂರ್ಯಕಾಂತ ನಾಗಮಾರಪಳ್ಳಿ, ಸಹಕಾರ ವಿಭಾಗ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ರಾಜ್ಯಾಧ್ಯಕ್ಷ ಧನರಾಜ ತಾಳಂಪಳ್ಳಿ, ಬಸವಕಲ್ಯಾಣ ಬಸವೇಶ್ವರ ದೇವಸ್ಥಾನದ ಪಂಚಕಮಿಟಿ ಅಧ್ಯಕ್ಷ ಬಸವರಾಜ ಕೋರಕೆ, ಪತ್ರಿಕೆಯ ಸಂಪಾದಕ ಶಿವಶರಣಪ್ಪ ವಾಲಿ, ಬೀದರ ಯುವ ಮುಖಂಡ ಜಗನಾಥ ಜಮಾದಾರ, ಬಸವಕಲ್ಯಾಣ ಯುವ ಮುಖಂಡ ರವಿ ಗಾಯಕವಾಡ, ಆಶ್ರಫ್ ಅಲಿಖಾನ್, ಬೀದರ ಕುರುಬ ಸಮಾಜ ಹಿರಿಯ ಮುಖಂಡರಾದ ಪಂಡಿತ ಚಿದ್ರಿ, ಬೀದರ ಯುವ ಕ್ರಾಂತಿ ಸಂಘಟನೆಯ ಜಿಲ್ಲಾಧ್ಯಕ್ಷ ಸಂಗಮೇಶ ಭೂರೆ ಪ್ರಸ್ತಾವಿಕವಾಗಿ ಮಾತನಾಡುವರು. ಬೀದರ ಖ್ಯಾತ ನಿರೂಪಕ ದೀಪಕ ಧಮಕೆ ನಿರೂಪಣೆ ಮಾಡುವರು. ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ಗಣ್ಯರು ಭಾಗವಹಿಸಬೇಕೆಂದು ಪತ್ರಿಕಾ ಪ್ರಕಟಣೆಯಲ್ಲಿ ಸಚೀನ್ ಮೋಳಕೇರಾ ತಿಳಿಸಿದ್ದಾರೆ.

## ಸ್ವಾತಂತ್ರಕ್ಕಾಗಿ ಬಲಿದಾನಗೊಂಡವರ ಸ್ಮರಣೆ ಮಾಡಿ:ರಮೇಶರೆಡ್ಡಿ ಉಸ್ತೇಲಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಸ್ವಾತಂತ್ರಕ್ಕಾಗಿ ಬಲಿದಾನಗೊಂಡವರ ಸ್ಮರಣೆ ಮಾಡುವುದುಪ್ರತಿಯೊಬ್ಬನಾಗರೀಕರ ಕರ್ತವ್ಯವಾಗಬೇಕು ಎಂದು ಶ್ರೀ ಮಾಣಿಕ ಪ್ರಭು ಪತ್ತಿನ ಸೌಹಾರ್ದ ಸಹಕಾರಿಯ ಅಧ್ಯಕ್ಷ ರಮೇಶರೆಡ್ಡಿ ಉಸ್ತೇಲಿ ರವರು ನಗರದ ಗಾದಾ ಕಾಂಪ್ಲೆಕ್ಸ್‌ನಲ್ಲಿರುವ ಶ್ರೀ ಮಾಣಿಕ ಪ್ರಭು ಪತ್ತಿನ ಸೌಹಾರ್ದ ಸಹಕಾರಿಯಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆಯ ನಿಮಿತ್ಯ ಧ್ವಜಾರೋಹಣ ನೆರವೇರಿಸಿ ಮಹಾತ್ಮಾ ಗಾಂಧಿ ಹಾಗೂ ಡಾ.ಬಿ.ಆರ್ ಅಂಬೇಡ್ಕರ್ ರವರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ದೇಶಕ್ಕೆ ಸ್ವಾತಂತ್ರ್ಯ ತಂದುಕೊಡಲು ಹಲವಾರು ಮಹನೀಯರು ಶ್ರಮಿಸಿದ್ದಾರೆ. ರಾಷ್ಟ್ರಪ್ರೇಮ, ಭಾವೈಕ್ಯ, ದೇಶದ ರಕ್ಷಣೆ, ದೇಶದ ಏಕತೆ ಕಾಪಾಡುವ ಗುಣ ಅಳವಡಿಸಿಕೊಳ್ಳುವ ಮೂಲಕ ನಮ್ಮ ಜವಾಬ್ದಾರಿ ಹೆಚ್ಚಿಸಿಕೊಂಡು ಸ್ವಾತಂತ್ರ್ಯ ಯೋಧರು ಮಾಡಿದ ತ್ಯಾಗ ಸ್ಮರಿಸಬೇಕು. ಯುವಕರು ದುಷ್ಚಟಗಳಿಗೆ ಬಲಿಯಾಗದೇ ದೇಶಾಭಿಮಾನ ಬೆಳೆಸಿಕೊಳ್ಳಬೇಕು ಎಂದರು. ಈ ಸಂದರ್ಭದಲ್ಲಿ ವೈಜಿನಾಥ ಧನ್ನೂರೆ, ಝರಣಪ್ಪಾ, ರಮೇಶ ಜಾಧವ, ಮಹೋನರಡ್ಡಿ ಮುಡಬಿ, ರಾಮರಡ್ಡಿ ಕಂಚಟಿ, ಜೈಕಾಂತರಡ್ಡಿ ಕೌಡಿಯಾಳ, ನಾಮದೇವ ಸೂರ್ಯವಂಶಿ, ವೀರಪಾಕ್ಷಪ್ಪ ಹಂದ್ರಾಳ, ಅನೀಲ ಹಂದ್ರಾಳ, ಮಲ್ಲಿಕಾರ್ಜುನ ರಡ್ಡಿ, ದೀಪಕ ಜಮಾದಾರ, ಸೇರಿದಂತೆ ಇತರರಿದ್ದರು.

## ಕಿಟ್ಟಾ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ 79 ನೇಯ ಸ್ವಾತಂತ್ರೋತ್ಸವ ದಿನಾಚರಣೆ.



(ವರದಿ. ಡಿ. ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ತಾಲೂಕಿನ ಕಿಟ್ಟಾ ಗ್ರಾಮದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ ಯಲ್ಲಿ 79ನೇಯ ಸ್ವಾತಂತ್ರೋತ್ಸವ ದಿನಾಚರಣೆ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷರಾದ ಸಂಜೀವ ರೆಡ್ಡಿ ಕೂದಗೆ. ಶಾಲೆಯ ಎಸ್ ಡಿ ಎಮ್ ಸಿ ಅಧ್ಯಕ್ಷರಾದ ಶಂಕರ ಫುಲೆ. ಎಸ್ ಡಿ ಎಮ್ ಸಿ ಸದಸ್ಯರು ಶಾಲೆಯ ಮುಖ್ಯ ಗುರುಗಳಾದ ಲಿಂಗರಾಜ ಹಡಪತ. ಈ ವೇಳೆ ಶಾಲೆಯ ಮಕ್ಕಳಿಗೆ ನೋಟ ಬುಕ್ಕ ವಿತರಿಸಿದ ಸಂಗಪ್ಪ ಯರಂಡಗೆ. ಮಂಜುನಾಥ ರೆಡ್ಡಿ ನಿಂಗಾವರೆ. ರಾಜಕುಮಾರ. ಭಾಸ್ಕರ ದೌಲೆಕರ್. ಮಾರುತಿ ಫುಲೆ. ಅರುಣ ಹಾಲುರೆ. ಮನೋಜ ದಯಾಳು. ಆದರ್ಶ ವಾಗಮಾರೆ ಹಾಗೂ ಶಾಲೆಯ ಮಕ್ಕಳು ಶಿಕ್ಷಕರು ಶಿಕ್ಷಕಿಂ-ಯರು ಗ್ರಾಮಸ್ಥರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಬೆಳಗುತಿರಲಿ ಸ್ವಾತಂತ್ರ್ಯ ದೀಪ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : ಆ. 15 ಪ್ರತಿ ಭಾರತೀಯನ ಹೃದಯ ಪ್ರಣತಿಯಲ್ಲಿ ಬತ್ತದ ರಾಷ್ಟ್ರಭಕ್ತಿಯ ತೈಲ ತುಂಬಿ ಸದಾಕಾಲ ಸ್ವಾತಂತ್ರ್ಯದ ದೀಪ ಬೆಳಗುತಿರಲಿ ಎಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದ ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಶಾಲೆಯಲ್ಲಿ 79ನೇ ಸ್ವಾತಂತ್ರೋತ್ಸವ ನಿಮಿತ್ಯ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿ ಭಾರತವೆಂದರೆ ಒಂದು ಭೂಭಾಗ ಮಾತ್ರವಲ್ಲ 150 ಕೋಟಿ ಜನತೆಯ ಅಸ್ಮಿತೆ, ಹೃದಯ ಸ್ಪಂದನ ವೆಂಬುದು ಪ್ರತಿ ಭಾರತೀಯ ಅರಿತಿರಬೇಕು.

ಲಕ್ಷ ಲಕ್ಷ ಜನತೆಯ ನಿರಂತರ ಹೋರಾಟ ತ್ಯಾಗ ಮತ್ತು ಬಲಿದಾನಗಳಿಂದ ದೊ-ರೆತ ಸ್ವಾತಂತ್ರ್ಯವನ್ನು ಅತ್ಯಂತ ಹೊಣೆಗಾರಿಕೆಯಿಂದ ಅನುಭವಿಸಬೇಕು.

ರಾಷ್ಟ್ರ ಪ್ರೇಮ, ರಾಷ್ಟ್ರಭಕ್ತಿ, ರಾಷ್ಟ್ರಭಿಮಾನ, ರಾಷ್ಟ್ರಸೇವೆಯಂತಹ ಮೌಲ್ಯಗಳು ಎಲ್ಲರಲ್ಲಿ ಸಹಜವಾಗಿ ಬೆಳೆದಾಗ ಬಲಾಢ್ಯ ಭಾರತ ಕಟ್ಟಲು ಸಾಧ್ಯವಾಗುತ್ತದೆ.

ನಾವು ಮಾಡುವ ಪ್ರತಿ ಕಾರ್ಯದಲ್ಲಿಯೂ ರಾಷ್ಟ್ರ ಚಿಂತನೆ ಅರಳಬೇಕು.

ನೆಲದ ಋಣ ತೀರಿಸಲು ಪ್ರತಿ ಪೌರನೂ ಪ್ರಾಮಾಣಿಕ ಪ್ರಯತ್ನ ಮಾಡಬೇಕು.

ನಾವು ಭಾರತೀಯರು ಎನ್ನುವ ಗಟ್ಟಿಮನೋ ಭೂಮಿಕೆಯಿಂದ ಮುನ್ನಡೆದಾಗ ಸಮೃದ್ಧ ಭಾರತ ವಿಶ್ವಮಾನ್ಯವಾಗಿ ಕಂಗೊಳಿಸಲು ಸಾಧ್ಯವಾಗುತ್ತದೆ.

ರಾಷ್ಟ್ರರಕ್ಷಿಸುವ ಯೋಧ, ಅನ್ನ ನೀಡುವ ರೈತನ ಆತ್ಮಸ್ಥೈರ್ಯ ಯಾವತ್ತೂ ವೃದ್ಧಿಸುತ್ತಿರಲಿ, ತಿರಂಗಾ ಬಾನೆತ್ತರದಲ್ಲಿ ಹಾರಾಡುತ್ತಿರಲಿ ಸರ್ವರಿಗೂ ಸನ್ಮಂಗಳವಾಗಲೆಂದು ಶುಭ ಹಾರೈಸಿದರು.

ಶಾಲೆಯ ಆಡಳಿತ ಅಧಿಕಾರಿ ಐಜಿ ಮಠಪತಿ, ಪರಮೇಶ್ವರ ಹಳಕುಂದೆ, ಅಲ್ಲಮಪ್ರಭು ಹಿರೇಮಠ ಮುಂತಾದವರು ಉಪಸ್ಥಿತರಿದ್ದರು.

ಪಂಡಿತ ಪೂಜಾರಿ ಸ್ವಾಗತಿಸಿದರು.

ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಶಾಲೆ ಮಕ್ಕಳು ಸ್ವಾಗತ ಗೀತೆ.

ಶಿವಾನಂದ ಪೂಜಾರಿ ವಂದಿಸಿದರು.

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿ:8971850542

## ಇಂದು ಯುವಕ್ರಾಂತಿ ಜಿಲ್ಲಾ ಸಮ್ಮೇಳನ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: - ಆ 15 ಯುವಕ್ರಾಂತಿ ಸಂಘಟನೆಯ 13ನೇ ವಾರ್ಷಿಕೋತ್ಸವ ಹಾಗೂ ಜಿಲ್ಲಾ ಸಮ್ಮೇಳನ ಇಲ್ಲಿನ ಮಾತೇ ಮಹಾದೇವಿ ಪಂಕ್ಸನ್ ಹಾಲ್ ನಲ್ಲಿ ಇಂದು ದಿನಾಂಕ 16.ರಂದು ಬೆಳಿಗ್ಗೆ 11 ಗಂಟೆಗೆ ಬೈಕ್ ರ್ಯಾಲಿ. ನಂತರ ಸಂಘಟನೆಯ ರಾಜ್ಯ ಘಟಕದ ಅಧ್ಯಕ್ಷರಾದ ಗುಂಡುರೆಡ್ಡಿ ಕಮಲಾಪುರೆಯವರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದೆ.

ಗಡಿ ಜಿಲ್ಲೆ, ಬೀದರ್ ಮತ್ತು ಗುಲ್ಬರ್ಗ ಯಾದಗಿರಿ ರಾಯಚೂರು, ಅನ್ಯಾಯ, ಭ್ರಷ್ಟಾಚಾರ, ದಬ್ಬಾಳಿಕೆಯ ಅನೇಕ ರೀತಿಯಲ್ಲಿ ಜನಗಳು ನೊಂದಿ ಬಂದಿದ್ದ ಜನಗಳಿಗೆ ಈ ಸಂಘಟನೆ ಸದಾ ಅವರ ಜೊತೆ ನಿಲ್ಲುತ್ತದೆ ಮತ್ತು ತಪ್ಪಿಸ್ಥ ವಿರುದ್ಧ ಸದಾ ಹೋರಾಟಾ ಮಾಡುವ ಉದ್ದೇಶ ಸಂಘಟನೆಯನ್ನು ವಿಸ್ತರಿಸಲಾಗುತ್ತದೆ. ಜಿಲ್ಲಾ, ತಾಲ್ಲೂಕು ಮತ್ತು ಹೋಬಳಿ ಘಟಕಗಳನ್ನು ರಚಿಸಲು. ಸಾಕಷ್ಟು ಜನ ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿಯಶಸ್ವಿಗೊಳಿಸಬೇಕಾಗಿ

ರಾಜೇಶ್ವರ ಗ್ರಾಮದ ಮಿಲಿಂದ್ ಮುರಳಿಧರ್ ರಾವ್ ಕುಲಕರ್ಣಿ ಮನವಿ.

## ಮದರಸಾದಲ್ಲಿ 79 ಸ್ವಾತಂತ್ರ್ಯ ದಿನಾಚರಣೆ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು :ತಾಲೂಕಿನ ದಾರುಲ್ ಲೂಮ್ ಮೊಹಮ್ಮದಿಯಾ ಮದರಸಾದಲ್ಲಿ ಅಬಿದಲಿ ಜೆಇ ಧ್ವಜಾರೋಹಣ ನೆರವೇರಿಸಿದರು ನಂತರ ಮಾತಾನಾಡಿದ ಅವರು ಸ್ವಾತಂತ್ರ್ಯ ಆಚರಣೆಯಷ್ಟೇ ಅಲ್ಲ, ನಮಗೆ ಸ್ವಾತಂತ್ರ್ಯ ಭಾರತದ ಗೌರವವನ್ನು ತಂದು ಕೊಟ್ಟ ಅಸಂಖ್ಯಾತ ವೀರರ ಧೈರ್ಯ, ತ್ಯಾಗ ಮತ್ತು ಪರಮ ನಿಸ್ವಾರ್ಥತೆ-ಯ ಸ್ಮರಣೆಯ ದಿನವಾಗಿದೆ. ಅವರ ಆದರ್ಶಗಳಿಂದ ಸ್ಫೂರ್ತಿ ಪಡೆದು ಸುರಕ್ಷಿತ, ಬಲಿಷ್ಠ ಮತ್ತು ಸಮೃದ್ಧ 'ವಿಕಸಿತ ಭಾರತ'ವನ್ನು ನಿರ್ಮಿಸಲು ಒಟ್ಟಾಗಿ ಕೆಲಸ ಮಾಡೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಹಿಬೂಬ ಸಾಬ ಇಂಜಿನಿಯರ್, ಮೌಲಾಸಾಬ ಪ್ರಥಮ ದರ್ಜೆ ಗುತ್ತಿಗೆದಾರರು, ಹಬಿಬೀ ಸೆಠ್ ವಕೀಲರು, ಮದರಸಾ ಸಿಬ್ಬಂದಿ ಮಕ್ಕಳು ಸಾರ್ವಜನಿಕರು ಉಪಸ್ಥಿತರಿದ್ದರು

## ತಾಲೂಕ ಆಡಳಿತದಿಂದ 79ನೇ ಸ್ವಾತಂತ್ರ್ಯ ದಿನಾಚರಣೆ

### ಸ್ವಾತಂತ್ರ್ಯಕ್ಕಾಗಿ ಹೋರಾಡಿದ ದೇಶ ಭಕ್ತರನ್ನು ಸ್ಮರಿಸಿ :ಶಾಸಕ ಪಾಟೀಲ್






ಪಟ್ಟಣದ ತಾಲೂಕ ಆಡಳಿತದಿಂದ ಜರುಗಿದ 79ನೇ ಸ್ವಾತಂತ್ರ್ಯ ದಿನಾಚರಣೆಯ ವೇದಿಕೆ ಕಾರ್ಯಕ್ರಮದಲ್ಲಿ ಇದ್ದ ಎಲ್ಲಾ ಅಧಿಕಾರಿಗಳನ್ನು ತಹಸೀಲ್ದಾರ ಅವರು ಸ್ವಾಗತಿಸಿದ್ದಾರೆ. ಆದರೆ ಪುರಸಭೆ ಮುಖ್ಯಾಧಿಕಾರಿ ಅವರಿಗೆ ಸ್ವಾಗತಿಸದೆ ಅವಮಾನ ಮಾಡಿದ್ದಾರೆ. ಶಾಸಕರಿಗೆ ಸನ್ಮಾನ ಆದ ಮೇಲೆ ಪ್ರಥಮ ಪ್ರಜೆಯಾದ ಪುರಸಭೆ ಅಧ್ಯಕ್ಷರಿಗೆ ಸನ್ಮಾನ ಮಾಡಬೇಕಾಗಿತ್ತು. ಆದರೆ ಇತರರಿಗೆ ಸನ್ಮಾನ ಮಾಡಿದ ನಂತರ ಪುರಸಭೆ ಅಧ್ಯಕ್ಷರಿಗೆ ಸನ್ಮಾನ ಮಾಡಿರುವುದು ಪ್ರಥಮ ಪ್ರಜೆಗೆ ಅಗೌರವ ತೋರಿದಂತಾಗಿದೆ ಎಂದು ಬಿಜೆಪಿ ಯುವ ಮುಖಂಡ ಶಾಮರಾವ ಭುತ್ತಾಳೆ ಆರೋಪಿಸಿದ್ದಾರೆ.

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ದೇಶದ ಸ್ವಾತಂತ್ರ್ಯಕ್ಕಾಗಿ ಹಲವಾರು ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನದ ಫಲವಾಗಿ ನಮಗೆ ಸ್ವಾತಂತ್ರ್ಯ ದೊರಕಿದೆ ಎಂದು ಹುಮನಾಬಾದ ಕ್ಷೇತ್ರದ ಶಾಸಕ ಡಾ. ಸಿದ್ದು ಪಾಟೀಲ್ ತಾಲೂಕ ಆಡಳಿತ ಹಮ್ಮಿಕೊಂಡಿದ್ದ 79ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ತಿಳಿಸಿದರು. ದೇಶ ಭಕ್ತಿ ದೇಶ ಅಭಿಮಾನ ಪ್ರತಿಯೊಬ್ಬ ನಾಗರಿಕರಲ್ಲಿ ಇರಬೇಕು ಎಂದರು. ಸ್ವಾತಂತ್ರ್ಯ ಬಂದ ಮೇಲೆ ದೇಶ ಅಭಿವೃದ್ಧಿ ಎತ್ತ ಸಾಗುತ್ತಿದೆ ಜನಪ್ರಿಯ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಮಾದರಿ ದೇಶವಾಗುತ್ತಿದೆ ಎಂದರು. ಹುಮನಾಬಾದ್ ಪಟ್ಟಣದ ಮಾದರಿಯಲ್ಲಿಯೇ ಚಿಟಗುಪ್ಪ ಪಟ್ಟಣವೂ ಕೂಡ ಅಭಿವೃದ್ಧಿ ಪಡಿಸುತ್ತಿದ್ದೇನೆ. ಇತ್ತೀಚಿಗೆ ಮಿನಿ ವಿಧಾನಸೌಧ ಭೂಮಿ ಪೂಜೆ ಕೂಡ ನೆರವೇರಿಸಲಾಗಿದೆ. ತಾಲೂಕ ಪಂಚಾಯತ್ ಕಾರ್ಯಾಲಯ ಹಾಗೂ ಕ್ರೀಡಾಂಗಣ ಮಂಜೂರಿಗಾಗಿ ಸಂಬಂಧ ಪಟ್ಟ ಸಚಿವರಿಗೆ ಭೇಟಿ ನೀಡಿ ಮನವಿ ಪತ್ರ ಸಲ್ಲಿಸಿದ್ದೇನೆ. ಈ ಎರಡು ಕೆಲಸಗಳು ಅತಿ ಶೀಘ್ರದಲ್ಲೇ ಮಂಜೂರಿ ಆಗಲಿವೆ ಎಂದರು. ಚಿಟಗುಪ್ಪ ಪಟ್ಟಣ ನಿಜಾಂ ಆಡಳಿತದಲ್ಲಿ ಜಿಲ್ಲಾ ಕೇಂದ್ರವಾಗಿತ್ತು. ವ್ಯಾಪಾರ ಕೇಂದ್ರ ಸ್ಥಳವಾಗಿದೆ ಹೀಗಾಗಿ ಈ ಪಟ್ಟಣದ ಅಭಿವೃದ್ಧಿಗೆ ವಿಶೇಷ ಆಸಕ್ತಿ ವಹಿಸಿ ಅಭಿವೃದ್ಧಿ ಪಡಿಸುತ್ತಿದ್ದೇನೆ ಎಂದರು. ತಹಶೀಲ್ದಾರ್ ಮಂಜುನಾಥ್ ಪಂಚಾಳ ಧ್ವಜಾರೋಹಣ ನೆರವೇರಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ರಾಷ್ಟ್ರಪೀತ ಮಹಾತ್ಮ ಗಾಂಧೀಜಿಯವರ ಹಾಗೂ ಹಲವಾರು ದೇಶಭಕ್ತರ ಹೋರಾಟದ ಫಲ ನಮಗೆ ಸ್ವತಂತ್ರ ದೊರಕಿದೆ ಗಾಂಧೀಜಿಯವರ ಉಪ್ಪಿನ ಸತ್ಯಾಗ್ರಹ ಬ್ರಿಟಿಷರೇ ಭಾರತ ಬಿಟ್ಟು ತೊಲಗಿ ಚಳುವಳಿ ದೇಶಕ್ಕೆ ಸ್ವಾತಂತ್ರ್ಯ ದೊರಕಲು ತುಂಬಾ ಸಹಾಯಕವಾಗಿವೆ ಎಂದು ಸ್ಮರಿಸಿದರು ದೇಶದ ಸ್ವಾತಂತ್ರ್ಯ ಹೋರಾಟದ ಇತಿಹಾಸವನ್ನು ಸುದೀರ್ಘವಾಗಿ ವಿವರಿಸಿದರು. ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರುಗಳಾದ ವಿನೋದ ಸಿರ್ಕೆ (ಸೈನಿಕ ಸೇವೆ), ಶೈಲೇಂದ್ರ ಕಾವಡಿ (ಪರಿಸರ ಸಂರಕ್ಷಣೆ), ನಿಜಾಮ ಹಕ್ಕಿಮ್ (ಸಮಾಜ ಸೇವೆ), ಅನೀಲಕುಮಾರ ಸಿಂಧೆ( ಸಮಾಜ ಸೇವೆ), ಸಂಗಮೇಶ ಜವಾದಿ(ವಚನ ಸಾಹಿತ್ಯ) ಇವರುಗಳಿಗೆ ಸನ್ಮಾನಿಸಲಾಯಿತ್ತು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕ್ಕರ್, ಉಪಾಧ್ಯಕ್ಷ ನಸೀರ್ ಖಾನ, ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮೀ ಬಿರಾದಾರ್, ಸಿಪಿಐ ಶ್ರೀನಿವಾಸ ಅಲ್ಲಾಪುರ್, ವಲಯ ಅರಣ್ಯಾಧಿಕಾರಿ ಶ್ರೀಕಾಂತ ರಾಠೋಡ, ವೈದ್ಯಾಧಿಕಾರಿ ಡಾ. ವಿಜಯ ಹಿರಸ್ಕರ್, ಪಿಎಸ್‌ಐ ಬಸಲಿಂಗಪ್ಪ ಎಂ.ಗೋಧಿಹಾಳ ಸೇರಿದಂತೆ ಪುರಸಭೆ ಸದಸ್ಯರು, ಪಟ್ಟಣದ ಪ್ರಮುಖರು, ಶಾಲಾ ಮಕ್ಕಳು, ತಹಶೀಲ್ ಹಾಗೂ ಪುರಸಭೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ವಾಹನಗಳ ಬಹಿರಂಗ ಹರಾಜುಆ.18ಕ್ಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಅಗಸ್ಟ್ 15- ಔರಾದ ಅಬಕಾರಿ ನಿರೀಕ್ಷಕರ ಕಛೇರಿ ವಲಯದಲ್ಲಿ ಅಬಕಾರಿ ಇಲಾಖೆ ವತಿಯಿಂದ ಹಲವು ಘೋರ ಪ್ರಕರಣಗಳಲ್ಲಿ ಜಪ್ತಿ ಪಡಿಸಿದ ಒಟ್ಟು 20 ವಿವಿಧ ಬಗೆಯ ವಾಹನಗಳನ್ನು ದಿನಾಂಕ: 18-08-2025 ರಂದು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು ಎಂದು ಬೀದರ ಡೆಪ್ಯುಟಿ ಕಮೀಷನರ್ ಆಫ್ ಎಕ್ಸೈಜ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಅಬಕಾರಿ ನಿರೀಕ್ಷಕರ ಕಛೇರಿ ಔರಾದ್ ವಲಯ ಹಾಗೂ ಅಬಕಾರಿ ಉಪ ಅಧೀಕ್ಷಕರ ಕಛೇರಿ ಬೀದರ ಉಪ ವಿಭಾಗ ಇಲ್ಲಿಗೆ ಸಂಪರ್ಕಿಸಲು ಅವರು ತಿಳಿಸಿದ್ದಾರೆ.

# ಕೆಸರುಮಯ ರಸ್ತೆ ಹಿಡಿ ಶಾಪ ಹಾಕಿದ ಶಾಲಾ ವಿದ್ಯಾರ್ಥಿಗಳು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಅ.15: ತಾಲೂಕಿನ ಇಲಕಲ್ಗಡ ಗ್ರಾಮದಲ್ಲಿ ಹೊಸ ಬಸ್ ನಿಲ್ದಾಣದ ಮುಂದುಗಡೆ ಇರುವ ಕುಷ್ಟಗಿ ಕೊಪ್ಪಳ ಹೆದ್ದಾರಿಯಲ್ಲಿ ಸುಮಾರು ತಿಂಗಳಿಗಳಿಂದ ರಸ್ತೆ ಹದಿಗೆಟ್ಟು ರಸ್ತೆತುಂಬೆಲ್ಲ ನೀರು ನಿಲ್ಲುತ್ತದೆ ನೀರಿನಲ್ಲಿ ಸಾಕಷ್ಟು ತಗ್ಗುಗಳಿವೆ ತಗ್ಗುಗಳು ಇರುವುದು ಕಾಣದೆ ಸಾಕಷ್ಟು ವಾಹನ ಸವಾರರು ಬಿದ್ದಿರುವ ಉದಾಹರಣೆಗಳು ಇವೆ , ಸಾಕಷ್ಟುಬಾರಿ ಇಲ್ಲಿನ ಸ್ಥಳೀಯರು ಪಿಡಬ್ಲ್ಯೂಡಿಅಧಿಕಾರಿಗಳಿಗೆ ಮನವಿ ಮಾಡಿದರು ಯಾರೋಒಬ್ಬರನ್ನು ಕಳಿಸಿ ಮಣ್ಣು ಹಾಕುವ ಕೆಲಸ ಮಾಡುತ್ತಾರೆ ಹೊರತು ಅದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳುತ್ತಿಲ್ಲ ಇದೇ ರೀತಿಯಾದರೆ ಮುಂದಿನ ದಿನಗಳಲ್ಲಿ ರಸ್ತೆತಡೆದು ಪ್ರತಿಭಟನೆ ಹೋರಾಟವನ್ನು ಮಾಡುವುದಾಗಿ ಸ್ಥಳೀಯರು ವರದಿಗಾರಿಗೆ ಎಚ್ಚರಿಸಿದ್ದಾರೆ ಇಂದು ಬೆಳಿಗ್ಗೆ ಅಗಸ್ಟ್ 15 ಧ್ವಜಾರೋಹಣ ನಿಮಿತ್ಯ ಶಾಲಾ ವಿದ್ಯಾರ್ಥಿಗಳು ತಹಸಿಲ್ದಾರ್ ಕಚೇರಿಗೆ ಧ್ವಜಾರೋಹಣ ಮಾಡಲು ಬರುವಾಗ ವಾಹನವು ತಗ್ಗಿನಲ್ಲಿ ಬಿದ್ದು ಮಕ್ಕಳಿಗೆಲ್ಲ ಕೆಸರು ಎರಚಿದಂತಾಗಿ ಬಿಳಿ ಸಮವಸ್ತ್ರ ಧರಿಸಿ ಬಂದಿದ್ದ ವಿದ್ಯಾರ್ಥಿಗಳಿಗೆ ಕೆಸರೆಲ್ಲ ಸಿಡಿದು ಮುಜುಗರ ಅನುಭವಿಸಬೇಕಾದ ಪರಿಸ್ಥಿತಿ ಇಂದು ಬಂದಿತ್ತು ಈಗಲಾದರೂ ಸಂಬಳ ತೆಗೆದುಕೊಳ್ಳುವ ಅಧಿಕಾರಿಗಳು ಇತ್ತಕಡೆ ಗಮನಹರಿಸಿ ರಸ್ತೆಯನ್ನು ಸುಧಾರಣೆ ಮಾಡಬೇಕಾಗಿ ಸ್ಥಳೀಯರು ಕೇಳಿಕೊಂಡರು.ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರಾದ ಬಸವರಾಜಪ್ಪ ಗಾಣದಾಳ,ಶಾಂತುಹೊಸಮತ, ಮುದಿಯಪ್ಪಬೋವಿ,ಶರಣಪ್ಪಬೇಕರಿ, ಸಂಗನಗೌಡ ಪಾಟೀಲ್, ಸೋಮು ಕುದುರೆಮೋತಿ, ನಿತಿಶ್ ಪಾಟೀಲ್, ಹಾಗೂ ಇತರರು ಇದ್ದರು

# ಸ್ವಾತಂತ್ರ್ಯದ ಅರಿವು ಎಲ್ಲರಲ್ಲಿರಲಿ : ಅಶೋಕ ರಾಜೋಳೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:.15: ಹಲವಾರು ಸ್ವಾತಂತ್ರ ಯೋಧರ ತ್ಯಾಗ ಬಲಿದಾನದಿಂದ ದೊರೆತ ಸ್ವಾತಂತ್ರ್ಯದ ಅರಿವು ನಮ್ಮೆಲ್ಲರಲ್ಲಿ ಇರಬೇಕು ಎಂದು ನಿವೃತ್ತ ಉಪನ್ಯಾನಸಕ ಅಶೋಕ ರಾಜೋಳೆ ಅಭಿಪ್ರಾಯಪಟ್ಟರು.

ಪಟ್ಟಣದ ಪುರಭವನದಲ್ಲಿ ತಾಲೂಕು ಆಡಳಿತದವತಿಯಿಂದ ಶುಕ್ರವಾರ ಆಯೋಜಿಸಿದ್ದ 79ನೇ ಸ್ವಾತಂತ್ರ್ಯೋತ್ಸವದಲ್ಲಿ ವಿಶೇಷ ಉಪನ್ಯಾಸ ಮಂಡಿಸಿ ಮಾತನಾಡಿದ ಅವರು, ಸುಮಾರು ವರ್ಷಗಳಿಂದ ಬ್ರಿಟೀಷರ ದಾಶ್ಯದಲ್ಲಿದ್ದ ಭಾರತೀಯರಿಗೆ ಸ್ವಾತಂತ್ರ ಸಿಗುವಲ್ಲಿ, ಸಾವಿರಾರು ಸ್ವಾತಂತ್ರ ಯೋಧರ ತ್ಯಾಗ, ಬಲಿದಾನ ಅಡಗಿದೆ. ಅಂತಹ ಯೋಧರನ್ನು ಸ್ಮರಿಸುವ ದಿನ ಇದಾಗಿದೆ. ಸ್ವಾತಂತ್ರದ ಅರಿವು ಮೂಡಿಸುವನಿಟ್ಟಿನಲ್ಲಿ,ಸ್ವಾತಂತ್ರಹ ಕುರುಹುಗಳ ಬಗ್ಗೆ ತಿಳಿದಿರಬೇಕು. ನಮ್ಮ ತಿರಂಗಾ ಬಾವುಟದ ಮೂರು ಬಣ್ಣಗಳು ಉತ್ತಮ ಸಂಕೇತಗಳಾಗಿವೆ. ಕೇಸರಿ ಬಣ್ಣ ತ್ಯಾಗದ ಸಂಕೇತವಾದರೆ, ಬಿಳಿ ಬಟ್ಟಣ ಸ್ವಚ್ಛತೆಯ ಸಂ–ಕೇತ ಮತ್ತು ಹಸಿರು ಬಣ್ಣ ಸಮೃದ್ಧಿಯ ಸಂಕೇತಗಳಾಗಿವೆ. ನಮ್ಮ ಸಂವಿಧಾನ ನಮಗೆ ಹಕ್ಕು ಒದಗಿಸುವದರ ಜೊತೆಗೆ ಉತ್ತಮ ಕರ್ತವ್ಯಗಳನ್ನೂ ನೀಡಿದೆ. ಹಕ್ಕು ಮತ್ತು ಕರ್ತವ್ಯಗಳು ಸಮಾನಾಗಿ ಅನಿಭವಿಸಿದಾಗ ಮಾತ್ರ ಸ್ವಾತಂತ್ರಕ್ಕೆ ನಿಜ ಅರ್ಥ ಬರುತ್ತದೆ ಎಂದು ಹೇಳಿದರು.

ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ ಅಧ್ಯಕ್ಷತೆ ವಹಿಸಿ ಮಾತನಾಡಿದರು. ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರೆ ಪ್ರಾಸ್ತಾವಿಕವಾಗಿ ಮಾತನಾಡಿ ಎಲ್ಲರನ್ನೂ ಸ್ವಾಗತಿಸಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ ಸ್ವಾತಂತ್ರೋತ್ಸದ ಬಗ್ಗೆ ಮಾತನಾಡಿದರು. ಇದೇವೇಳೆ ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಧ್ವಜಾರೋಹಣದ ಮುಂಚೆ ಪಟ್ಟಣದ ವಿವಿಧ ಬೀದಿಗಳಲ್ಲಿ ಭಾರತ ಮಾತೆಯ ಭವ್ಯ ಮೆರವಣಿಗೆ ನಡೆಯಿತು.

ಕಾರ್ಯಕ್ರಮದಲ್ಲಿ ಉಪ ತಹಸೀಲ್ದಾರ ಪಲ್ಲವಿ ಬೆಳಕೇರೆ, ಪುರಸಭೆ ಮುಖ್ಯಾಧಿಕಾರಿ ಸಂಗಮೇಶ ಕಾರಬಾರಿ, ಪುರಸಭೆ ಅಧ್ಯಕ್ಷೆ ಶಶಿಕಲಾ ಅಶೋಕ ಸಿಂದನಕೆರೆ, ಉಪಾಧ್ಯಕ್ಷ ವಿಜಯಕುಮಾರ ರಾಜಭವನ,ಸಿಪಿಐಬಿ.ಅಮರೇಶ, ಸಂಜೀವಕುಮಾರ ಭಾವಿಕಟ್ಟಿ, ನಾಗಶೆಟ್ಟೆಪ್ಪ ಲಂಜವಾಡೆ, ಶಿವಕುಮಾರ ಫುಲಾರಿ, ಪ್ರಕಾಶ ಭಾವಿಕಟ್ಟೆ, ಬಿಆರ್‌ಪಿ ಚೇತನಾ ಚನಶೆಟ್ಟಿ, ಇಸಿಓ ಸಹದೇವ.ಜಿ,ಪಿ.ಮಲ್ಲಿಕಾರ್ಜುನ ಉಪಸ್ಥಿತರಿದ್ದರು.

ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರೆ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ಬಿಇಓ ಸಿ.ಜಿ.ಹಳ್ಳದ್ ವಂದಿಸಿದರು.

# ಗ್ಯಾರಂಟಿ ಯೋಜನೆ ಇಡೀ ದೇಶಕ್ಕೆ ಮಾದರಿ: ಸಚಿವ ಈಶ್ವರ ಬಿ.ಖಂಡ್ರೆ

ಬೀದರ,ಅ.15 : ಸರ್ಕಾರವು ಕೊಟ್ಟಮಾತಿನಂತೆ ನಡೆದಿದ್ದೇವೆ. ಎಲ್ಲ ಭರವಸೆಗಳನ್ನು ಈಡೇರಿಸಿದ್ದೇವೆ. ಉತ್ತಮ ಜನಪರ ಆಡಳಿತ ನೀಡಿದ್ದೇವೆ. ಐದು ಗ್ಯಾರಂಟಿಗಳನ್ನು ಯಶಶ್ವಿಯಾಗಿ ಅನುಷ್ಠಾನಗೊಳಿಸಿದ್ದೇವೆಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ತಿಳಿಸಿದರು.

ಸ್ವಾತಂತ್ರೊ ??ೀತ್ಸವದ ಧ್ವಜಾರೋಹಣ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ನಮ್ಮ ಸರಕಾರವು ಜಾರಿಗೊಳಿಸಿದ ಐದು ಗ್ಯಾರಂಟಿ ಯೋಜನೆ ಇಡೀ ದೇಶಕ್ಕೆ ಆದರ್ಶವಾಗಿದೆ. ಇದೇ ಮಾದರಿಯನ್ನು ಪ್ರತಿಪಕ್ಷಗಳು ಸಹ ಅನೇಕ ರಾಜ್ಯಗಳಲ್ಲಿ ಅಳವಡಿಸಿಕೊಂಡಿದ್ದಾರೆ ಎಂದರು. ಗ್ಯಾರಂಟಿ ಜಾರಿಗೊಳಿಸಿದಾಗ ಪ್ರತಿಪಕ್ಷಗಳು ರಾಜ್ಯವು ದಿವಾಳಿ ಆಗುತ್ತದೆ ಎಂದಿದ್ದರು. ಆದರೆ ರಾಜ್ಯದಲ್ಲಿ ಎಲ್ಲವೂ ಸುಭಿಕ್ಷೆ ಇವೆ. ರಾಜ್ಯದಲ್ಲಿ ತಲಾ ಆದಾಯ ಆರ್ಥಿಕತೆ ಜಾಸ್ತಿ ಆಗಿದೆ. ದೇಶದಲ್ಲಿ ತಲಾ ಆದಾಯ ಅಭಿವೃದ್ಧಿಯಲ್ಲಿ ಮುಂಚೂಣಿಯಲ್ಲಿದೆಯೆಂದು ವರದಿಗಳು ತಿಳಿಸಿವೆ ಎಂದರು.

ಏಪ್ರಿಲ್.16 ರಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು 2025 ಕೋಟಿ ರೂ. ವೆಚ್ಚದ ಯೋಜನಾ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮಾಡಿದ್ದರು ಎಲ್ಲ ಕಾಮಗಾರಿಗಳು ಚಾಲ್ತಿಯಲ್ಲಿವೆ. ನೀರಾವರಿ ಯೋಜನೆಗಳು ಆರಂಭಗೊಂಡಿವೆ. 36 ಕೆರೆಗಳನ್ನು ತುಂಬುವ ಯೋಜನೆಯ ಒಂದು ಟಿ.ಎಂ.ಸಿ. ನೀರು ಎತ್ತುವಳಿ ಮಾಡಿ 10 ಸಾವಿರ ಹೆಕ್ಟೆರ್ ಪೈಕಿ 25 ಸಾವಿರ ಎಕರೆ ಭೂಮಿಗೆ ನೀರಾವರಿ ಯೋಜನೆ ಮಾಡುವ ಕಾರ್ಯಕ್ರಮ ಈಗಾಗಲೇ ಔರಾದ್ ಹಾಗೂ ಭಾಲ್ಕಿಯಲ್ಲಿ ಆರಂಭವಾಗಿದೆ ಎಂದರು.

ಜಲಜೀವನ ಮಿಷನ್ ಯೋಜನೆಯಡಿ ಈವರೆಗೆ ಶೇ.80 ರಷ್ಟು ಕಾಮಗಾರಿ ಮುಗಿದಿದೆ. 830 ಜನವಸತಿ ಪ್ರದೇಶದಲ್ಲಿ ಪ್ರತಿಯೊಂದು ಮನೆಗೆ ನೀರು ಕೊಡುವ 800 ಕೋಟಿ ವೆಚ್ಚದ ಕಾರ್ಯಕ್ರಮ ಯಶಸ್ವಿಯಾಗಿ ನಡೆಯುತ್ತಿದೆ. ಈ ಪೈಕಿ 630 ಕೋಟಿ ರೂ. ಅನುದಾನ ರಾಜ್ಯ ಸರಕಾರವು ಈಗಾಗಲೇ ಬಿಡುಗಡೆ ಮಾಡಾಗಿದೆ. ಇನ್ನೂ 200 ಕೋಟಿ ರೂ. ಬೇಕಾಗಿದ್ದು ಬಿಡುಗಡೆ ಆಗುತ್ತದೆ. ಮನೆ ಮನೆಗೆ ಶುದ್ಧ ಕುಡಿಯುವ ನೀರು ಕೊಡುವ ಕಾಮಗಾರಿ ಡಿಸೆಂಬರ್ ಒಳಗಾಗಿ ಪೂರ್ಣಗೊಳಿಸಲಾಗುವುದೆಂದು ತಿಳಿಸಿದರು. ಅಲ್ಲದೇ 739 ಕೋಟಿ ರೂ. ವೆಚ್ಚದ 9 ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಸಹ ಪ್ರಗತಿಯಲ್ಲಿದೆ. ಈ ಪೈಕಿ 150 ಕೋಟಿ ಅನುದಾನ ಖರ್ಚಾಗಿದೆ. ಒಟ್ಟಾರೆ ಈ ಎರಡು ಯೋಜನೆ ಸೇರಿ 1500 ಕೋಟಿ ರೂ. ವೆಚ್ಚದ ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

5 ಗ್ಯಾರಂಟಿ ಅಡಿ ಸುಮಾರು 2300 ಕೋಟಿ ರೂ. ಈವರೆಗೆ ಬೀದರ ಜಿಲ್ಲೆಯ ಜನರಿಗೆ ನೇರವಾಗಿ ಲಭಿಸಿದೆ. ಅನೇಕ ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಜಿಲ್ಲಾಡಳಿತ ಸಂಕೀರ್ಣ ಕಟ್ಟಡ ಟೆಂಡರ್ ಆಗಿದೆ. ಜಾವೇದ್ ಕನ್ಸಟ್ರಕ್ಷನ್‌ಗೆ ಆದೇಶ ಆಗಿದ್ದು ಇಂದು ಮಧ್ಯಾಹ್ನ 2.30 ಗಂಟೆಗೆ ಅನೌಪಚಾರಿಕವಾಗಿ ಪೂಜೆ ಮಾಡಲಾಗುವುದು. 18 ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದರು. ಹೊಸತಾಲ್ಲೂಕುಗಳಲ್ಲಿ 3 ಪ್ರಜಾಸೌಧ ಕಟ್ಟಡಗಳಿಗೆ 8.50 ಕೋಟಿ ವೆಚ್ಚದಲ್ಲಿ ಟೆಂಡರ್ ಆಗಿದೆ. ಗುಣಮಟ್ಟದ ಕಾಮಗಾರಿ ಪ್ರಾರಂಭಿಸಲಾಗುವುದು ಎಂದರು. ಕ್ಯಾನ್ಸರ್ ಪೀಡಿತ ರೋಗಿಗಳಿಗೆ ಅನುಕೂಲವಾಗುವಂತೆ ಬೀದರ್‌ನಲ್ಲಿ 36 ಕೋಟಿ ವೆಚ್ಚದಲ್ಲಿ ಕ್ಯಾನ್ಸರ್ ತಪಾಸಣಾ ಕೇಂದ್ರ ನಿರ್ಮಾಣಕ್ಕೆ ಸರಕಾರ ಮಂಜೂರು ನೀಡಿದೆ. ಪ್ರಾಥಮಿಕ, ಸಮುದಾಯ ಹಾಗೂ ತಾಲ್ಲೂಕಾ ಆರೋಗ್ಯ ಕೇಂದ್ರಗಳನ್ನು ಬಲವರ್ಧಿಸಲು ಕೆ.ಕೆ.ಆರ್.ಡಿ.ಬಿ. ಅಡಿಯಲ್ಲಿ ವಿವಿಧ ಕಾಮಗಾರಿಗಳನ್ನು ಹಮ್ಮಿಕೊಂಡಿದೆ. ಬ್ರಿಮ್ಸ್‌ನಲ್ಲಿ ಕ್ಯಾತ್‌ಲ್ಯಾಬ್ ಆರಂಭಿಸಲು ಇಬ್ಬರು ತಜ್ಞವೈದ್ಯರ ಹಾಗೂ ಇತರೇ ತಾಂತ್ರಿಕ ಸಿಬ್ಬಂದಿ ನೇಮಕಕ್ಕೆ ಕ್ರಮಕೈಗೊಳ್ಳಲಾಗುತ್ತಿದೆ ಎಂದರು ಸಚಿವರು ತಿಳಿಸಿದರು.

ಅರಣ್ಯ ಇಲಾಖೆಯಿಂದ 35 ಲಕ್ಷ ಸಸಿ ನೆಡಲಾಗಿದೆ. ಹೊನ್ನಿಕೇರಿ ಹತ್ತಿರ 15 ಕೋಟಿ ವೆಚ್ಚದ ಪರಿಸರ ಪ್ರವಾಸೋದ್ಯಮ ಕಾಮಗಾರಿಗೆ ಟೆಂಡರ್ ಆಗಿದ್ದು ಕಾಮಗಾರಿ ಆರಂಭಿಸಲಾಗಿದೆ. ಬರ್ಡ ಪಾರ್ಕಿನ ನಿರ್ಮಾಣಕ್ಕೆ 15 ಕೋಟಿ ವೆಚ್ಚದ ಪ್ರಸ್ತಾವನೆ ಸಿದ್ಧಪಡಿಸಲಾಗಿದೆ. ದೇವ ವನ ಅಭಿವೃದ್ಧಿಗೂ ಕ್ರಮ ಕೈಗೊಳ್ಳಲಾಗಿದೆ. ಬೀದರ ವಿಶ್ವವಿದ್ಯಾಲಯದ ಅಭಿವೃದ್ಧಿಗೆ 25 ಕೋಟಿ ವೆಚ್ಚದ ವಿಸ್ತೃತ ಯೋಜನಾ ವರದಿಯನ್ನು ಕ್ಯಾಬಿನೆಟ್‌ನಲ್ಲಿ ಮಂಜೂರು ಮಾಡಲಾಗಿದೆ ಎಂದರು.

ರಾಣಿ ಚೆನ್ನಮ್ಮ ವಸತಿ ಶಾಲೆ, ಮುರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು 15 ಕೋಟಿ ರೂ. ವೆಚ್ಚದಲ್ಲಿ ಔರಾದ್‌ನಲ್ಲಿ ನಿರ್ಮಿಸಲಾಗುತ್ತಿದೆ. ಕಾರ್ಮಿಕ ಇಲಾಖೆಯಿಂದ ಭಾಲ್ಕಿ ಬೀದರ್ ಕಾರ್ಮಿಕರ ಮಕ್ಕಳಿಗೆ ವಸತಿ ಶಾಲೆ ಕ್ಯಾಬಿನೆಟ್‌ನಲ್ಲಿ ಮಂಜೂರು ಮಾಡಲಾಗಿದೆ ಎಂದರು ಸಚಿವರು ತಿಳಿಸಿದರು.

ಕಾರಂಜಾ ಜಲಾಶಯದ ಕೆಳಭಾಗದಲ್ಲಿ ಪ್ರವಾಸೋದ್ಯಮಕ್ಕೆ ಅನುಕೂಲವಾಗುವಂತೆ ಕೆ.ಆರ್.ಎಸ್.ಗಾರ್ಡನ್ ತರಹ ಬೃಹತ್ ಉದ್ಯಾನವನ ನಿರ್ಮಾಣಕ್ಕೂ ಯೋಜನೆ ಸಿದ್ಧಪಡಿಸಲಾಗುತ್ತಿದೆ. ಬೀದರ್‌ನಲ್ಲಿ 25 ಕೋಟಿ ರೂ. ವೆಚ್ಚದ ಸುಸಜ್ಜಿತ ಕ್ರೀಡಾಂಗಣ ನಿರ್ಮಿಸಲು 20 ಎಕರೆ ಭೂಮಿಯನ್ನು ಗುರುತಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೆ ತಿಳಿಸಲಾಗಿದೆ ಎಂದು ಸಚಿವರು ತಿಳಿಸಿದರು.

# 14 ಲಕ್ಷ ರೂ. ಗೂ ಅಧಿಕ ಮೌಲ್ಯದ ಗಾಂಜಾ ವಶ : ಆರೋಪಿ ಬಂಧನ



ಬೀದರ. ಆ. 15 :ಗಾಂಜಾ ಮಾರಾಟ ಮಾಡಲು ಸಾಗಿಸುತ್ತಿದ್ದ 14 ಲಕ್ಷ ರೂ. ಗೂ ಅಧಿಕ ಮೌಲ್ಯದ ಗಾಂಜಾ ಮತ್ತು ಒಂದು ಬೈಕ್ ವಶಕ್ಕೆ ಪಡೆದು ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.

ಸಂತಪೂರ ಪೊಲೀಸ್ ಠಾಣಾ ವ್ಯಾಪ್ತಿಯ ವಡಗಾಂವ್ (ದೆ), ಜಂಬಗಿ (ಬಿ) ಗ್ರಾಮದಿಂದ ಸೊರಳ್ಳಿ ಮಾರ್ಗವಾಗಿ ಗಾಂಜಾ ಮಾರಾಟ ಮಾಡಲು ಬೀದರ್ ನಗರಕ್ಕೆ ಆರೋಪಿ ದ್ವಿಚಕ್ರ ವಾಹನದ ಮೂಲಕ ಗಾಂಜಾ ಸಾಗಾಟ ಮಾಡುತ್ತಿದ್ದ ಮಾಹಿತಿ ಲಭಿಸಿತ್ತು. ಈ ಮಾಹಿತಿ ಮೇರೆಗೆ ಸಂತಪೂರ ಪೊಲೀಸ್ ಠಾಣೆಯ ಪಿಐ ನಂದಕುಮಾರ ಅವರು ತಮ್ಮ ಠಾಣೆಯ ಸಿಬ್ಬಂದಿಯೊಂದಿಗೆ ದಾಳಿ ಮಾಡಿದ್ದಾರೆ. ಆರೋಪಿಯಿಂದ 14,08,700 ರೂ. ಮೌಲ್ಯದ 14 ಕೆ.ಜಿ 87 ಗ್ರಾಂ ಗಾಂಜಾ, 20 ಸಾವಿರ ರೂ. ಮೌಲ್ಯದ ಒಂದು ದ್ವಿಚಕ್ರ ವಾಹನ ಹೀಗೆ 14,28,700 ರೂ. ಮೌಲ್ಯದ ವಸ್ತು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿದು ಬಂದಿದೆ.

ಈ ಘಟನೆಗೆ ಸಂಬಂಧಿಸಿದಂತೆ ಸಂತಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸ್ವಾತಂತ್ರ್ಯ ಹೋರಾಟಗಾರರನ್ನು ಪ್ರತಿಯೊಬ್ಬರೂ ನೆನಪಿಸಿಕೊಳ್ಳಬೇಕು



ಹುಮನಾಬಾದ್:ಅ,15:ಸ್ವಾತಂತ್ರ್ಯ ತಂದುಕೊಟ್ಟ ಹೋರಾಟಗಾರರನ್ನು ಪ್ರತಿಯೊಬ್ಬರು ನೆನಪಿಸಿಕೊಳ್ಳಬೇಕು ಎಂದು ಶ್ರೀ ಮಾಣಿಕಪ್ರಭು ಪತ್ತಿನ ಸೌಹಾರ್ದ ಸಹಕಾರಿಯ ಅಧ್ಯಕ್ಷ ರಮೇಶರಡ್ಡಿ ಅಭಿಪ್ರಾಯ ಪಟ್ಟರು. ನಗರದ ಗಾದಾ ಕಾಂಪ್ಲೆಕ್ಸ್ ನಲ್ಲಿರುವ ಶ್ರೀ ಮಾಣಿಕ ಪ್ರಬು ಪತ್ತಿನ ಸೌಹಾರ್ದ ಸಹಕಾರಿಯಲ್ಲಿ 79ನೇ ಸ್ವಾತಂತ್ರ್ಯದಿನಾಚಾರಣೆ–ಯ ನಿಮಿತ್ಯ ಧ್ವಜಾರೋಹಣ ನೆರವಿಸಿ ಮಹಾತ್ಮಾ ಗಾಂಧಿ ಹಾಗೂ ಡಾ.ಬಿ.ಆರ್ ಅಂಬೇಡ್ಕರ್ ರವರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಯುವಕರು ದುಷ್ಟಟಗಳಿಗೆ ಬಲಿಯಾಗದೆ ದೇಶ ಅಭಿಮಾನ ಬೆಳೆಸಿಕೊಳ್ಳಬೇಕು ಎಂದರು. ಈ ಸಂದರ್ಬದಲ್ಲಿ ವೈಜಿನಾಥ ಧನ್ನೊರೆ,ಝರಣಪ್ಪಾ,ರಮೇಶ ಜಾಧವ, ಮಹೊನರಡ್ಡಿ ಮುಡಬಿ,ರಾಮರಡ್ಡಿ ಕಂಚಟಿ, ಜೈಕಾಂತರಡ್ಡಿ ಕೌಡಿಯಾಳ, ನಾಮದೇವ ಸೂರ್ಯವಂಶಿ, ವೀರಪಾಕ್ಷಪ್ಪ ಹಂದ್ರಾಳ,ಅನೀಲ ಹಂದ್ರಾಳ, ಮಲ್ಲಿಕಾರ್ಜುನ ರಡ್ಡಿ, ದೀಪಕ ಜಮಾದಾರ, ಸೇರಿದಂತೆ ಇತರರಿದ್ದರು

## ಅತಿ ಮಳೆಯಿಂದ ಹಾನಿಗಿಡಾದ ಮನೆಗೆ ಸಚಿವ ಈಶ್ವರ ಬಿ. ಖಂಡ್ರೆ ಭೇಟಿ



ಬೀದರ,ಅ15:ಬೀದರ ನಗರದ ವಿದ್ಯಾನಗರ ಕಾಲೋನಿಯ 11ನೇ ರಸ್ತೆಯಲ್ಲಿರುವ ಕಲ್ಪನಾ ಗಂಡ ಸುನೀಲಕುಮಾರ ರೆಡ್ಡಿ ಅವರ ಮನೆಯು ಅತಿ ಮಳೆಯಿಂದ ಹಾನಿಗಿಡಾಗಿದ್ದು, ವಿಷಯ ತಿಳಿದ ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಹಾನಿಗಿಡಾದ ಮನೆಗೆ ಭೇಟಿ ನೀಡಿದರು. ಹಾನಿಯಾದವರ ಕುಟುಂಬಕ್ಕೆ ಸಚಿವರು ವೈಯಕ್ತಿಕವಾಗಿ 15 ಸಾವಿರ ಹಾಗೂ ಜಿಲ್ಲಾಡಳಿತದಿಂದ 25 ಸಾವಿರ ರೂಪಾಯಿ ನೀಡಲಾಯಿತು.


ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ನಗರಸಭೆ ಆಯುಕ್ತ ಶಿವರಾಜ ರಾಥೋಡ್, ಬೀದರ ಸಹಾಯಕ ಆಯುಕ್ತ ಮೊಹಮದ್ ಶಕೀಲ್, ಬೀದರ ತಾಲೂಕಿನ ತಹಸಿಲ್ದಾರ್ ಸೇರಿದಂತೆ ಇತರೆ ಉಪಸ್ಥಿತರಿದ್ದರು.

# ಡಾ.ಅಪ್ಪಾ ನಿಧನಕ್ಕೆ ಗಣ್ಯರ ಶೋಕ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಅ.15: ಶಿಕ್ಷಣ ಪ್ರೇಮಿ ಹಾಗೂ ಮಹಾದಾಸೋಹ ಸಂಸ್ಥಾನದ 8ನೇ ಪೀಠಾಧಿಪತಿ ಪೂಜ್ಯ ಡಾ.ಶರಣಬಸವಪ್ಪ ಅಪ್ಪ ಅವರು ಲಿಂಗೈಕ್ಯರಾದ ಹಿನ್ನೆಲೆಯಲ್ಲಿ ಅನೇಕ ಗಣ್ಯರು ಶೋಕ ವ್ಯಕ್ತಪಡಿಸಿದ್ದಾರೆ.



ಶರಣಬಸಪ್ಪ ಅಪ್ಪನವರ ಅಗಲಿಕೆ ಅತೀವ ನೋವು ತಂದಿದೆ. ಅವರ ಸಾಮಾಜಿಕ ಕಾರ್ಯವನ್ನು ಇಡೀ ರಾಜ್ಯದ ಜನರು ಎಂದು ಮರೆಯುವುದಿಲ್ಲ. ಮಹಾತ್ಮರನ್ನ ಕಳೆದುಕೊಂಡ ಅದೆಷ್ಟು ಲಕ್ಷಾಂತರ ಭಕ್ತಾದಿಗಳಿಗೆ ಭಗವಂತ ದುಃಖವನ್ನು ನೀಗುವ ಶಕ್ತಿಯನ್ನು ನೀಡಲಿ. ಶಿಕ್ಷಣ ಕ್ರಾಂತಿಯಾಗಲು ಶರಣಬಸಪ್ಪ ಅಪ್ಪನವರ ಕೊಡುಗೆ ಅಪಾರವಾಗಿದೆ.

ರಾಜಶೇಖರ ಪಾಟೀಲ್
ಮಾಜಿ ಸಚಿವ,ಹುಮನಾಬಾದ್



ಕಲಬುರಗಿಯ ಶರಣಬಸಪ್ಪ ಅಪ್ಪಾಜಿ ಅವರ ಅಗಲಿಕೆ ಕಲ್ಯಾಣ ಕರ್ನಾಟಕ ಹಾಗೂ ಶರಣ ಪರಂಪರೆ ದೊಡ್ಡ ನಷ್ಟ ಅನುಭವಿಸಿದೆ. ಎಲ್ಲರಿಗೂ ಮಹಾನ್ ಶರಣರ ಅಗಲಿಕೆ ನೋವು ಸಹಿಸಿಕೊಳ್ಳುವ ಶಕ್ತಿ ಭಗವಂತ ಕರುಣಿಸಲಿ.

ಡಾ. ಚಂದ್ರಶೇಖರ ಪಾಟೀಲ್
ವಿಧಾನ ಪರಿಷತ್ ಸದಸ್ಯ



ಕಲಬುರಗಿಯ ಅಪ್ಪಾಜಿಯವರ ಅಗಲಿಕೆ ಕೋಟ್ಯಾಂತರ ಭಕ್ತರಲ್ಲಿ ದುಃಖ ಆವರಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಪ್ಪಾಜಿ ಶೈಕ್ಷಣಿಕ ಕ್ರಾಂತಿ ಮಾಡಿದವರು. ಅವರ ಅಗಲಿಕೆಯಿಂದ ನಾಡು ಓರ್ವ ದೊಡ್ಡ ಸಂತನನ್ನ ಕಳೆದುಕೊಂಡಂತಾಗಿದೆ. ಅಪ್ಪಾಜಿಯ ಅಗಲಿಕೆ ಸಹಿಸಿಕೊಳ್ಳುವ ಶಕ್ತಿ ಅವರ ಕುಟುಂಬಕ್ಕೆ ಭಗವಂತ ದಯಪಾಲಿಸಲಿ.

ಭೀಮರಾವ ಪಾಟೀಲ್
ವಿಧಾನ ಪರಿಷತ್ ಸದಸ್ಯ

## ಬಗದಲ ಪೊಲೀಸ್ ಠಾಣೆಯಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:–ತಾಲೂಕಿನ ಬಗದಲ ಪೊಲೀಸ್ ಠಾಣೆಯಲ್ಲಿ 79ನೇ ಸ್ವಾತಂತ್ರ್ಯದಿನಾಚರಣೆ ಅಂಗವಾಗಿ ಪಿಎಸ್ಐ ಕಿರಣ ಧೋತ್ರೆ ರಾಷ್ಟ್ರಪಿತ ಮಹಾತ್ಮಾ ಗಾಂಧಿ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ಅಪರಾಧ ವಿಭಾಗದ ಪಿಎಸ್ಐ ಕಲ್ಲಪ್ಪ, ಎಎಸ್ಐ ಮಹಾದೇವಿ, ಅಶೋಕ, ರವಿಕಾಂತ, ಮೀನಾಕುಮಾರಿ ಸೇರಿದಂತೆ ಸಿಬ್ಬಂದಿ ವರ್ಗದವರು ಇದ್ದರು.

## ವಾರ್ತಾ ಇಲಾಖೆಯಲ್ಲಿ 79 ನೇ ಸ್ವಾತಂತ್ರ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.15–ವಾರ್ತಾ ಮತ್ತು ಸಾರ್ವಜನಿಕಸಂಪರ್ಕ ಇಲಾಖೆಯ ಕಚೇರಿ ಆವರಣದಲ್ಲಿ ಶುಕ್ರವಾರ 79ನೇ ಸ್ವಾತಂತ್ರ ದಿನಾಚರಣೆ ಆಚರಿಸಲಾಯಿತು.

ಇಲಾಖೆಯ ವಾರ್ತಾ ಸಹಾಯಕ ವಿ.ಸಿ.ಗುರುರಾಜ ಅವರು ಧ್ವಜಾರೋಹಣ ನೆರವೇರಿಸಿದರು.

## ನಿರ್ಣಾ ಗ್ರಾಮದಲ್ಲಿ ಅದ್ದೂರಿಯಾಗಿ ಜರುಗಿದ ಸ್ವಾತಂತ್ರ್ಯ ದಿನಾಚರಣೆ ಹಾಗೂ ಸಂಸ್ಕೃತಿಕ ಕಾರ್ಯಕ್ರಮಗಳು





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ತಾಲೂಕಿನ ನಿರ್ಣಾ ಗ್ರಾಮ ಪಂಚಾಯತ್ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಸ್ವಾತಂತ್ರ್ಯ ದಿನಾಚರಣೆ ಸಡಗರದಿಂದ ಆಚರಿಸಲಾಯಿತ್ತು. ಬೆಳಿಗ್ಗೆ ಗ್ರಾಮ ಪಂಚಾಯತ್ ಕಚೇರಿಯಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷೆ ಗೀತಾ ಎಂ. ಜೋಗಣೆ ಧ್ವಜಾರೋಹಣ ನೆರವೇರಿಸಿದರು. ಆ ನಂತರ ಶಾಲಾ ಆವರಣದಲ್ಲಿ ನಡೆದ ಬೃಹತ್ ಸಂಸ್ಕೃತಿ ಕಾರ್ಯಕ್ರಮವನ್ನು ಪಿಎಸ್ಐ ಮಹಿಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿಯೇ ನಿರ್ಣಾ ಗ್ರಾಮದಲ್ಲಿ ಸ್ವಾತಂತ್ರ್ಯ ದಿನಾಚರಣೆ ಮಾದರಿ ಕಾರ್ಯಕ್ರಮವಾಗಿ ಮಾಡಿದ್ದಾರೆ. ವಿಶೇಷವಾಗಿ ಎಸ್. ಎಸ್. ಎಲ್. ಸಿ. ಮತ್ತು ಪಿಯುಸಿ ಫಲಿತಾಂಶದಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ಉನ್ನತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಪ್ರೋತ್ಸಾಹಿಸಿದ್ದು ಒಳ್ಳೆಯ ಕಾರ್ಯ ಮಾಡಿದ್ದಾರೆ. ವಿದ್ಯಾರ್ಥಿಗಳಲ್ಲಿ ದೇಶ ಭಕ್ತಿ, ಭಾವನೆ ಒಡಮೂಡಿಸಲು ಈ ಸಂಸ್ಕೃತಿ ಕಾರ್ಯಕ್ರಮಗಳು ಸಹಾಯವಾಗಿವೆ ಎಂದರು. ಮಾಣಿಕಪ್ಪ ಖಾಶೆಂಪುರ್ ಮಾತನಾಡಿ, ನಿರ್ಣಾ ಗ್ರಾಮದಲ್ಲಿ ಪರಂಪರೆಯಂತೆ ಈ ವರ್ಷವೂ ಕೂಡ ಗ್ರಾಮ ಪಂಚಾಯತ್ ವತಿಯಿಂದ ಅದ್ದೂರಿಯಾಗಿ ಸ್ವಾತಂತ್ರ್ಯ ದಿನಾಚರಣೆ ಆಚರಿಸುತ್ತಿರುವುದು ಸಂತೋಷ ತಂದಿದೆ ಎಂದರು. ವಿದ್ಯಾರ್ಥಿಗಳು ದೇಶ ಭಕ್ತರ ವೇಷ ಧರಿಸಿ ಸಾರ್ವಜನಿಕರ ಮೆಚ್ಚುಗೆ ಪಡೆದರು. ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರಿಗೆ ಹಾಗೂ ಪತ್ರಕರ್ತರಿಗೆ ಸನ್ಮಾನ ಮಾಡಲಾಯಿತ್ತು. ಕೊನೆಯಲ್ಲಿ ಗ್ರಾಮ ಪಂಚಾಯತ್ ಉಪಾಧ್ಯಕ್ಷ ಸಂಜೀವಕುಮಾರ್ ಕಿರಣ ವಂದಿಸಿದರು.

ಈ ಸಂದರ್ಭದಲ್ಲಿ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್, ಅಭಿವೃದ್ಧಿ ಅಧಿಕಾರಿ ಬಸವರಾಜ ಗುಗ್ಗರಿ, ಪಿಕೆಪಿಎಸ್ ಅಧ್ಯಕ್ಷ ಜಗನಾಥರೆಡ್ಡಿ ಏಖ್ಖೇಳ್ಳಿ, ಪ್ರಾಂಶುಪಾಲ ಶಿವರಾಜ ಬಿರಾದಾರ್, ಮುಖ್ಯ ಶಿಕ್ಷಕ ವಿಷ್ಣುವರ್ಧನ್ ಸೇರಿದಂತೆ ಗ್ರಾಮ ಪಂಚಾಯತ್ ಸದಸ್ಯರು, ಸಿಬ್ಬಂದಿ ವರ್ಗದವರು ಹಾಗೂ ಗ್ರಾಮಸ್ಥರು, ಶಾಲಾ ಮಕ್ಕಳು ಉಪಸ್ಥಿತರಿದ್ದರು.

## ಸ್ಪರ್ಧಾತ್ಮಕ ಪರೀಕ್ಷೆ ವಿದ್ಯಾರ್ಥಿಗಳಿಗೆ ಯುವ ನಿಧಿ ಯೋಜನೆ ಸಹಕಾರಿ: ಸಂಗಮೇಶ ಗುತ್ತಿ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ಕುಕನೂರ ತಾಲೂಕಿನ ತಳಕಲ್ ಗ್ರಾಮದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಿದ್ದ ಪಂಚ ಗ್ಯಾರೆಂಟಿಗಳಲ್ಲೊಂದಾದ ಯುವನಿಧಿ ಯೋಜನೆಯ 2025 ರ ನೋಂದಣಿ ಪ್ರಕ್ರಿಯೆಗೆ ಚಾಲನೆ ನೀಡಿ ಗ್ಯಾರಂಟಿ ಯೋಜನೆಯ ಕುಕುನೂರು ತಾಲೂಕ ಅಧ್ಯಕ್ಷರಾದ ಸಂಗಮೇಶ ಗುತ್ತಿ ಮಾತನಾಡುತ್ತ ಯುವನಿಧಿ ಯೋಜನೆಯಿಂದ ಬಡ ಯುವಕರು ತಮ್ಮ ಸ್ಪರ್ಧಾತ್ಮಕ ಪರೀಕ್ಷೆಯ ತರಬೇತಿ ಹಾಗೂ ಪುಸ್ತಕಗಳನ್ನು ಕೊಂಡುಕೊಳ್ಳಲು ಮತ್ತು ಕೆಲಸಕ್ಕಾಗಿ ಅರ್ಜಿ ಹಾಕಲು ಯುವನಿಧಿ ಯೋಜನೆ ಅತ್ಯಂತ ಸಹಕಾರಿಯಾಗಿದ್ದು ಹಲವಾರು ಪದವೀಧರರು ಇದರ ಪ್ರಯೋಜನವನ್ನು ಪಡೆದಿರುತ್ತಾರೆ.



ಆದಾಗಿಯೂ ಸಹಿತ ಯುವನಿಧಿ ಯೋಜನೆಯ ಬಗ್ಗೆ ಜಾಗೃತಿಯ ಕೊರತೆ ಎದ್ದು ಕಾಣುತ್ತಿದ್ದು ಗ್ರಾಮ ಪಂಚಾಯತಿ ಮಟ್ಟದಲ್ಲಿ ಯೋಜನೆಯ ಜಾಗೃತಿ ಮೂಡಿಸುವ ಕಾರ್ಯ ಕೈಗೊಳ್ಳುವುದರ ಮೂಲಕ ಪ್ರತಿಯೊಬ್ಬರಿಗೂ ಯೋಜನೆಯ ತಲುಪಿಸುವ ಕಾರ್ಯ ಕೈಗೊಳ್ಳಲಾಗುವುದು ಎಂದು ಹೇಳಿದರು.

ಜೊತೆಗೆ ಯಲಬುರ್ಗಾ ವಿಧಾನಸಭಾ ಕ್ಷೇತ್ರ ಶಿಕ್ಷಣ ಕ್ಷೇತ್ರದಲ್ಲಿ ಅಗಾಧ ಸಾಧನೆ ಮಾಡುತ್ತಿದ್ದು ಈ ಕ್ಷೇತ್ರದಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣದಿಂದ ಸ್ನಾತಕೋತರ ಶಿಕ್ಷಣದವರೆಗೆ ಸರ್ಕಾರಿ ಶಾಲಾ–ಕಾಲೇಜುಗಳ ಸೌಲಭ್ಯವನ್ನು ಹೊಂದಿದ್ದು ಇಲ್ಲಿನ ವಿದ್ಯಾರ್ಥಿಗಳಿಗೆ ಅತ್ಯಂತ ಪ್ರಯೋಜನಕಾರಿಯಾಗಿದೆ ಎಂದು ಹೇಳಿದರು. ತಾಲೂಕಿನಲ್ಲಿ ಇವನಿಗೆ ಯೋಜನೆಯ 6500 ಫಲಾನುಭವಿಗಳಿದ್ದು ಇನ್ನು ಉಳಿದವರ ನೋಂದಣಿಗೆ ಎಲ್ಲಾ ಅಧಿಕಾರಿಗಳು ಸಹಕರಿಸಲಿದ್ದು ಪದವೀಧರರು ಯೋಜನೆಯ ಲಾಭ ಪಡೆದುಕೊಳ್ಳಲಿ ಎಂದು ಕರೆ ನೀಡಿದರು.

ಇದೇ ವೇಳೆಯಲ್ಲಿ ಜಲಾಯೋಜನಾಧಿಕಾರಿ ಶಿವಯೋಗಿ ಮಾತನಾಡುತ್ತ 2023ರ ಡಿಸೆಂಬರ್ 12ರಂದು ಶಿವಮೊಗ್ಗ ನಗರದಲ್ಲಿ ವಿವೇಕಾನಂದ ದಿನಾಚರಣೆಯ ಸಂದರ್ಭದಲ್ಲಿ ಮುಖ್ಯಮಂತ್ರಿಗಳಿಂದ ಯೋಜನೆಗೆ ಚಾಲನೆ ದೊರೆತಿದ್ದು ಅತ್ಯಂತ ಪ್ರಯೋಜನಕಾರಿಯಾಗಿ ಯೋಜನೆ ಯಶಸ್ವಿಯಾಗಿದೆ ಎಂದು ಹೇಳಿದರು.

ಈ ವೇಳೆಯಲ್ಲ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಯಲಬುರ್ಗಾ ತಾಲೂಕ ಅಧ್ಯಕ್ಷ ಸುಧೀರ್ ಕೂರ್ಲಹಳ್ಳಿ, ಜಿಲ್ಲಾ ಸಮಿತಿ ಸದಸ್ಯ ಮಲ್ಲಿಕಾರ್ಜುನ ಜಕಲಿ, ತಾಲೂಕ ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸಂತೋಷ್ ಪಾಟೀಲ್ ಬಿರಾದರ, ಶಿಶು ಅಭಿವೃದ್ಧಿ ಅಧಿಕಾರಿ ಬೆಟ್ಟದಪ್ಪ ಮಾಳೆಕೊಪ್ಪ, ಗ್ರಾಮ ಪಂಚಾಯತಿ ಅಧ್ಯಕ್ಷೆ ಜಾಹೀರಾ ಬೇಗಮ್, ಉಪಾಧ್ಯಕ್ಷೆ ಜಾಹಿರಾ ಬೇಗಂ, ಗ್ರಾಮ ಪಂಚಾಯತಿ ಸದಸ್ಯರು, ಅಭಿವೃದ್ಧಿ ಅಧಿಕಾರಿ ವೀರನಗೌಡ, ಇಂಜಿನಿಯರ್ ಕಾಲೇಜ್ ಹೆಚ್ ಒ ಡಿ ಬಸವರಾಜ, ಪ್ರಮುಖರಾದ ಉಮೇಶ್ ಗೌಡ ಪೊಲೀಸ್ ಪಾಟೀಲ್, ತಿಪ್ಪಣ್ಣ ಚೌಡ್ಕಿ, ಇನ್ನಿತರರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಯುವ ಜನಾಂಗದಲ್ಲಿ ರಾಷ್ಟ್ರಾಭಿಮಾನ ಜಾಗೃತಗೊಳ್ಳಲಿ– ಶ್ರೀ ರಂಭಾಪುರಿ ಜಗದ್ಗುರುಗಳು

ಮಲ್ಲಮ್ಮ ನುಡಿ ವಾರ್ತೆ

ಶ್ರೀರಂಭಾಪುರಿಪೀಠ(ಬಾಳೆಹೊನ್ನೂರು)– ಆಗಸ್ಟ್–15 – ದೇಶಾದ್ಯಂತ ಇಂದು 79ನೇ ಸ್ವಾತಂತ್ರ್ಯೋತ್ಸವ ಸಮಾರಂಭ ಜರುಗುತ್ತಿರುವುದು ಹೆಮ್ಮೆಯ ಸಂಗತಿ. ಬೆಳೆಯುವ ಯುವಜನಾಂಗದಲ್ಲಿ ರಾಷ್ಟ್ರಾಭಿಮಾನ ಬೆಳೆದು ಬರುವ ಅವಶ್ಯಕತೆ ಇದೆಯೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಶ್ರೀ ಜಗದ್ಗುರು ರೇಣುಕಾಚಾರ್ಯ ಶಿಕ್ಷಣ ಪ್ರತಿಷ್ಠಾನದ ಶ್ರೀ ಜಗದ್ಗುರು ರುದ್ರಮುನೀಶ್ವರ ವಸತಿ ಪ್ರೌಢ ಶಾಲೆ ಹಾಗೂ ಶ್ರೀ ವೀರಭದ್ರೇಶ್ವರ ಪ್ರಾಥಮಿಕ ಶಾಲಾ ಆವರಣದಲ್ಲಿ ಸ್ವಾತಂತ್ರ್ಯೋತ್ಸವ ಧ್ವಜಾರೋಹಣ ನೆರವೇರಿಸಿ ಆಶೀರ್ವಚನ ನೀಡುತ್ತಿದ್ದರು.

ಹಲವಾರು ದೇಶಭಕ್ತರ ಪರಿಶ್ರಮದ ಫಲವಾಗಿ ಭಾರತ ಸ್ವಾತಂತ್ರ್ಯ ಪಡೆಯಿತು. ಅವರ ತ್ಯಾಗ ಹೋರಾಟ ಮತ್ತು ಬಲಿದಾನ ಮರೆಯಲಾಗದು. ಸ್ವಾತಂತ್ರ್ಯ ಸಂಗ್ರಾಮದ ಮುಂಚೂಣಿಯಲ್ಲಿ ಮಹಾತ್ಮಾಗಾಂಧೀಜಿ, ವಲ್ಲಭಭಾಯಿ ಪಟೇಲ, ಸುಭಾಷಚಂದ್ರ ಬೋಸ್, ಜವಾಹರಲಾಲ್ ನೆಹರೂ, ಬಾಲಗಂಗಾಧರ ತಿಲಕ, ಲಾಲಾ ಲಜಪತರಾಯ, ಸರೋಜಿನಿ ನಾಯ್ಡು ಇನ್ನೂ ಮೊದಲಾದ ನಾಯಕರ ನಿರಂತರ ಹೋರಾಟದಿಂದ ಭಾರತ ಸ್ವಾತಂತ್ರ್ಯ ಪಡೆಯಲು ಸಾಧ್ಯವಾಯಿತು. ಸ್ವಾತಂತ್ರ್ಯಾನಂತರ ಭಾರತ ಅಭಿವೃದ್ಧಿಯತ್ತ ಸಾಗುತ್ತಿದೆ. ಸಶಕ್ತ ಸದೃಢ ರಾಷ್ಟ್ರ ನಿರ್ಮಾಣಕ್ಕಾಗಿ ಅನೇಕ ರಾಜಕೀಯ ಧುರೀಣ–ರು ಶ್ರಮಿಸಿದ್ದಾರೆ. ದೇಶದ ಸಮಗ್ರ ಅಭಿವೃದ್ಧಿ, ನೀರಾವರಿ, ಉದ್ಯೋಗ, ಬಡತನ ನಿವಾರಣೆ, ಅಸ್ಪ್ರಶ್ಯೋದ್ದಾರ ಮಾಡುವಲ್ಲಿ ಶ್ರಮಿಸುತ್ತ ಬಂದಿದೆ. ಭವಿಷ್ಯತ್ತಿನ ದಿನಗಳಲ್ಲಿ ಪ್ರತಿಯೊಬ್ಬರಲ್ಲಿ ದೇಶಾಭಿಮಾನ ರಾಷ್ಟ್ರ ಪ್ರಜ್ಞೆ ಬೆಳೆಸುವ ನಿಟ್ಟಿನಲ್ಲಿ ಎಲ್ಲರೂ ಶ್ರಮಿಸಬೇಕಾಗಿದೆ. ವಿವಿಧತೆಯಲ್ಲಿ ಏಕತೆಯಿಂದ ಬಾಳುವ ಮನೋಭಾವ ಎಲ್ಲರಲ್ಲೂ ಬೆಳೆದು ಬರಬೇಕೆಂದು ಆಶಿಸಿದರು.



ಶಾಲಾಪ್ರಭಾರಿ ಮುಖ್ಯೋಪಾಧ್ಯಾಯ ವೀರೇಶ ಕುಲಕರ್ಣಿ, ಸಹ ಶಿಕ್ಷಕರು, ಗ್ರಾಮ ಪಂಚಾಯತಿ ಸದಸ್ಯ ಕುಮಾರ, ಮಹೇಶ ಆಚಾರಿ, ನೆಗಳೂರು ಮತ್ತು ಹುಡುಗಿ ಶ್ರೀಗಳು ಉಪಸ್ಥಿತರಿದ್ದರು. ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಚಿತ್ರ: ಶ್ರೀ ಜಗದ್ಗುರು ರಂಭಾಪುರಿ ಪೀಠದ ಶ್ರೀ ಜಗದ್ಗುರು ರೇಣುಕಾಚಾರ್ಯ ಶಿಕ್ಷಣ ಪ್ರತಿಷ್ಠಾನದ ಶ್ರೀ ಜಗದ್ಗುರು ರುದ್ರಮುನೀಶ್ವರ ವಸತಿ ಪ್ರೌಢ ಶಾಲೆ ಹಾಗೂ ಶ್ರೀ ವೀರಭದ್ರೇಶ್ವರ ಪ್ರಾಥಮಿಕ ಶಾಲಾ ಆವರಣದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಸ್ವಾತಂತ್ರ್ಯೋತ್ಸವ ಧ್ವಜಾರೋಹಣ ನೆರವೇರಿಸಿದರು.

## ಜಿಲ್ಲಾ ಉಸ್ತುವಾರಿ ಸಚಿವರಿಂದ ರಾಯಚೂರಿನಲ್ಲಿ ಟ್ರಾಮಾ ಕೇರ್ ಸೆಂಟರ್‌ಗೆ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 15 – ಇಲ್ಲಿನ ರಾಜೀವ್ ಗಾಂಧಿ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆಯ ಆವರಣದಲ್ಲಿ ಟ್ರಾಮಾ ಕೇರ್ ಸೆಂಟರ್‌ಗೆ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ಆರ್ ಪಾಟೀಲ್ ಅವರು ಆಗಸ್ಟ್ 15ರಂದು ಚಾಲನೆ ನೀಡಿದರು.



ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಗ್ಗೆ ಜಿಲ್ಲಾಡಳಿತದಿಂದ ನಡೆದ ಸ್ವಾತಂತ್ರ ದಿನೋತ್ಸವದ ರಾಷ್ಟ್ರಧ್ವಜಾರೋಹಣ ನೆರವೇರಿಸಿದ ಬಳಿಕ ಸಚಿವರು, ಒಪೆಕ್ ಆಸ್ಪತ್ರೆಯ ಆವರಣಕ್ಕೆ ತೆರಳಿ ಟ್ರಾಮಾ ಕೇರ್ ಸೆಂಟರ್ ಉದ್ಘಾಟನಾ ಸಮಾರಂಭದಲ್ಲಿ ಭಾಗಿಯಾದರು.

ಇದೆ ವೇಳೆ ಸಚಿವರು, ಆಸ್ಪತ್ರೆಯ ಕಚೇರಿಗೆ ತೆರಳಿ ಟ್ರಾಮಾ ಕೇರ್ ಸೆಂಟರ್ ಕಾರ್ಯಯೋಜನೆಯ ಬಗ್ಗೆ ಟ್ರಾಮಾ ಕೇರ್ ಸೆಂಟರ್ ವಿಶೇಷಾಧಿಕಾರಿ ಡಾ.ಬಾಲಾಜಿ ಪೈ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರಾದ ಡಾ. ರಮೇಶ್ ಬಿ. ಹೆಚ್., ರಾಜೀವಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ವಿಶೇಷಾಧಿಕಾರಿ ಡಾ.ರಮೇಶ್ ಸಿ. ಸಾಗರ್, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ಗುರುಸಿದ್ದಯ್ಯ ಹಿರೇಮಠ, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆರ್ಥಿಕ ಅಧಿಕಾರಿ ಹನುಮೇಶ ಸೇರಿದಂತೆ ಇತರರೊಂದಿಗೆ ಕೆಲಹೊತ್ತು ಚರ್ಚಿಸಿದರು.

ಇದೆ ಸಂದರ್ಭದಲ್ಲಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರಾದ ಡಾ.ಬಿ.ಎಲ್.ಸುಜಾತ ರಾಥೋಡ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಇನ್ನಿತರ ಅಧಿಕಾರಿಗಳು, ವೈದ್ಯಾಧಿಕಾರಿಗಳು, ತಜ್ಞ ವೈದ್ಯರು, ವೈದ್ಯರು, ಸಿಬ್ಬಂದಿ ಉಪಸ್ಥಿತರಿದ್ದರು.

ಮುಕ್ತ ಮತ್ತು ಸಮೃದ್ಧ ಭಾರತಕ್ಕಾಗಿ ನಮ್ಮನ್ನು ನಾವು ದೇಶಕ್ಕೆ ಅರ್ಪಿಸಿಕೊಳ್ಳೋಣ:

## ಹಿರಿಯ ನ್ಯಾಯಮೂರ್ತಿ ಹೆಚ್.ಪಿ. ಸಂದೇಶ

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ:ಆ.15–ಬ್ರಿಟಿಷ್ ವಸಾಹತುಶಾಹಿ ಆಳ್ವಿಕೆಯಿಂದ ನಮ್ಮ ದೇಶಕ್ಕೆ ಆಗಸ್ಟ್ 15, 1947 ಸ್ವಾತಂತ್ರ್ಯ ದೊರೆತರು ಸಹ ಅಂದು ಧ್ವಜಾರೋಣವನ್ನು ಮಾಡುವುದು ಮಾತ್ರ ಆಗಿರಲಿಲ್ಲ, ಅದು ಭವ್ಯ ಭಾರತದ ಭವ್ಯತೆ ಎತ್ತಿ ಹಿಡಿಯುವ ದಿನವಾಗಿತ್ತು ಮತ್ತು ಆ ಸ್ವಾತಂತ್ರ ಹೋರಾಟಕ್ಕಾಗಿ ಧೈರ್ಯದಿಂದ ಹೋರಾಡಿದ ಸ್ವಾತಂತ್ರ್ಯ ಹೋರಾಟಗಾರರ ಧೈರ್ಯ, ತ್ಯಾಗ, ಸಮರ್ಪಣಾ ಮನೋಭಾವದ ರಕ್ತ ಇಂದು ನಮ್ಮ ರಕ್ತನಾಳಗಳಲ್ಲಿ ಹರಿಯುತ್ತಿದೆ ಎನ್ನುವುದು ಹೆಮ್ಮೆ ಪಡಬೇಕಾದ ವಿಷಯವಾಗಿದೆ ಎಂದು ಕಲಬುರಗಿ ಪೀಠದ ಗೌರವಾನ್ವಿತ ಹಿರಿಯ ನ್ಯಾಯಮೂರ್ತಿಗಳಾದ ಹೆಚ್.ಪಿ. ಸಂದೇಶ ಅವರು ಹೇಳಿದರು.

ಶುಕ್ರವಾರದಂದು ಉಚ್ಛ ನ್ಯಾಯಾಲಯದ ಆವರಣದಲ್ಲಿ 79ನೇ ಸ್ವಾತಂತ್ರೋತ್ಸವ ದಿನಚಾರಣೆ ಅಂಗವಾಗಿ ಮಹಾತ್ಮಗಾಂಧೀಜಿ ಮತ್ತು ಡಾ.ಬಿ.ಆರ್. ಅಂಬೇಡ್ಕರ್ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಮಾಡಿ ಧ್ವಜಾರೋಹಣ ನೇರವೇರಿಸಿ ಮಾತನಾಡಿದ ಅವರು ಭಾರತದಲ್ಲಿ ಪ್ರಜಾಪ್ರಭುತ್ವ ಅಳವಡಿಸಿಕೊಂಡ ನಂತರ ನ್ಯಾಯಾಂಗವು ಸರ್ಕಾರದ ಅಂಗಗಳಲ್ಲಿ ಪ್ರಮುಖ ಪಾತ್ರವಹಿಸಿದ್ದು, ಅದು ಮುಖ್ಯವಾಗಿ ನಾಗರೀಕರಿಗೆ ಕಾನೂನು ಅರ್ಥೈಸುತ್ತದೆ, ಜನರ ವಿವಾದಗಳನ್ನು ಪರಿಹರಿಸುತ್ತದೆ ಮತ್ತು ನ್ಯಾಯವನ್ನು ಎತ್ತಿ ಹಿಡಿಯುತ್ತದೆ ಎಂದರು.

ನ್ಯಾಯಾಂಗವು ಪ್ರಜಾಪ್ರಭುತ್ವ ಕಾವಲುಗಾರ ಮತ್ತು ಸಂವಿಧಾನದ ರಕ್ಷಕ, ಸತ್ಯವನ್ನು ಹುಡುಕುವುದು ನ್ಯಾಯಾಲಯದ ಕರ್ತವ್ಯ. ದೇಶದ ಸಂರಕ್ಷಣೆ ಮತ್ತು ನೈತಿಕ ತತ್ವಗಳನ್ನು ಆಚರಣೆ ಮಾಡುತ್ತದೆ ಎಂದು ಅವರು ತಿಳಿಸಿದರು.

ನ್ಯಾಯಾಂಗದ ಆಧಾರಸ್ತಂಭಗಳಾದ ನ್ಯಾಯಾಧೀಶರು ವಕೀಲರು ಮತ್ತು ಸಿಬ್ಬಂದಿ ವರ್ಗದ ಜವಾಬ್ದಾರಿ ಆಗಿರುತ್ತದೆ ನ್ಯಾಯಾಂಗದ ಮೇಲೆ ಜನರು ವಿಶ್ವಾಸವನ್ನು ಇರಿಸುವಂತೆ ಮಾಡಲು ನಾವು ಶ್ರಮಿಸೋಣ ಎಂದು ಕರೆ ನೀಡಿದರು.

ವಿವೇಕಾನಂದರ ಭೋಧನೆಗಳು ಮತ್ತು ಸಂದೇಶಗಳು ಸ್ವಾತಂತ್ರ್ಯ ಹೋರಾಟಗಾರರು ಮತ್ತು ಭಾರತದ ಸ್ವಾತಂತ್ರ್ಯ ಚಳುವಳಿಯ ಪ್ರಮುಖ ನಾಯಕರ ಮೇಲೆ ಪ್ರಭಾವ ಬೀರಿದ್ದವು ಎಂದು ತಿಳಿಸುತ್ತ ಇತರ ಮಹಾನ್ ವ್ಯಕ್ತಿಗಳಾದ ಮಹಾತ್ಮ ಗಾಂಧಿ, ಸಭಾಷ ಚಂದ್ರಬೋಸ್ , ಭಗತ್ ಸಿಂಗ್, ಝಾನ್ಸಿ ರಾಣಿ ಲಕ್ಷ್ಮಿಬಾಯಿ ಮತ್ತಿತರ ಸ್ವಾತಂತ್ರ್ಯ ಹೋರಾಟಗಾರರನ್ನು ಸ್ಮರಿಸಿದರು. ಮತ್ತು ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಮಾತನ್ನು ಉಲ್ಲೇಖಿಸುತ್ತ " ನಾವು ಎಷ್ಟು ಓದಿದ್ದೇವೆ ಎಂಬುದು ಮುಖ್ಯವಲ್ಲ, ಆ ಓದು ನಮಗೆ ಎಷ್ಟು ಸಂಸ್ಕಾರವನ್ನು ಕಲಿಸಿದೆ ಎಂಬುದು ಮುಖ್ಯ" ಎಂದು ಹೇಳಿದರು.

ನಾವು ಸ್ವಾತಂತ್ರ್ಯ ಪರಂಪರೆಯ ಉತ್ತರಾಧಿಕಾರಿಗಳು ಸ್ವಾತಂತ್ರ್ಯದ ಜ್ಯೋತಿಯನ್ನು ಮುಂದಕ್ಕೆ ಕೊಂಡೊಯ್ಯುವುದು ಮತ್ತು ಬಲವಾದ ಸ್ವತಂತ್ರ ಭಾರತವನ್ನು ನಿರ್ಮಿಸುವುದು ನಮ್ಮ ಜವಾಬ್ದಾರಿಯಾಗಿದೆ ಈ ನಿಟ್ಟಿನಲ್ಲಿ ನಾವು ಸ್ವಾವಲಂಬನೆಯನ್ನು ಅಳವಡಿಸಿಕೊಳ್ಳಬೇಕು.

ಆರ್ಥಿಕ, ಕೈಗಾರಿಕೆ ಮತ್ತು ಮಿಲಿಟರಿ ಕ್ಷೇತ್ರಗಳಲ್ಲಿ ನಾವು ಸ್ವಾವಲಂಭಿಗಳಾಗಿರಬೇಕು, ಆಗ ಮಾತ್ರ ನಮ್ಮ ಸ್ವಾತಂತ್ರ್ಯ ಅರ್ಥಪೂರ್ಣವಾಗುತ್ತದೆ. ಮುಕ್ತ ಮತ್ತು ಸಮೃದ್ಧ ಭಾರತದ ಉದ್ದೇಶಕ್ಕಾಗಿ ನಮ್ಮನ್ನು ನಾವು ಅರ್ಪಿಸಿಕೊಳ್ಳೋಣ ಎಂದು ಹೇಳಿದರು.

ಇದೇ ಸಂದರ್ಭದಲಿ ಗೌರವಾನ್ವಿತ ನ್ಯಾಯಮೂರ್ತಿಗಳಾದ ಅಶೋಕ ಎಸ್. ಕಿಣಗಿ, ಜ್ಯೋತಿ ಮೂಲಿಮನಿ, ಶಿವಶಂಕರ ಅಮರಣ್ಣವರ್, ಎಂ.ಜಿ. ಉಮಾ, ಟಿ.ಎಂ. ನದಾಫ್, ಅಪರ ಮಹಾವಿಲೇಖನಾಧಿಕಾರಿಗಳಾದ ಬಸವರಾಜ ಚೇಂಗಣಿ, ಗುಲಬರ್ಗಾ ವಕೀಲರ ಸಂಘದ ಅಧ್ಯಕ್ಷರಾದ ಎಸ್.ವಿ. ಪಸಾರ, ಉಚ್ಛನ್ಯಾಯಾಲಯ ಘಟಕದ ಉಪಾಧ್ಯಕ್ಷರಾದ ಅನಂತ ಜಹಾಗೀರದಾರ, ಸಂಘದ ಪ್ರಧಾನ ಕಾರ್ಯದರ್ಶಿಗಳು, ಇತರ ಪದಾಧಿಕಾರಿಗಳು, ಸರ್ಕಾರಿ ವಕೀಲರು ಮತ್ತು ಹಿರಿಯ ಮತ್ತು ಕಿರಿಯ ವಕೀಲರು, ಉಚ್ಛನ್ಯಾಯಾಲಯದ ಸಿಬ್ಬಂದಿ ವರ್ಗದವರು, ಇನ್ನಿತರ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಗೂ ಶಾಲಾ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಶ್ರೀ ಗುರು ತಿಪ್ಪೇರುದ್ರ ಕಾಲೇಜಿನಲ್ಲಿ 79ನೇ ಸ್ವಾತಂತ್ರ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆಬಳ್ಳಾರಿ,ಆ.15– ಕೇಂದ್ರ ಸಂವಹನ ಇಲಾಖೆ ಬಳ್ಳಾರಿ ಹಾಗೂ ಶ್ರೀ ಗುರು ತಿಪ್ಪೇರುದ್ರ ಪದವಿ ಪೂರ್ವ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ಕಾಲೇಜಿನ ಆವರಣದಲ್ಲಿ ಶುಕ್ರವಾರ 79ನೇ ಸ್ವಾತಂತ್ರ ದಿನ ಆಚರಿಸಲಾಯಿತು.

ಸಂಸ್ಥೆಯ ನಿರ್ದೇಶಕರಾದ ಮಂಜುಳಾ ರಾಷ್ಟ್ರ ಧ್ವಜಾರೋಹಣಾ ನೆರವೇರಿಸಿದರು.

ವಿದ್ಯಾಸಂಸ್ಥೆಯ ಕಾರ್ಯದರ್ಶಿ ನಾಗರಾಜ ಅವರು ಮಾತನಾಡಿ ಹಲವಾರು ಗಣ್ಯರ ಬಲಿದಾನದ ಫಲವಾಗಿ ನಮಗೆ ಸ್ವಾತಂತ್ರ ದೊರಕಿದೆ. ಹಾಗಾಗಿ ಅವರನ್ನು ತಪ್ಪದೇ ಸ್ಮರಿಸಬೇಕು ಎಂದು ಹೇಳಿದರು.

ಕೇಂದ್ರ ಸಂವಹನ ಇಲಾಖೆಯ ಎನ್. ರಾಮಕೃಷ್ಣ ಅವರು ಮಾತನಾಡಿ, ಕೇಂದ್ರ ಸಂವಹನ ಇಲಾಖೆಯು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, 79ನೇ ಸ್ವಾತಂತ್ರ ದಿನದ ಅಂಗವಾಗಿ ವಿದ್ಯಾರ್ಥಿಗಳಿಗೆ ರಂಗೋಲಿ ಸ್ಪರ್ಧೆ, ದೇಶ ಭಕ್ತಿಗೀತೆಗಳ ಗಾಯನ ಸ್ಪರ್ಧೆ, ಪ್ರಬಂಧ ಸ್ಪರ್ಧೆ ಮತ್ತು ಭಾಷಣ ಸ್ಪರ್ಧೆಗಳನ್ನು ಏರ್ಪಡಿಸಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಿರುಗುಪ್ಪದ ನೇತ್ರಕಲಾ ಸಂಘ ತಂಡದಿಂದ ದೇಶಭಕ್ತಿ ಗೀತೆಗಳನ್ನು ಪ್ರಸ್ತುತಪಡಿಸಿದರು.

ಕಾರ್ಯಕ್ರಮದಲ್ಲಿ ಗುರು ತಿಪ್ಪೇರುದ್ರ ಪದವಿ ಕಾಲೇಜಿನ ಪ್ರಾಂಶುಪಾಲರಾದ ರೀನಾ ರೆಡ್ಡಿ, ಪದವಿಪೂರ್ವ ಪ್ರಾಂಶುಪಾಲರಾದ ಶಾರದಾ.ಬಿ., ಪ್ರೌಢಶಾಲಾ ವಿಭಾಗದ ಮುಖ್ಯೋಪಾಧ್ಯಾಯರಾದ ಇಲಿಯಾಸ್, ಉಪನ್ಯಾಸಕ ಕೃಷ್ಣಪ್ಪ, ಪದ್ಮಾವತಿ ಮುಂತಾದವರು ಉಪಸ್ಥಿತರಿದ್ದರು.

ವಿಜಯನಗರ ಶ್ರೀಕೃಷ್ಣದೇವರಾಯ ವಿವಿಯಲ್ಲಿ ಎರಡು ದಿನಗಳ ಅಂತರಾಷ್ಟ್ರೀಯ ಸಮ್ಮೇಳನ

# ಶಿಕ್ಷಣ ರಂಗದಲ್ಲಿ ತಂತ್ರಜ್ಞಾನದಿಂದ ಕೌಶಲ್ಯ ವೃದ್ಧಿ: ಪ್ರೊ.ಈರೇಸಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.15–ತಂತ್ರಜ್ಞಾನಯುಗದಲ್ಲಿ ಕೌಶಲ್ಯಆಧಾರಿತಶಿಕ್ಷಣವನ್ನುಶೈಕ್ಷಣಿಕ ರಂಗದಲ್ಲಿ ಅಳವಡಿಸಿಕೊಂಡು ವಿದ್ಯಾರ್ಥಿಗಳನ್ನು ಮುಂದಿನ ಪೀಳಿಗೆಯಉದ್ಯಮಶೀಲರನ್ನಾಗಿಸಲು ಪ್ರತಿಯೊಬ್ಬ ಉಪನ್ಯಾಸಕರು ನಿರಂತರ ಕಲಿಕಾ ಕ್ರಮಗಳನ್ನು ತಮ್ಮದಾಗಿಸಿಕೊಳ್ಳಬೇಕು ಎಂದು ಬೆಂಗಳೂರು ವಿಶ್ವವಿದ್ಯಾಲಯದ ವಾಣಿಜ್ಯಶಾಸ್ತ್ರ ನಿಕಾಯದ ಮಾಜಿ ಡೀನರಾದಪ್ರೊ.ಕೆ.ಈರೇಸಿಹೇಳಿದರು.

ವಿಜಯನಗರಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ವಾಣಿಜ್ಯಶಾಸ್ತ್ರ ಅಧ್ಯಯನ ವಿಭಾಗ ಹಾಗೂ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಸಹಭಾಗಿತ್ವದಲ್ಲಿ ಆಯೋಜಿಸಿರುವ ಎರಡು ದಿನಗಳ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾಡಿದರು.

ಭಾರತವುವೈವಿಧ್ಯಮಯರಾಷ್ಟ್ರವಾಗಿದ್ದು, ಮಾಹಿತಿ–ತಂತ್ರಜ್ಞಾನ,ವಿಜ್ಞಾನ,ಆವಿಷ್ಕಾರಗಳ ಸಂಗಮವಾಗಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಗುರುಕುಲ ಮಾದರಿ ಶಿಕ್ಷಣ, ಪತ್ಯ ಆಧಾರಿತ ಶಿಕ್ಷಣ,ಅಂತರ್ಜಾಲ ಕೇಂದ್ರಿತ ಶಿಕ್ಷಣ, ಯಂತ್ರಗಳ ಆಧಾರಿತ ಶಿಕ್ಷಣ, ಸಮುದಾಯ ಸಂಶೋಧನೆ ಶಿಕ್ಷಣ ಮಾದರಿ ಆಳವಡಿಸಿಕೊಳ್ಳಲಾಗಿದೆ ಎಂದರು.

ದೇಶವು ಇಂದು ಆಧ್ಯಾತ್ಮಿಕವಾಗಿ, ಭೌತಿಕವಾಗಿ, ಆರ್ಥಿಕವಾಗಿ ಹಾಗೂ ತಾಂತ್ರಿಕವಾಗಿ ಸಶಕ್ತಗೊಂಡಿದೆ. ದೇಶದ ಪ್ರತಿಯೊಬ್ಬ ನಾಗರಿಕನು ನಿರಂತರ ಕಲಿಕೆ ಕೈಗೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.

ಮುಖ್ಯ ಭಾಷಣಕಾರರಾಗಿ ಲಂಡನ್‌ನ ಇನ್ಸಿಟ್ಯೂಟ್ ಆಫ್ ಅನಲಿಟಿಕ್ಸ್ ಶಿಕ್ಷಣಶಾಸ್ತ್ರದ ನಿರ್ದೇಶಕ ಡಾ.ಕ್ಲೇರ್ ವಾಲ್ಸ್ ಅವರು ಮಾತನಾಡಿ, ಕೃತಕ ಬುದ್ಧಿಮತ್ತೆ ಹಾಗೂ ಮಷಿನ್ ಲರ್ನಿಂಗನ್ನು ಜಗತ್ತಿನ ಅಗ್ರಗಣ್ಯ ಕಂಪನಿಗಳು ಮತ್ತು ಉದ್ಯಮಿಗಳು ಅಳವಡಿಸಿಕೊಂಡಿದ್ದಾರೆ. ಎಐ ತಂತ್ರಜ್ಞಾನವು ಕೆಲವು ಸಂದರ್ಭಗಳಲ್ಲಿ ಮಾನವನ ಕಲಿಕಾ ಕೌಶಲ್ಯಗಳನ್ನು ಕುಂಠಿತಗೊಳಿಸುತ್ತವೆ. ಆದಾಗ್ಯೂ ಇಂದಿನ ಅಗತ್ಯತೆಗೆ ತಕ್ಕಂತೆ ಎಐ ಬಳಕೆ ಮಾಡಿಕೊಂಡು ಕೆಲಸ ಮಾಡುವ ಅನಿವಾರ್ಯತೆ ಎಲ್ಲೆಡೆ ಮನೆಮಾಡಿದೆ ಎಂದರು.

ವಿಶ್ವವಿದ್ಯಾಲಯದ ನಿರ್ವಹಣಾಶಾಸ್ತ್ರ ನಿಕಾಯದ ಮಾಜಿ ಡೀನರಾದ ಪ್ರೊ. ಜಯಣ್ಣ ಅವರು ಗೌರವ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ, ವಿಶ್ವವಿದ್ಯಾಲಯದಲ್ಲಿ ವಾಣಿಜ್ಯಶಾಸ್ತ್ರ ವಿಭಾಗ ಪ್ರಾರಂಭಕ್ಕೆ ಶ್ರಮಿಸಿದ ನೆನಪುಗಳನ್ನು ಮೆಲುಕು ಹಾಕಿದರು. ಇಂದು ವಿಭಾಗದ ಬೆಳವಣಿಗೆ ನೋಡಿ ಸಂತಸವಾಗುತ್ತಿದೆ. ಸಮ್ಮೇಳನವು ವಿದ್ಯಾರ್ಥಿಗಳ ಭವಿಷ್ಯಕ್ಕೆ ದಾರಿದೀಪವಾಗಲಿ ಎಂದು ಹಾರೈಸಿದರು.

ವಿವಿಯ ಕುಲಸಚಿವ ಸಿ.ನಾಗರಾಜು ಮಾತನಾಡಿ, ತಂತ್ರಜ್ಞಾನವನ್ನು ಮನುಷ್ಯರೇ ಆವಿಷ್ಕರಿಸುತ್ತಾರೆ. ಇಂದು ಯಂತ್ರಗಳು ಮನುಷ್ಯನನ್ನು ನಿಯಂತ್ರಿಸುವ ಮಟ್ಟಿಗೆ ಮಾರ್ಪಾಡಾಗಿವೆ. ಇದು ಹೀಗೆ ಮುಂದುವರೆದರೆ ಮುಂದೊಂದು ದಿನ ಮನುಷ್ಯನ ವಿಚಾರಕ್ಕೆ ಯಾವುದೇ ಬೆಲೆ ಇಲ್ಲದಂತಾಗುತ್ತದೆ. ಈ ನಿಟ್ಟಿನಲ್ಲಿ ತಂತ್ರಜ್ಞಾನಗಳ ಉಪಯೋಗ ಸದ್ಬಳಕೆಯಿಂದ ಕೂಡಿರಲಿ ಎಂದು ಕಿವಿಮಾತು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ವಿವಿಯ ಕುಲಪತಿ ಪ್ರೊ.ಎಂ.ಮುನಿರಾಜು ಮಾತನಾಡಿ, ಎಐ ಮತ್ತು ಅನಾಲಿಟಿಕ್ಸ್ ಪ್ರಸ್ತುತವಾಗಿ ಪ್ರಾಮುಖ್ಯತೆ ಪಡೆದುಕೊಂಡಿರುವ ಕ್ಷೇತ್ರಗಳಾಗಿವೆ. ವಿವಿಯ ಅಧೀನದ ಎಲ್ಲ ವಾಣಿಜ್ಯಶಾಸ್ತ್ರ ಉಪನ್ಯಾಸಕರಿಗೆ ಬಿಸಿನೆಸ್ ಅನಾಲಿಟಿಕ್ಸ್ ವಿಷಯದ ಕುರಿತು ತರಬೇತಿ ಕಾರ್ಯಾಗಾರ ನಡೆಸಲು ಕ್ರಮ ವಹಿಸಲಾಗುವುದು. ಎಐ ಕುರಿತು ಪರಿಣಿತಿ ಪಡೆದುಕೊಂಡು ಕೌಶಲ್ಯ ವೃದ್ಧಿಸಿಕೊಂಡರೆ ವಿದ್ಯಾರ್ಥಿಗಳು ವಿಶ್ವದ ಯಾವ ದೇಶದಲ್ಲಾದರು ಕೆಲಸ ಗಿಟ್ಟಿಸಿಕೊಳ್ಳಬಹುದು ಎಂದರು.

ವಿವಿಯ ಪರೀಕ್ಷಾಂಗ ಕುಲಸಚಿವ ಪ್ರೊ.ಎನ್.ಎಂ.ಸಾಲಿ, ಕಾರ್ಯಕ್ರಮದ ಸಂಚಾಲಕ ಹಾಗು ವಿವಿಯ ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ.ಸದ್ಯೋಜಾತಪ್ಪ ಸೇರಿದಂತೆ ವಿವಿಧ ದೇಶಗಳ, ಹಲವಾರು ರಾಜ್ಯಗಳ 200ಕ್ಕೂ ಹೆಚ್ಚು ಸಂಶೋಧಕರು, ಉಪನ್ಯಾಸಕ ವರ್ಗ, ವಿವಿಯ ವಿವಿಧ ನಿಕಾಯಗಳ ಡೀನರು, ಬೋಧಕ–ಬೋಧಕೇತರ ವರ್ಗ, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಅತಿಥಿ ಉಪನ್ಯಾಸಕರ ನೇಮಕ; ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.15–ಸಂಡೂರು ತಾಲ್ಲೂಕಿನ ವಡ್ಡಿನಕಟ್ಟೆ ಗ್ರಾಮದ ಕಿತ್ತೂರುರಾಣಿಚೆನ್ನಮ್ಮಪದವಿಪೂರ್ವ ಕಾಲೇಜಿನಲ್ಲಿ ನೂತನವಾಗಿ ಆರಂಭಿಸಿರುವ ವಿಜ್ಞಾನ ವಿಭಾಗ–ಕ್ಕೆ ಅತಿಥಿ ಉಪನ್ಯಾಸಕರನ್ನು ಗೌರವಧನ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಕಿತ್ತೂರುರಾಣಿ ಚೆನ್ನಮ್ಮ ವಸತಿ ಶಾಲೆಯನ್ನು ಪದವಿಪೂರ್ವ ಕಾಲೇಜನ್ನಾಗಿ ಉನ್ನತೀಕರಿಸಲಾಗಿದ್ದು, ಪ್ರಸ್ತಕ ಶೈಕ್ಷಣಿಕ ಸಾಲಿನಲ್ಲಿ ವಿಜ್ಞಾನ ವಿಭಾಗ ಪ್ರಾರಂಭಿಸಲಾಗಿದೆ.

*ಹುದ್ದೆಗಳು:*

ಕನ್ನಡ ಉಪನ್ಯಾಸಕರು–01, ಆಂಗ್ಲ ಉಪನ್ಯಾಸಕರು–01, ಭೌತಶಾಸ್ತ್ರ ಉಪನ್ಯಾಸಕರು–01, ರಸಾಯನಶಾಸ್ತ್ರ–01, ಗಣಿತ–01, ಜೀವಶಾಸ್ತ್ರ–01.

ಅರ್ಹ ಅಭ್ಯರ್ಥಿಗಳು ಆಯಾ ವಿಷಯಗಳಲ್ಲಿ ಸ್ನಾತಕೋತ್ತರ ಪದವಿ ಮತ್ತು ಬಿ.ಇಡಿ ಪೂರ್ಣಗೊಳಿಸಿರಬೇಕು. ಅತಿಥಿ ಉಪನ್ಯಾಸಕರಿಗೆ ಮಾಹೆಯಾನ ರೂ.18,150/– ಗೌರವಧನ ನೀಡಲಾಗುವುದು.

ಆಸಕ್ತ ಅಭ್ಯರ್ಥಿಗಳು ತಮ್ಮ ಎಲ್ಲಾ ಅಗತ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಪ್ರಾಂಶುಪಾಲರು, ಕಿತ್ತೂರುರಾಣಿ ಚನ್ನಮ್ಮ ವಸತಿ ಶಾಲೆ(ಪ.ಪಂ)–485, ವಡ್ಡಿನಕಟ್ಟೆ, ಸಂಡೂರು (ತಾ), ಬಳ್ಳಾರಿ (ಜಿ) ಇಲ್ಲಿಗೆ ಆಗಸ್ಟ್ 20 ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಶಾಲೆಯ ಇ–ಮೇಲ್ ವಿಳಾಸ: ಇಡಿಜ–ುಇಡಿಥಿಥಿ0485@ರಟಚಿಟ.ಛಿಂಟ ಅಥವಾ ಮೊ.9611279510 ಗೆ ಸಂಪರ್ಕಿಸಬಹುದು ಎಂದು ಸಹಾಯಕ ಆಯುಕ್ತ ಪಿ.ಪ್ರಮೋದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ.16 ರಂದು ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.15–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮವನ್ನು ಆ.16 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಬಿಡಿಎಎ ಫುಟ್‌ಬಾಲ್ ಮೈದಾನ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ವಸತಿ,ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಬಳ್ಳಾರಿ ಮಹಾನಗರ ಪಾಲಿಕೆಯ ಸಭಾ ನಾಯಕರು ಹಾಗೂ ಜಿಲ್ಲಾ ಗೊಲ್ಲರ ಸಂಘ ಅಧ್ಯಕ್ಷ ಪಿ.ಗಾದೆಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟ ಪೂರ್ವ ಅಧ್ಯಕ್ಷ ಸಿದ್ಧರಾಮ ಕಲ್ಮಠ ಅವರು ಜಯಂತಿ ಕಾರ್ಯಕ್ರಮ ಕುರಿತು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಬಳ್ಳಾರಿಯ ವೈ.ಬಸವರಾಜ ತಂಡದಿಂದ ಸಮೂಹ ನೃತ್ಯ ಇರಲಿದೆ.

*ಮೆರವಣಿಗೆ:*

ಜಯಂತಿ ಕಾರ್ಯಕ್ರಮದ ಅಂಗವಾಗಿ ಅಂದು ಬೆಳಿಗ್ಗೆ 09.30 ಗಂಟೆಗೆ ನಗರದ ಶ್ರೀ ಕನಕ ದುರ್ಗಮ್ಮ ದೇವಸ್ಥಾನ ಆವರಣದಿಂದ ಮೆರವಣಿಗೆ ನಡೆಯಲಿದ್ದು, ಮೆರವಣಿಗೆಯು ಗಡಿಗಿ ಚನ್ನಪ್ಪ ವೃತ್ತದ ಮೂಲಕ ಬಿಡಿಎಎ ಫುಟ್‌ಬಾಲ್ ಮೈದಾನ ಸಭಾಂಗಣದವರೆಗೆ ನಡೆಯಲಿದೆ.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಮಹಾನಗರ ಪಾಲಿಕೆ ಆಯುಕ್ತರು ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

# ನಟ ವಿಷ್ಣುವರ್ಧನ್ ಸಮಾದಿ ಧ್ವಂಸ: ವಿಷ್ಣು ಸೇನಾ ಸಮಿತಿ ಖಂಡನೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ನಗರದಲ್ಲಿ ಕೊಪ್ಪಳ ಜಿಲ್ಲಾ ಘಟಕದ ವತಿಯಿಂದ ಡಾ. ವಿಷ್ಣುವರ್ಧನ್ ಸಮಾಧಿಯನ್ನು ಧ್ವಂಸಗೊಳಿಸಿದ ಬಾಲಣ್ಣನ ಕುಟುಂಬದ ವಿರುದ್ಧ ಹೋರಾಟ ಹಮ್ಮಿಕೊಳ್ಳಲಾಗಿತ್ತು.

ನ್ಯಾಯಲಯಕ್ಕೆ ಸುಳ್ಳು ದಾಖಲೆ ಕೊಟ್ಟು ರಾತ್ರೋ ರಾತ್ರೀ ಸಮಾಧಿಯನ್ನು ಧ್ವಂಸಗೊಳಿಸಿದ್ದಾರೆ ಇದು ಕನ್ನಡದ ಮೇರು ನಟನಿಗೆ ಮಾಡಿದ ಅವಮಾನ ಕನ್ನಡ ನಾಡಿನಲ್ಲಿ ಕನ್ನಡ ಸಂಸ್ಕೃತಿ ರಾಯಭಾರಿಯಾದ ಒಬ್ಬ ಧೀಮಂತ ನಾಯಕ ನಟನಿಗೆ ಅವರ ಸಮಾಧಿ ಇಲ್ಲಾ ಅವರು ಜೀವಂತ ಇದ್ದಾಗ ಅವರಿಗೆ ನೆಮ್ಮದಿ ಇಲ್ಲಾ ಕೊನೆಗೆ ಅವರು ಕಾಲವಾಗಿದ್ದು ಅವರು ಅಂತ್ಯವಾದ ಸ್ಥಳದಲ್ಲಿ ಅವರಿಗೆ ಸರಿಯಾದ ಸ್ಮಾರಕ ಕೂಡ ಇಲ್ಲಾ ಇದು ಭೂ ವ್ಯಾಜ್ಯ ನ್ಯಾಯಲಯದಲ್ಲಿ ಈ ಪ್ರಕರಣ ದಾಖಲಾಗಿದ್ದು ಡಾ. ವಿಷ್ಣುವರ್ಧನ್ ಅವರು ಮರಣದ ನಂತರ ಪ್ರಾರಂಭವಾದ ಜಾಗೆ ವಿಚಾರದ ಗೊಂದಲ ತಾರ್ಕಿಕ ಅಂತ್ಯ ಕಾಣಬಹುದು ಎಂದು ಎಲ್ಲರೂ ನಂಬಿಕೆಯಿಂದ ಕಾಯುತಿದ್ದ ಅಭಿಮಾನಿಗಳಿಗೆ ಈಗ ರಾತೆ–ೂ್ರೀ ರಾತ್ರೀ ಸಮಾಧಿಯನ್ನು ಧ್ವಂಸಗೊಳಿಸಿದ್ದು ಅಕ್ಷಮ್ಯ ಅಪರಾಧ ಕೂಡ ಆಗಿದ್ದು ಇದರಲ್ಲಿ ಸರಕಾರ ಕೂಡ ಇತ್ತ ಕಡೆ ಗಮನ ಕೊಡದೆ ಸುಮ್ಮನ್ನೆ ಕುಳಿತಿದ್ದು ಕನ್ನಡ ಚಲನಚಿತ್ರ ಮಂಡಳಿ ಒಂದು ಕಣ್ಣಿಗೆ ಬೆಣ್ಣೆ ಒಂದು ಕಣ್ಣಿಗೆ ಸುಣ್ಣ ಬಳಿಯುವ ಕೆಲಸ ಎದ್ದು ಕಾಣುತಿದೆ ಇದು ಕನ್ನಡದ ಮೇರು ನಟನಿಗೆ ಆದ ದೊಡ್ಡ ಅವಮಾನ ಖಂಡಿಸಿ ಕೊಪ್ಪಳ ನಗರದ ಅಶೋಕ್ ವೃತ್ತದಿಂದ ತಹಸೀಲ್ದಾರ್ ಕಚೇರಿಯವರೆಗೆ ಪ್ರತಿಭಟನೆ ಮುಖಾಂತರ ತೆರಳಿ ಮಾನ್ಯ ಮುಖ್ಯಮಂತ್ರಿಗಳಿಗೆ ಧ್ವಂಸಗೊಳಿಸಿದ ಸಮಾಧಿಯನ್ನು ಪುನರ್ ನಿರ್ಮಾಣ ಮಾಡಿ ಎಂದು ಡಾಕ್ಟರ್ ವಿಷ್ಣು ಸೇನಾ ಸಮಿತಿಯ ಜಿಲ್ಲಾ ಅಧ್ಯಕ್ಷರಾದ ವೀರನಗೌಡ ನೆರೆಗಲ್ ಮಾತನಾಡಿದರು.

ಜಿಲ್ಲಾ ಉಪಾಧ್ಯಕ್ಷರಾದ ಲಿಂಗರಾಜ್ ಬಿಳೇಭಾವಿ. ವಕೀಲರಾದ ವಿಜಯ್ ಅಮೃತರಾಜ್. ಪ್ರಕಾಶ್ ಪರ್ವತಗೌಡ್ರು, ಶಿವರಾಜ್ ವಾಲ್ಮೀಕಿ, ವಿಷ್ಣು ಸೇನಾ ಸಮಿತಿಯ ಸದಸ್ಯರಾದ ದೇವರಾಜ್ ಕೋಳೂರು, ಸಂತೋಷ ಬಾರಕೇರ, ಲಕ್ಷ್ಮಣ ಗೊಲ್ಲರ, ಭೀಮನಗೌಡ ಹಿರೇಗೌಡ್ರು, ವಿರೇಶ್ ಚಿಲಕಮುಖಿ, ಪಾಪಣ್ಣ ಕೊಪ್ಪಳ, ವಿಜಯ್ ಕುಮಾರ ಬನ್ನಿಕಟ್ಟಿ, ರೇವಪ್ಪ ಓಜನಹಳ್ಳಿ, ಶರೀಫ್ ಮತ್ತೂರು, ರಾಮಣ್ಣ ಚಾಮಾಲಾಪುರ, ವಿರೇಶ್ ಕೊಪ್ಪಳ. ಅಲ್ಲಾಸಾಬ್ ನದಾಫ್, ಗವಿಸಿದ್ದಪ್ಪ ಬಿಸರಹಳ್ಳಿ, ಸೇರಿದಂತೆ ಎಲ್ಲಾ ಅಭಿಮಾನಿಗಳು ತಹಸೀಲ್ದಾರ ಕಚೇರಿಗೆ ತೆರಳಿ ಮನವಿ ಸಲ್ಲಿಸಲಾಯಿತು.

# ಮಂಡಲಗೇರಿ ಸರ್ಕಾರಿ ಶಾಲೆಯಲ್ಲಿ ಅದ್ದೂರಿ ಸ್ವಾತಂತ್ರೋತ್ಸವದ ಸಂಭ್ರಮ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ಕುಕನೂರ ತಾಲೂಕಿನ ಮಂಡಲಗೇರಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅದ್ದೂರಿಯಾಗಿ 79ನೇ ಸ್ವಾತಂತ್ರ ದಿನಾಚರಣೆ ಹಾಗೂ ಧ್ವಜಾರೋಹಣ ಕಾರ್ಯಕ್ರಮ ಹಾಗೂ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು, ದೇಶಭಕ್ತಿ ಗೀತೆಗಳು ಮತ್ತು ಭಾಷಣಗಳನ್ನು ಅದ್ದೂರಿಯಾಗಿ ನೆರವೇರಿಸಿದರು.

ಮೊದಲು ಗ್ರಾಮದಲ್ಲಿ ಮಕ್ಕಳ ಜೊತೆಗೆ ಗ್ರಾಮಸ್ಥರು ಸೇರಿ ಗ್ರಾಮದ ಬೀದಿ ಬೀದಿಗಳಲ್ಲಿ ಸ್ವತಂತ್ರ ದಿನಾಚರಣೆ ಶುಭಾಶಯಗಳ ಪ್ರಭಾತ ಪೇರಿ ನಂತರ ಶಾಲೆಯ ಧ್ವಜಾರೋಹಣವನ್ನು ಶಾಲೆ ಎಸ್ಡಿ ಎಂಸಿ ಅಧ್ಯಕ್ಷರಾದ ಶಿವಮೂರ್ತಿ ದಳವಾಯಿ ಧ್ವಜಾರೋಹಣ ನೆರವೇರಿಸಿದರು ನಂತರ ಮಕ್ಕಳಿಂದ ದೇಶಭಕ್ತಿ ಗೀತೆಗಳು, ನೃತ್ಯಗಳು, ನಾಟಕಗಳು ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಎಸ್ ಡಿ ಎಂಸಿಯ ಸರ್ವ ಸದಸ್ಯರು, ಗ್ರಾಮಸ್ಥರು, ಮುಖ್ಯೋಪಾಧ್ಯಾಯ, ಶಿಕ್ಷಕರು ಶಿಕ್ಷಕಿಯರು ಮುದ್ದು ಮಕ್ಕಳು ಹಾಜರಿದ್ದರು.

# ಸ್ವಾತಂತ್ರ್ಯ ನಮಗೆ ಅನೇಕ ಮಹಾ ಪುರುಷರ ಬಲಿದಾನದಿಂದ ಬಂದಿದೆ : ಡಾ.ರೇಷ್ಮಾ ಕೌರ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ. 15 :– ನಗರದ ನೇಹರು ಸ್ಟೇಡಿಯಂ ಹತ್ತಿರ ವಿರುವ ಗುರು ನಾನಕ ಪಬ್ಲಿಕ್ ಶಾಲೆಯಲ್ಲಿ ಸ್ವಾತಂತ್ರ೦ಯ ದಿನಾಚರಣೆಯನ್ನು ಸಂಭ್ರಮದಿ೦ದ ಆಚರಿಸಲಾಯಿತು. ಕಾರ್ಯಕ್ರಮವು ಶಾಲೆಯ ಪ್ರಾರ್ಥನಾ ಗೀತೆಯೊಂದಿಗೆ ಆರಂಭಗೊ೦ಡಿತ್ತು.

ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಂಸ್ಥೆಯ ಉಪಾಧ್ಯಕ್ಷೆ ಡಾ.ರೇಷ್ಮಾ ಕೌರ್ ಅವರು ಧ್ವಜಾರೋಹಣ ಕಾರ್ಯಕ್ರಮವನ್ನು ನೆರವೇರಿಸಿದರು. ರಾಷ್ಟ್ರಗೀತೆಯ ನಂತರ ಸ್ಕೌಡ್ಸ್ ಮತ್ತು ಗೈಡ್ಸ್ ಮಕ್ಕಳಿಂದ ಪಥಸಂಚಲನ ನಡೆಯಿತು. ಮಕ್ಕಳಿಂದ ಗೌರವ ವಂದನೆ ಸ್ವೀಕರಿಸಿದರು. ನಂತರ ಮಕ್ಕಳಿಂದ ಕವಾಯಿತು ಪ್ರದರ್ಶನ ನಡೆಯಿತು.

ಶ್ರೀಮತಿ ರೇಷ್ಮಾ ಕೌರ ಅವರು ಮಾತನಾಡುತ್ತ ಎಲ್ಲರಿಗೆ ಸ್ವಾತಂತ್ರ್ಯ ದಿನದ ಶುಭಾಷಯಗಳನ್ನು ಕೋರಿದರು. ಸ್ವಾತಂತ್ರ ನಮಗೆ ಅನೇಕ ಮಹಾ ಪುರುಷರ ಬಲಿದಾನದಿಂದ ಬಂದಿದೆ. ಅದನ್ನು ಕಾಪಾಡುವುದು ನಮ್ಮೆಲ್ಲರ ಕರ್ತವ್ಯ. ಈ ದಿನಾಚರಣೆಯನ್ನು ಪ್ರತಿಯೊಬ್ಬರು ಧಾರ್ಮಿಕ ಹಬ್ಬದಂತೆಯೇ ಸಂತೋಷ ಸಡಗರದಿಂದ ಆಚರಿಸಬೇಕು. ಮಕ್ಕಳಲ್ಲಿ ರಾಷ್ಟ್ರಭಕ್ತಿ, ರಾಷ್ಟ್ರಪ್ರೇಮ ಬೆಳೆಸಬೇಕು. ದೇಶ ಸೇವೆಗಾಗಿ ಸದಾ ಸಿದ್ದರಾಗಿರಬೇಕೆಂದು ಕರೆ ಕೊಟ್ಟರು. ಸಮಾಜದಲ್ಲಿರುವ ಭ್ರಷ್ಠಚಾರ, ಹೆಣ್ಣು ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯವನ್ನು ವಿರೋಧಿಸಿ, ಬೇರು ಸಹಿತ ಕಿತ್ತಿಹಾಕಬೇಕು ಇದಕ್ಕಾಗಿ ಸಮಾಜದ ಪ್ರತಿಯೊಬ್ಬರು ಎಚ್ಚರಗೊಂಡಾಗ ಈ ಕಾರ್ಯ ಸಾಧ್ಯವೆಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯಗುರುಗಳಾದ ಶ್ರೀಮತಿ ಆರೀಫ್ ಹಾದಿ, ಪ್ರಾಂಶುಪಾಲರಾದ ಶ್ರೀಮತಿ ನಾಳಿನಿ ಡಿ.ಜಿ, ಶೇಖ್ ಅಮಜದ್ ಅಲಿ, ಡೀನರಾದ ಶ್ರೀ ಹನುಮಾನ ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಹೆದ್ದಾರಿ ಸುರಕ್ಷತೆಗಾಗಿ ಗ್ರಾಮ ಪಂಚಾಯತದ ಚುರುಕು ಕಾರ್ಯಾಚರಣೆ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ತಾಲೂಕಿನ ಮುನಿರಾಬಾದ್ ಡ್ಯಾಂ ಗ್ರಾಮದಲ್ಲಿ ಹಾದು ಹೋಗುವ ರಾಜ್ಯ ಹೆದ್ದಾರಿ ಪಕ್ಕದಲ್ಲಿ ಬೆಳೆದಿರುವ ಬೃಹತ್ ಆಕಾರದ ರೈನ್ ಟ್ರೀ ಮರಗಳ ಕೊಂಬೆಗಳು ಮಳೆಗೆ ಏಕಾಏಕಿ ಬೀಳುತ್ತಿರುವ ಹಿನ್ನೆಲೆಯಲ್ಲಿ ಅಪಘಾತ ಸಂಭವಿಸುವ ಸಾಧ್ಯತೆ ಇತ್ತು. ಈ ಹಿನ್ನೆಲೆಯಲ್ಲಿ ಮುನಿರಾಬಾದ್ ಡ್ಯಾಂ ಗ್ರಾಮ ಪಂಚಾಯತ ಅಧ್ಯಕ್ಷರು ಅಯೂಬ್ ಖಾನ್ ಮುತುವರ್ಜಿ ವಹಿಸಿ, ಹೆದ್ದಾರಿಗೆ ಬಾಗಿರುವ ಕೊಂಬೆಗಳನ್ನು ಕತ್ತರಿಸುವ ಕಾರ್ಯವನ್ನು ಕೈಗೊಂಡಿದ್ದಾರೆ.

ಈ ಸೇವಾ ಮನೋಭಾವದ ಕಾರ್ಯ ಸ್ಥಳೀಯರಿಂದ ಪ್ರಶಂಸೆಗೆ ಪಾತ್ರವಾಗಿದೆ. ಈ ಸಂದರ್ಭದಲ್ಲಿ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಾಲಚಂದ್ರ, ಊರಿನ ಗಣ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಮಕ್ಕಳಲ್ಲಿ ರಾಷ್ಟ್ರ ಪ್ರೇಮದ ಅರಿವು ಮೂಡಿಸಿ–ಸೋಮಶೇಖರ್ ಹರ್ತಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕೊಪ್ಪಳ ತಾಲ್ಲೂಕಿನ ಗುಳದಳ್ಳಿ ಗ್ರಾಮದ ಶ್ರೀ ಸ್ವಾಮಿ ವಿವೇಕಾನಂದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆಯ ನಿಮಿತ್ತವಾಗಿ ಅಭಿನಂದನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ನಿವೃತ್ತ ಶಿಕ್ಷಕರು ಭಾರತ ಸೇವಾದಳದ ಕೊಪ್ಪಳ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಸೋಮಶೇಖರ್ ಹರ್ತಿಯವರು ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಭಾರತರದ ಪ್ರತಿಯೊಬ್ಬರೂ ಶ್ರದ್ಧಾ ಭಕ್ತಿಯಿಂದ ರಾಷ್ಟ್ರ ಧ್ವಜ ರಾಷ್ಟ್ರ ಗೀತೆಯನ್ನು ಗೌರವಿಸಬೇಕು. ಮಕ್ಕಳಿಗೆ ರಾಷ್ಟ್ರ ಪ್ರೇಮದ ಬಗ್ಗೆ ಅರಿವು ಮೂಡಿಸಬೇಕು. ನಮ್ಮ ರಾಷ್ಟ್ರ ಸ್ವಾತಂತ್ರ್ಯ ಪಡೆಯಲು ಅನೇಕ ದೇಶಭಕ್ತರು ಹಗಲಿರುಳು ಶ್ರಮಿಸಿ ತ್ಯಾಗ ಬಲಿದಾನಕ್ಕೆ ಸಾಕ್ಷಿಯಾಗಿದ್ದಾರೆ. ಸ್ವಾತಂತ್ರ್ಯ ಹೋರಾಟಗಾರರನ್ನು ಸ್ಮರಣೆ ನಮ್ಮ ಕರ್ತವ್ಯ ಎಂದರು.

ಸಾಹಿತಿ ಬಿ.ಎನ್.ಹೊರಪೇಟಿ ಮಾತನಾಡಿ ಮಕ್ಕಳಿಗೆ ಶಿಕ್ಷಣದ ಜೊತೆಗೆ ನೈತಿಕ ಮೌಲ್ಯಗಳ ಬಗ್ಗೆ ತಿಳುವಳಿಕೆ ನೀಡಬೇಕು.

ದ್ ೀ ಶಾ ಭಿ ವ್ ುಾ ನ್ ದ್ ಕಾರ್ಯಕ್ರಮಗಳನ್ನು ಹೆಚ್ಚು ಆಯೋಜಿಸಿ ಮಕ್ಕಳಿಗೆ ರಾಷ್ಟ್ರ ಪ್ರೇಮ ಮೂಡಿಸಬೇಕೆಂದರು.

ಇದೇ ವೇಳೆ ಮುದ್ದು ಮಕ್ಕಳು ಸ್ವಾತಂತ್ರ್ಯ ಹೋರಾಟಗಾರರ ವೇಷಭೂಷಣ ತೊಟ್ಟು ಗಮನ ಸೆಳೆದರು. ದೇಶಭಕ್ತಿ ಗೀತೆಯ ಮೂಲಕ ನೃತ್ಯ ಮಾಡಿ ಕಾರ್ಯಕ್ರಮದ ಮೆರಗು ಹೆಚ್ಚಿಸಿದರು.

ಸೋಮಶೇಖರ್ ಹರ್ತಿ ಹಾಗೂ ಡಾ.ಬಿ.ಎನ್.ಹೊರಪೇಟಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಶಾಲಾ ಮುಖ್ಯಸ್ಥರಾದ ರಮೇಶ ಹೆ ೂಳೆಯಾಚಿ, ಮುಖ್ಯೋಪಾಧ್ಯಾಯರಾದ ನಾಗರಾಜ ಬಡಿಗೇರ ಮತ್ತು ಶಿಕ್ಷಕರು, ಹಿರಿಯರು, ಯುವಕರು ಮತ್ತು ಮಕ್ಕಳು ಉಪಸ್ಥಿತಿ ಇದ್ದರು.

# ಕೇವಲ ದೇಶದ ಗಡಿಗಳ ರಕ್ಷಣೆಗೆ ಮಾತ್ರವೇ ಸೀಮಿತವಲ್ಲ: ಗೌಡೂರು



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ಪಟ್ಟಣದ ಪತ್ರಿಕಾಭವನದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಗುರುರಾಜ ಗೌಡೂರು ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಭಾರತದ ಅಖಂಡತೆಯ ರಕ್ಷಣೆಯೆನ್ನುವುದು ಕೇವಲ ದೇಶದ ಗಡಿಗಳ ರಕ್ಷಣೆಗೆ ಮಾತ್ರವೇ ಸೀಮಿತವಲ್ಲ. ಬದಲಿಗೆ ದೇಶದೊಳಗಿರುವ ಪ್ರತಿಯೊಂದು ಸಾಂವಿಧಾನಿಕ ಸಂಸ್ಥೆಯ ಪಾವಿತ್ರ್ಯವನ್ನು ಕಾಪಾಡುವುದಕ್ಕೂ ಅನ್ವಯಿಸುತ್ತದೆ ಎಂದು ಅವರು ತಿಳಿಸಿದರು.

ಸ್ವತಂತ್ರ ನ್ಯಾಯಾಂಗ, ಸ್ವತಂತ್ರ ಸಾಂವಿಧಾನಿಕ ಸಂಸ್ಥೆಗಳು, ನಿರ್ಭೀತ ತನಿಖಾ ಸಂಸ್ಥೆಗಳು ಇವೆಲ್ಲವೂ ಸ್ವತಂತ್ರ ಭಾರತದ ಹೆಗ್ಗುರುತುಗಳಾಗಿವೆ. ಇವುಗಳ ಪಾವಿತ್ರ್ಯಕ್ಕೆ ಧಕ್ಕೆ ಒದಗಿದರೆ ದೇಶದ ಸ್ವಾತಂತ್ರ್ಯಕ್ಕೇ ಧಕ್ಕೆ ಒದಗಿದಂತೆ. ಹಾಗಾಗಿ, ಯಾವುದೇ ಬೆಲೆ ತೆತ್ತಾದರೂ ಸರಿಯೇ ಇವುಗಳನ್ನು ಮೂಲಸ್ವರೂಪದಲ್ಲಿಯೇ ಉಳಿಸಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ ಎಂದು ಹೇಳಿದರು

ಈ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಅಮರಯ್ಯ ಘಂಟಿ, ಉಪಾಧ್ಯಕ್ಷ ಖಾಜಾಹುಸೇನ್, ಹಿರಿಯ ಪತ್ರಕರ್ತರಾದ ಎನ್.ಬಸವರಾಜ, ಲಕ್ಷ್ಮಣ ಬಾರಿಕೇರ, ಅಮರೇಶ ಕಲ್ಲೂರು, ಶಿವರಾಜ ಕೆಂಭಾವಿ, ರಾಘವೇಂದ್ರ ಭಜಂತ್ರಿ, ಶಶಿಧರ ಕಂಚಿಮಠ, ಗಂಗಾಧರ ನಾಯಕ, ಪಂಪಾಪತಿ, ಗೌತಮ್, ರಾಜೇಶ ಮಾಣಿಕ್, ಯಲ್ಲಪ್ಪವಂದಲಿ, ಸಾದತ್ ಅಲಿ, ಮುಸ್ತಾಫ್ ಸೇರಿ ಇತರರು ಇದ್ದರು.

# ಅಂಗಾಂಗ ದಾನ ಕುರಿತು ಜಾಗೃತಿ ಅಗತ್ಯ: ಡಾ.ವೆಂಕಟೇಶ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.15–ಅಂಗಾಂಗ ವೈಫಲ್ಯದಿಂದ ಬಳಲುತ್ತಿರುವವರ ಸಂಖ್ಯೆ ಸಮಾಜದಲ್ಲಿ ಹೆಚ್ಚುತ್ತಿದೆ. ನಿಸರ್ಗದತ್ತವಾದ ಅಂಗಾಂಗಗಳು ಮನುಷ್ಯನಬದುಕಿಗೆಅತಿಅವಶ್ಯಕವಾಗಿವೆ. ಈ ದಿಸೆಯಲ್ಲಿ ಅಂಗಾಂಗದಾನದ ಕುರಿತು ಸಮಾಜದಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ಸಂಸ್ಥೆಯ ಮೂತ್ರಪಿಂಡ ತಜ್ಞ ಡಾ.ವೆಂಕಟೇಶ ಮೊಗೇರ ಹೇಳಿದರು.

ನಗರದ ಬಿ.ವಿ.ವಿ ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ವಿಶ್ವ ಅಂಗಾಂಗದಾನ ದಿನ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಅವರು, ಮರಣಾನಂತರ ಮನುಷ್ಯರ ಅಂಗಾಂಗಗಳು ಮಣ್ಣು ಸೇರದೆ ರೋಗಿಗಳ ಪ್ರಾಣ ಉಳಿಸಲು ಉಪಯೋಗವಾಗಬೇಕು. ಅಂಗಾಂಗ ದಾನದ ಮೂಲಕ ರೋಗಿಗೆ ಮರುಜನ್ಮ ನೀಡಲು ಸಾಧ್ಯ. ಆದರೆ ಸಮಾಜದಲ್ಲಿ ಧಾರ್ಮಿಕ ತಪ್ಪು ಕಲ್ಪನೆಗಳು ಮತ್ತು ಸಂವಹನದ ಕೊರತೆ ಅಂಗಾಂಗದಾನಕ್ಕೆ ಅಡೆತಡೆಗಳಾಗಿವೆ. ವೈದ್ಯರು ಸಾರ್ವಜನಿಕರಲ್ಲಿ ಅಂಗಾಂಗದಾನದ ಅರಿವು ಮೂಡಿಸಲು ಪ್ರಯತ್ನಿಸಬೇಕು ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ ಅಂಗಾಂಗದಾನದ ಅಗತ್ಯ ಮತ್ತು ಮಹತ್ವವನ್ನು ಉದ್ದೇಶಿಸಿ ಮಾತನಾಡಿ, ಬಿ.ವಿ.ವಿ ಸಂಘದ ಹಾನಗಲ್ಲ ಕುಮಾರೇಶ್ವರ ಸುಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಶೀಘ್ರದಲ್ಲೇ ಅಂಗಾಂಗ ಕಸಿ ಕೇಂದ್ರಸ್ಥಾಪಿಸಲಾಗುವುದು ಎಂದು ಹೇಳಿದರು.

ವಿಶ್ವ ಅಂಗಾಂಗ ದಿನದ ಅಂಗವಾಗಿ ಆಯೋಜಿಸಿದ್ದ ವಿವಿಧ ಸ್ಪರ್ಧೆಗಳಲ್ಲಿನ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ಮತ್ತು ಪ್ರಮಾಣಪತ್ರ ವಿತರಿಸಲಾಯಿತು. ವಿವಿಧ ಸ್ಪರ್ಧೆಗಳ ತೀರ್ಪುಗಾರರಾದ ಡಾ.ಆಶಾಲತಾ ಮಲ್ಲಾಪೂರ, ಡಾ.ಸಿ.ಎಸ್.ಹಿರೇಮಠ,ಡಾ.ಯರನಾಳ ಮತ್ತು ಡಾ.ಸಾಮ್ರಾಟ ಅವರನ್ನು ಸನ್ಮಾನಿಸಲಾಯಿತು.

ಮೆಡಿಕಲ್ ಕಾಲೇಜಿನ ನೇತ್ರ ವಿಭಾಗ, ಸಮುದಾಯ ಆರೋಗ್ಯ ವಿಭಾಗ, ಶಸ್ತ್ರಚಿಕಿತ್ಸಾ ವಿಭಾಗ ಮತ್ತು ಮೆಡಿಸಿನ್ ವಿಭಾಗಗಳ ಸಹಯೋಗದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಡಾ.ಸಂಗಮೇಶ ಸಾಲಿಮಠ ಸ್ವಾಗತಿಸಿದರು. ಡಾ.ಶ್ರೀಕಾಂತ ಕುಂಟೋಜಿ ಪರಿಚಯಿಸಿದರು. ಡಾ.ಗೋಪಾಲ ಬಜಾಜ ವಂದಿಸಿದರು. ಡಾ.ತರುಣ ಮತ್ತು ಡಾ.ಸಾಕ್ಷಿ ಕಾರ್ಯಕ್ರಮವನ್ನು ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಡಾ.ಬ್ರಿಜೇಶ ಪಾಟೀಲ, ಡಾ.ಶ್ರೀಕಾಂತ ಕುಂಟೋಜಿ, ಡಾ.ಅಶೋಕ ಡೋರ್ಲೆ, ಡಾ.ಗೋಪಾಲ ಬಜಾಜ, ವಿವಿಧ ವಿಭಾಗಗಳ ಮುಖ್ಯಸ್ಥರು, ವೈದ್ಯರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸೆ.13 ರಂದು ಲೋಕ ಅದಾಲತ್ ಜಿಲ್ಲೆಯಲ್ಲಿ 90 ದಿನಗಳ ಮಧ್ಯಸ್ಥಿಕೆ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.15–ಜಿಲ್ಲಾ ಹಾಗೂ ಅಧೀನ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಲು ಜಿಲ್ಲೆಯಾದ್ಯಂತ 90 ದಿನಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಜನತೆ ಇದರ ಸದುಪಯೋಗ ಪಡೆದುಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಎನ್.ವಿ.ವಿಜಯ್ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆಯಲ್ಲಿ ಈ ವಿಷಯ ತಿಳಿಸಿರುವ ಅವರು, ಅಭಿಯಾನ ಜುಲೈ 1 ರಿಂದ ಆರಂಭಗೊಂಡಿದ್ದು, ಇದು 90 ದಿನಗಳ ವರೆಗೆ ರಾಜ್ಯಾದ್ಯಂತ ನಡೆಯುತ್ತಿದೆ. ಅಭಿಯಾನದಲ್ಲಿ ಬಾಕಿ ಇರುವ ಪ್ರಕರಣಗಳಾದ ವೈವಾಹಿಕ ಹಾಗೂ ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು, ಮೋಟಾರು ಅಪಘಾತ, ಚೆಕ್ ಅಮಾನ್ಯ ಪ್ರಕರಣಗಳು, ವಾಣಿಜ್ಯ, ಸೇವಾ ಪ್ರಕರಣಗಳು, ರಾಜೀಯಾಗಬಲ್ಲ ಅಪರಾಧಿಕ ಪ್ರಕರಣಗಳು, ಗ್ರಾಹಕರ ವ್ಯಾಜ್ಯ ಪ್ರಕರಣಗಳು ಡಿ.ಆರ್.ಟಿ, ಪಾಲುದಾರಿಕೆ, ಭೂಸ್ವಾಧೀನ ಪ್ರಕರಣಗಳು ಹಾಗೂ ಇತರೆ ಸಿವಿಲ್ ಪ್ರಕರಣಗಳನ್ನು ಮಧ್ಯಸ್ಥಿಕೆಯ ಮೂಲಕ ಇತ್ಯರ್ಥಪಡಿಸಲಾಗುತ್ತದೆ.

ನ್ಯಾಯಾಲಯದ ಪ್ರಕರಣಗಳನ್ನು ಮಧ್ಯಸ್ಥಿಕೆ ಕೇಂದ್ರಕ್ಕೆ ಸೂಚಿಸಿಕೊಂಡಲ್ಲಿ ಅಂತಹ ಪ್ರಕರಣಗಳಲ್ಲಿ ಉಭಯ ಪಕ್ಷಗಾರರನ್ನು ಕರೆದುಕೊಂಡು ಜಿಲ್ಲಾ ನ್ಯಾಯಾಲಯದ ಸಮುಚ್ಚಯದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳ ಹಾಗೂ ತಾಲೂಕು ನ್ಯಾಯಾಲಯಗಳ ಆವರಣಗಳಲ್ಲಿರುವ ಮಧ್ಯಸ್ಥಿಕೆ ಕೇಂದ್ರಗಳಲ್ಲಿ ರಾಜೀ ಸಂಧಾನ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ. ಸಾರ್ವಜನಿಕರು ತಮ್ಮ ಪ್ರಕರಣಗಳು ಉಚ್ಚನ್ಯಾಯಾಲಯದಲ್ಲಿ ಬಾಕಿ ಇದ್ದಲ್ಲಿ ಬೆಂಗಳೂರು, ಧಾರವಾಡ ಮತ್ತು ಕಲಬುರಗಿ ಉಚ್ಚನ್ಯಾಯಾಲಯಗಳ ಆವರಣಗಳಲ್ಲಿರುವ ಮಧ್ಯಸ್ಥಿಕೆ ಕೇಂದ್ರಗಳನ್ನು ಸಂಪರ್ಕಿಸಿ ಮಾಹಿತಿಯನ್ನು ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದ್ದಾರೆ.

ಸೆ.13 ಲೋಕ ಅದಾಲತ್

ಜಿಲ್ಲೆಯಾದ್ಯಂತ ಎಲ್ಲ ಅಧೀನ ಮತ್ತು ಜಿಲ್ಲಾ ನ್ಯಾಯಾಲಯಗಳಲ್ಲಿ ಸೆಪ್ಟೆಂಬರ 13 ರಂದು ರಾಷ್ಟ್ರೀಯ ಲೋಕಅದಾಲತ್ ಆಯೋಜಿಸಲಾಗಿದೆ. ಈ ಅದಾಲತ್‌ನಲ್ಲಿ ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶವಿದ್ದು, ಸಾರ್ವಜನಿಕರು ಇದರ ಲಾಭ ಪಡೆದುಕೊಳ್ಳಬಹುದಾಗಿದೆ.

ರಾಜೀಯಾಗಬಲ್ಲ ಕ್ರಿಮಿನಲ್ ಪ್ರಕರಣಗಳು, ಎನ್‌ಐ ಆಕ್ಟ ಪ್ರಕರಣಗಳು, ಸಾಲ ವಸೂಲಾತಿ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ, ಮೋಟಾರು ವಾಹನ ಅಪಘಾತ ಪ್ರಕರಣ, ಕಾರ್ಮಿಕ ವಿವಾದ ಪ್ರಕರಣಗಳು, ಗಣಿ ಮತ್ತು ಭೂ ವಿಜ್ಞಾನ ಪ್ರಕರಣಗಳು, ವೈವಾಹಿಕ ಪ್ರಕರಣಗಳು, ಭೂ ಸ್ವಾಧೀನ ಪ್ರಕರಣಗಳು, ಆಸ್ತಿ ವಿಭಾಗ ಪ್ರಕರಣಗಳು, ನಿರ್ದಿಷ್ಟ, ಜಾರಿ, ಹಕ್ಕು ಘೋಷಣೆ ಪ್ರಕರಣಗಳು, ಶಾಶ್ವತ ನಿರ್ಭಂಧಕಾಜ್ಞೆ ಹಾಗೂ ಇತರೆ ಜನನ ಪ್ರಮಾಣ ಪತ್ರಕ್ಕೆ ಸಂಬಂಧಿಸಿದ ಪ್ರಕರಣಗಳು, ಲಘು ವ್ಯಾಜ್ಯ, ಜೀವನಾಂಶ, ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆಗೆ ಸಂಬಂಧಿಸಿದ ಪ್ರಕರಣಗಳು ಮತ್ತು ವಾಜ್ಯಪೂರ್ವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಲೋಕ ಅದಾಲತ್‌ನಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎನ್.ವಿ.ವಿಜಯ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಜಂಟಿಯಾಗಿ ತಿಳಿಸಿದ್ದಾರೆ.

ಬಿಜೆಪಿ ಕಚೇರಿಯಲ್ಲಿ ಸ್ವಾತಂತ್ರ್ಯೋತ್ಸವ ಸಂಭ್ರಮ

# ದೇಶದ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಿ–ಸಂಸದ ಗದ್ದಿಗೌಡರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.15–ನಮ್ಮ ಹಕ್ಕು, ಕರ್ತವ್ಯಗಳನ್ನು ಅರಿತು ಏಕತೆಯೊಂದಿಗೆ ದೇಶದ ಅಭಿವೃದ್ಧಿಗೆ ಕೈಜೋಡಿಸಬೇಕಿದೆ ಎಂದು ಸಂಸದ ಪಿ.ಸಿ.ಗದ್ದಿಗೌಡರ ಹೇಳಿದರು.

ನಗರದ ಶಿವಾನಂದ ಜೀನ‌ನಲ್ಲಿರುವ ಬಿಜೆಪಿ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದಿಂದ ಹಮ್ಮಿಕೊಂಡ 79ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಲಕ್ಷಾಂತರ ಜನರ ತ್ಯಾಗ ಬಲಿದಾನದ ಮೂಲಕ ನಮಗೆ ಸ್ವಾತಂತ್ರ್ಯ ಸಿಕ್ಕಿದೆ. ಸ್ವಾತಂತ್ರ ಚಳುವಳಿಯ ಚರಿತ್ರೆಯ ಅರಿವನ್ನು ಇಂದಿನ ಮಕ್ಕಳು ಹಾಗೂ ಯುವಜನಾಂಗದಲ್ಲಿ ಮೂಡಿಸಿ ದೇಶಭಕ್ತರನ್ನಾಗಿಸಬೇಕಿದೆ ಎಂದರು.

ಮಾಜಿ ಶಾಸಕ ವೀರಣ್ಣ ಚರಂತಿಮಠ ಮಾತನಾಡಿ, ಪ್ರಧಾನಿ ಮೋದಿ 11 ವರ್ಷಗಳಲ್ಲಿ ಅನೇಕ ಅಭಿವೃದ್ಧಿ ಕೆಲಸಗಳ ಮೂಲಕ ದೇಶದ ಚಿತ್ರವನ್ನೇ ಬದಲಿಸಿದ್ದಾರೆ. ನಮ್ಮೊಳಗೆ ಜಾತಿ, ಭಾಷೆ, ಪಂಥ, ಎಂಬ ವಿಷಯಗಳ ಮೇಲೆ ಒಡಕುಗಳು ಕಡಿಮೆಯಾಗಲಿ. ಅಖಂಡ ಭಾರತ ಕಲ್ಪನೆ ಮೂಡಲಿ, ನಾವೆಲ್ಲರೂ ಭಾರತ ಮಾತೆಯ ಮಕ್ಕಳು ಎಂಬ ಭಾವ ಅರಳಲಿ ಎಂದರು.

ನಂತರ ಡಾ.ಬಿ.ಆರ್.ಅಂಬೇಡ್ಕರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಲಾಯಿತು. ಮುಖಂಡರಾದ ಜಿ.ಎನ್.ಪಾಟೀಲ, ಡಾ.ಎಂ.ಎಸ್.ದಡ್ಡೆನ್ನವರ, ಸಿ.ವಿ.ಕೋಟಿ, ರಾಜು ನಾಯ್ಕರ, ರಾಜು ರೇವಣಕರ, ಬಸವರಾಜ ಯಂಕಂಚಿ, ಸತ್ಯನಾರಾಯಣ ಹೇಮಾದ್ರಿ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವ, ಶಶಿಕಲಾ ಮಜ್ಜಗಿ, ಪ್ರೇಮಾ ಅಂಬಿಗೇರ, ಭಾಗೀರಥಿ ಪಾಟೀಲ, ಶಿವಲೀಲಾ ಪಟ್ಟಣಶೆಟ್ಟಿ, ಸ್ಮೀತಾ ಪವಾರ, ಸರಸ್ವತಿ ಕುರಬರ. ನಗರ ಮಂಡಲ ಅಧ್ಯಕ್ಷ ಬಸವರಾಜ ಹುನಗುಂದ, ಗ್ರಾಮೀಣ ಮಂಡಲ ಅಧ್ಯಕ್ಷ ಸುರೇಶ ಕೋಣ್ಣೂರ, ಶಿವಾನಂದ ಟವಳಿ,ಯಲ್ಲಪ್ಪ ಬೆಂಡಿಗೇರಿ,ಉಮೇಶ ಹಂಚಿನಾಳ, ಶ್ರೀಧರ ನಾರಬೇಟ್ಟ, ಸುರೇಶ ಮಜ್ಜಗಿ ಇದ್ದರು.

# ಅಭಿಷೇಕ ಕಬ್ಬಿಣಗೆ ಉತ್ತಮ ಗ್ರಂಥಪಾಲಕ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.15–ಬಾಗಲಕೋಟೆಯ ಗ್ರಂಥಾಲಯ ಸಹಾಯಕ ಅಭಿಷೇಕ ಗೋಮಟೇಶ್ವರ ಕಬ್ಬಿಣ ಅವರಿಗೆ ಕರ್ನಾಟಕ ಸರ್ಕಾರ ಸಾರ್ವಜನಿಕ ಗ್ರಂಥಾಲಯ ಇಲಾಖೆ ಕೊಡಮಾಡುವ ಉತ್ತಮ ಗ್ರಂಥಪಾಲಕ ಪ್ರಶಸ್ತಿ ಲಭಿಸಿದೆ.

ಬೆಂಗಳೂರಿನ ರವೀಂದ್ರ ಕಲಾ ಕ್ಷೇತ್ರದಲ್ಲಿ ಆ.12 ರಂದು ಜರುಗಿದ ಗ್ರಂಥಾಲಯ ಪಿತಾಮಹ ಎಸ್.ಆರ್.ರಂಗನಾಥ ಜನ್ಮ ದಿನಾಚರಣೆ (ಗ್ರಂಥಾಲಯ ದಿನಾಚರಣೆ) ಸಮಾರಂಭದಲ್ಲಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅಭಿಷೇಕ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಿದರು.

ಈ ಸಂಧರ್ಭದಲ್ಲಿ ಶಿಕ್ಷಣ ಇಲಾಖೆ ಕಾರ್ಯದರ್ಶಿ ಶ್ರೀಮತಿ ವಿ.ರಶ್ಮಿ ಮಹೇಶ, ಸಾರ್ವಜನಿಕ ಗ್ರಂಥಾಲಯ ಆಯುಕ್ತ ಬಸವರಾಜೇಂದ್ರ, ರಾಜ್ಯಮಟ್ಟದ ಪುಸ್ತಕ ಆಯ್ಕೆ ಸಮಿತಿ ಅಧ್ಯಕ್ಷ ಕರೀಗೌಡ ಬೀಚನಹಳ್ಳಿ ಹಾಗೂ ಕನ್ನಡ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮೆಲೆ ಇದ್ದರು.

**ಸತ್ಯದ ಜೊತೆ ಬದುಕುವವನು ಯಾರಿಗೂ ಹೆದರಬೇಕಾಗಿಲ್ಲ ..!!**
**–ಸಾಕ್ರೆಟಿಸ್.**

ಮುಚಖಂಡಿ ಉದ್ಯಾನವನ ಲೋಕಾರ್ಪಣೆ

# ಉದ್ಯಾನದ ಅಭಿವೃದ್ಧಿಗೆ ಇನ್ನಷ್ಟು ಅನುದಾನ–ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.15–ನಗರಕ್ಕೆ ಸಮೀಪದ ಐತಿಹಾಸಿಕ ಮುಚಖಂಡಿ ಕೆರೆಯ ಮುಂಭಾಗದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಕೆರೆ ಅಭಿವೃದ್ಧಿ ಶುಲ್ಕದಲ್ಲಿ ಅಂದಾಜು 5.80 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಉದ್ಯಾನವನವನ್ನು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಶುಕ್ರವಾರ ಲೋಕಾರ್ಪಣೆಗೊಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಅಭಿವೃದ್ಧಿ ಕೆಲಸದಲ್ಲಿ ಯಾವುದೇ ಪಕ್ಷಬೇದ ಮಾಡದೇ ಜನಪರವಾಗಿ ಕೆಲಸ ಮಾಡಲಾಗುತ್ತದೆ. ಈ ಉದ್ಯಾನವನ ಇನ್ನಷ್ಟು ಅಭಿವೃದ್ಧಿಪಡಿಸಲು ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುವುದು ಎಂದರು.

ಅಧ್ಯಕ್ಷತೆವಹಿಸಿದ್ದ ಬಾಗಲಕೋಟೆ ಶಾಸಕ ಹಾಗೂ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಚ್.ವಾಯ್.ಮೇಟಿ ಮಾತನಾಡಿ, ಆಲಮಟ್ಟಿಯ ಸಂಗೀತ ಕಾರಂಜಿ ಮಾದರಿಯಲ್ಲಿ ಮುಖಚಂಡಿ ಉದ್ಯಾನವನದಲ್ಲೂ ಕಾರಂಜಿ ವ್ಯವಸ್ಥೆ ಮಾಡಬೇಕು. ಈ ಕ್ಷೇತ್ರ ಪ್ರವಾಸಿ ತಾಣವಾಗಿ ಬೆಳೆಯಲು ಎಲ್ಲ ರೀತಿಯ ಕ್ರಮಕೈಗೊಳ್ಳಬೇಕೆಂದು ಹೇಳಿ, ಒಂದು ವಾರದಲ್ಲಿ ಉದ್ಯಾನದ ಉಳಿದ ಕೆಲಸಗಳನ್ನು ಪೂರ್ಣಗೊಳಿಸಿ ಸಾರ್ವಜನಿಕರ ವೀಕ್ಷಣೆಗೆ ಅವಕಾಶ ಕಲ್ಪಿಸಬೇಕು ಎಂದು ಹೇಳಿದರು.

ನಗರಸಭೆ ಪೌರಾಯುಕ್ತರು ಹಾಗೂ ಬುಡಾ ಆಯುಕ್ತ ವಾಸಣ್ಣ ಆರ್. ಮಾತನಾಡಿ, ಉದ್ಯಾನವನದಲ್ಲಿ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಇತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ. ನೀರಿನ ಕಾರಂಜಿ, ವಿಶ್ರಾಂತಿ ತಂಗುದಾಣ, ಬಯಲು ರಂಗಮಂದಿರ, ಮಕ್ಕಳ ಆಟಿಕೆಗಳು ಹಾಗೂ ಪ್ರೇಕ್ಷಕರ ಗ್ಯಾಲರಿಗಳನ್ನು ಮಾಡಲಾಗಿದೆ. ಮುಂದಿನ ವಾರದಿಂದ ಸಾರ್ವಜನಿಕರಿಗೆ ಪ್ರವೇಶ ಕಲ್ಪಿಸಲಾಗುತ್ತಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಮುಚಖಂಡಿ ಗ್ರಾಮ ಪಂಚಾಯತ ಅಧ್ಯಕ್ಷ ರಂಗಪ್ಪ ಪೂಜಾರಿ, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಜಿ.ಪಂ ಸಿಇಓ ಶಶಿಧರ ಕುರೇರ, ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ ಸೇರಿದಂತೆ ಇತರರು ಇದ್ದರು.

> ಜಿಲ್ಲೆಯಲ್ಲಿ ಅರಣ್ಯೀಕರಣ ಮಾಡುವ ಉದ್ದೇಶದಿಂದ ಜಿಲ್ಲೆಯಲ್ಲಿರುವ ಪ್ರತಿ ಸಕ್ಕರೆ ಕಾರ್ಖಾನೆಗಳಿಂದ ತಲಾ 10 ಸಾವಿರ ಗಿಡಗಳನ್ನು ನೆಡುವ ಕಾರ್ಯ–ಕ್ಕೆ ಜಿಲ್ಲಾಡಳಿತ ಮುಂದಾಗಿದೆ. ಗಿಡಮರಗಳನ್ನು ಹೆಚ್ಚಿಗೆ ನೆಡುವ ಮೂಲಕ ಅರಣ್ಯೀಕರಣಕ್ಕೆ ವಿಶೇಷ ಒತ್ತುಕೊಟ್ಟು ಆಸಕ್ತಿಯಿಂದ ಕೆಲಸ ನಿರ್ವಹಿಸುವಂತೆ ಸೂಚಿಸಿದ ಸಚಿವ ತಿಮ್ಮಾಪೂರ, ಮುಂದಿನ ಪೀಳಿಗೆಗೆ ಫಲವತ್ತಾದ ಭೂಮಿ, ನೀರು ಒದಗಿಸುವ ಕಾರ್ಯವಾಗಬೇಕು ಎಂದರು.

# ಜಿನೀವಾ ಒಪ್ಪಂದ ವಿದ್ಯಾರ್ಥಿಗಳಿಗೆ ತಿಳಿಯಲಿ–ನರಗುಂದ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.15–ಜಿನೀವಾ ಒಪ್ಪಂದ ಸಹಿತ ದೇಶ ಹಾಗೂ ಅಂತಾರಾಷ್ಟ್ರೀಯ ವಿದ್ಯಮಾನಗಳ ಬಗ್ಗೆ ಇಂದಿನ ಪೈಪೋಟಿ ಯುಗದಲ್ಲಿ ವಿದ್ಯಾರ್ಥಿಗಳು ತಿಳಿದುಕೊಳ್ಳುವುದು ಅವಶ್ಯವಾಗಿದೆ ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಯುಥ್ ರೆಡ್‌ಕ್ರಾಸ್ ಘಟಕ ಮತ್ತು ಆಯ್‌ಕ್ಯೂಎಸಿ ಆಯೋಜಿಸಿದ್ದ ಜಿನೀವಾ ಒಪ್ಪಂದ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ನೀತಿ ನಿಯಮಗಳು ಇರುವಂತೆ ಯುದ್ಧದ ಸಂದರ್ಭದಲ್ಲೂ ಆಯಾ ದೇಶಗಳು ಇವುಗಳನ್ನು ಪಾಲಿಸಬೇಕಾಗುತ್ತದೆ. ಜಿನೀವಾ ಒಪ್ಪಂದ ಯುದ್ಧ ಕೈದಿಗಳ ರಕ್ಷಣೆಗೆ ಸಂಬಂಧಿಸಿದ ಅಂಶಗಳನ್ನು ಒಳಗೊಂಡಿದೆ ಎಂದರು.

ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಲು ಉತ್ತೇಜಿಸುವ ಹಾಗೂ ಪರಸ್ಪರ ತಿಳುವಳಿಕೆ ಹಾಗೂ ಸಹಕಾರವನ್ನು ಸಾಧಿಸುವಲ್ಲಿ ರೆಡ್‌ಕ್ರಾಸ್ ಮಹತ್ವದ ಪಾತ್ರವನ್ನು ವಹಿಸುತ್ತದೆ. ಇಂತಹ ದಿನಾಚರಣೆಗಳ ಹಿಂದಿನ ಉದ್ದೇಶವನ್ನು ತಿಳಿದುಕೊಂಡು ವಿದ್ಯಾರ್ಥಿಗಳು ಹೆಚ್ಚಿನ ಜ್ಞಾನವನ್ನು ಪಡೆಯಬೇಕು ಎಂದರು.

ಉಪನ್ಯಾಸ ನೀಡಿದ ಉಪನ್ಯಾಸಕಿ ಕೀರ್ತಿ ದಾಸರ, ಎರಡು ರಾಷ್ಟ್ರಗಳ ನಡುವೆ ಯುದ್ಧ ಆದ ಸಂದರ್ಭದಲ್ಲಿ ಕೈದಿಗಳು, ಗಾಯಗೊಂಡವರು, ಅನಾರೋಗಕ್ಕೆ ತುತ್ತಾದವರ ಆರೈಕೆ, ಯೋಗಕ್ಷೇಮವನ್ನು ನೋಡಿಕೊಳ್ಳಬೇಕು ಎಂಬುದು ಈ ಒಪ್ಪಂದದಲ್ಲಿ ಇದೆ. ಯುದ್ಧ ಕೈದಿಯನ್ನು ದೈಹಿಕ ಹಾಗೂ ಮಾನಸಿಕವಾಗಿ ಹಿಂಸೆ ಮಾಡುವಂತಿಲ್ಲ. ವೈದ್ಯಕೀಯ ಸೇವೆಯನ್ನು ಒದಗಿಸಿ ಮಾನವೀಯತೆ ತೋರಿಸಬೇಕು ಎಂಬುದು ಇದರಲ್ಲಿ ಅಡಕವಾಗಿದೆ ಎಂದರು.

ಅಶ್ವಿನಿ ಬಿಲ್ಲಾರ ಪ್ರಾರ್ಥಿಸಿದರು. ಸಂಯೋಜಕ ಕೃಷ್ಣ ಲಮಾಣಿ ಸ್ವಾಗತಿಸಿದರು. ಏಕನಾಥ ರಾಠೋಡ ವಂದಿಸಿದರು. ಎ.ಎ.ಗಂಗಲ್ ನಿರೂಪಿಸಿದರು. ಆಯ್‌ಕ್ಯೂಎಸಿ ಸಂಯೋಜಕ ಡಾ.ಎಸ್.ಎಸ್. ಹಂಗರಗಿ ಇದ್ದರು.

# ರಾಷ್ಟ್ರಧ್ವಜದ ಮಹತ್ವ ಎಲ್ಲರೂ ಅರಿಯಬೇಕು–ಪ್ರಭುಸ್ವಾಮೀಜಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.15–ರಾಷ್ಟ್ರಧ್ವಜ ಪ್ರತಿಯೊಬ್ಬ ಭಾರತೀಯನ ಆತ್ಮ, ಪ್ರಾಣವಾಗಿದ್ದು, ಅದರ ಮಹತ್ವವನ್ನು ತಿಳಿಯುವುದು, ರಕ್ಷಣೆ ಮಾಡುವುದು ಎಲ್ಲರ ಕರ್ತವ್ಯ ಎಂದು ಚರಂತಿಮಠದ ಡಾ.ಪ್ರಭು ಸ್ವಾಮೀಜಿ ಹೇಳಿದರು.

ನಗರದ ವೈಷ್ಣವದೇವಿ ಕ್ರಿಯೇಷನ್ಸ್ ವತಿಯಿಂದ ಆ.14 ರ ಮಧ್ಯರಾತ್ರಿ ಜರುಗಿದ 79ನೇ ಸ್ವಾತಂತ್ರೋತ್ಸವದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ರಾಷ್ಟ್ರಧ್ವಜದ ಬಗ್ಗೆ ನಮ್ಮಲ್ಲಿ ಕಾಳಜಿಯಿಲ್ಲ. ಅದನ್ನು ಎಲ್ಲೆಂದರಲ್ಲಿ ಬೀಸಾಕುತ್ತೇವೆ. ಇದು ರಾಷ್ಟ್ರಧ್ವಜಕ್ಕೆ ಮಾಡುವ ಅವಮಾನ. ಹೀಗಾಗಿ ನಮ್ಮಲ್ಲಿ ರಾಷ್ಟ್ರಧ್ವಜದ ಬಗ್ಗೆ ಕಾಳಜಿ ಇರಬೇಕಾದುದು ಅತ್ಯಂತ ಅವಶ್ಯಕ ಎಂದರು.

ಅನೇಕ ಮಹನೀಯರ ಹೋರಾಟ, ಬಲಿದಾನದ ಸಂಕೇತವಾಗಿರುವ ಸ್ವಾತಂತ್ರ್ಯವನ್ನು ಭಾರತೀಯರಾದ ನಾವು ಸದುಪಯೋಗಪಡಿಸಿಕೊಂಡು, ಶಾಂತಿ, ಸೌಹಾರ್ದತೆ, ಭಾತೃತ್ವದಿಂದ ನಡೆದುಕೊಳ್ಳಬೇಕು. ಅಂದಾಗಲೇ ಸ್ವಾತಂತ್ರ್ಯ ದಿನಾಚರಣೆಗೆ ಅರ್ಥ ಬರುತ್ತದೆ ಎಂದು ಪೂಜ್ಯರು ಹೇಳಿದರು.

ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಮಾತನಾಡಿ, ಸ್ವಾತಂತ್ರ್ಯ ಸುಲಭವಾಗಿ ಸಿಕ್ಕಿಲ್ಲ. ಹಲವು ಮಹನೀಯರ ತ್ಯಾಗ, ಬಲಿದಾನದಿಂದ ಇದು ಸಾಧ್ಯವಾಗಿದೆ. ಇಂಥ ಮಹಾನ್ ಸಾಧನೆಯ ಸ್ವಾತಂತ್ರ್ಯವನ್ನು ಉಳಿಸಿ, ರಕ್ಷಿಸಲು ಪ್ರತಿಯೊಬ್ಬರೂ ಸಂಕಲ್ಪ ಮಾಡಬೇಕು ಎಂದರು.

ಚಿತ್ರ ನಿರ್ಮಾಪಕ ಘನಶ್ಯಾಂ ಭಾಂಡಗೆ ಪ್ರಾಸ್ತಾವಿಕವಾಗಿ ಮಾತನಾಡಿ, ಕಳೆದ 32 ವರ್ಷಗಳಿಂದ ಆ.14 ರ ಮಧ್ಯರಾತ್ರಿಯಲ್ಲಿ ಧ್ವಜಾರೋಹಣ ನೆರವೇರಿಸಲಾಗುತ್ತಿದೆ ಎಂದು ಹೇಳಿದರು.

ವಿದ್ವಾಂಸ ಅಶೋಕ ನಗರೆ ಧ್ವಜಾರೋಹಣ ನೆರವೇರಿಸಿದರು. ಫಂಡರಪುರದ ಪ್ರಭಾಕರದಾದಾ ಬಜರಂಗ ಬುವಾ ಬೋಧಲೆ ಮಹಾರಾಜರು, ಸುರಗಿರಿ ಬೆಟ್ಟದ ಲಕ್ಷ್ಮಣ ಶರಣರು, ಅಂಕಲಿಮಠದ ಬ್ರಹ್ಮಶ್ರೀ ಡಾ.ಬಸವರಾಜ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿದ್ದರು. ಸಂಸದ ಪಿ.ಸಿ.ಗದ್ದಿಗೌಡರ, ವೆಂಕಪ್ಪ ಸುಗತೇಕರ ಸೇರಿ ಅನೇಕ ಗಣ್ಯರು ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಇದಕ್ಕೂ ಮೊದಲು ಸಂಜೆ 8 ಗಂಟೆಯಿಂದ ವಿವಿಧ ಕಲಾತಂಡಗಳಿಂದ ದೇಶಭಕ್ತಿ, ಸಂಗೀತ, ಗಾಯನ, ನೃತ್ಯ ಕಾರ್ಯಕ್ರಮಗಳು ನಡೆದವು.

## ಕೆ.ಎಸ್.ಆರ್.ಟಿ.ಸಿ– ಕಚೇರಿ ಸಹಾಯಕ ಪರಿಶಿಷ್ಟ ಜಾತಿ ಹಿಂಬಾಕಿ ಹುದ್ದೆಯ ಅಂತಿಮ ಆಯ್ಕೆಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಆಗಸ್ಟ್15–ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಬಾಕಿ ಇದ್ದ ಕಚೇರಿ ಸಹಾಯಕ (ತೋಟಗಾರಿಕೆ–IV) ಪರಿಶಿಷ್ಟ ಜಾತಿ ಹಿಂಬಾಕಿ ಹುದ್ದೆಯ ಅಂತಿಮ ಆಯ್ಕೆಪಟ್ಟಿಯನ್ನು ಆಗಸ್ಟ್ 14 ರಂದು ನಿಗಮದ ಸೂಚನಾ ಫಲಕ ಮತ್ತು ನಿಗಮದ ಅಧಿಕೃತ ವೆಬ್‌ಸೈಟ್ ತಿತಿತಿ. ಇಡಿಣಛಿ.karnataka.gov.in ನಲ್ಲಿ ಪ್ರಕಟಿಸಲಾಗಿದೆ. ಹೆಚ್ಚಿನ ಮಾಹಿತಿಗೆ ನಿಗಮದ ವೆಬ್‌ಸೈಟನ್ನು ವೀಕ್ಷಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಹಾರಕೂಡದ ಪೂಜ್ಯ ಶ್ರೀ ಡಾ ಚನ್ನವೀರ ಶಿವಾಚಾರ್ಯರು ನಿರ್ಧಾರ: ಸ್ವಾಗತಿಸಿದ ಭಾಲ್ಕಿಯ ಶ್ರೀಗಳು.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ವಿಶ್ವಗುರು ಬಸವಣ್ಣನವರ ಕಾಯಕ ಭೂಮಿಯಾಗಿರುವ ಬಸವಕಲ್ಯಾಣದಲ್ಲಿ ಬರುವ ಸಪ್ಟೆಂಬರ್ ತಿಂಗಳ ಕೊನೆಯವಾರ ರಂಭಾಪುರಿ ಶ್ರೀಗಳ ದಸರಾ ದರ್ಬಾರ್– ಅಡ್ಡಪಲ್ಲಕ್ಕಿ ಕಾರ್ಯಕ್ರಮದ ಗೌರವಾಧ್ಯಕ್ಷರಾಗಿ ಹಾರಕೂಡ ಸಂಸ್ಥಾನದ ಪೂಜ್ಯ ಶ್ರೀ ಡಾ.ಚನ್ನವೀರ ಶಿವಾಚಾರ್ಯರು ಜವಾಬ್ದಾರಿ ವಹಿಸಿಕೊಂಡಿದ್ದರು. ಹಾರಕೂಡದ ಪೂಜ್ಯರು ಮೊದಲೇ ರಂಭಾಪುರಿ ಶ್ರೀಗಳಿಗೆ ಬಸವಕಲ್ಯಾಣದ ನೆಲದಲ್ಲಿ ಅಡ್ಡಪಲ್ಲಕ್ಕಿ ಮಾಡಲು ಸಾಧ್ಯವಿಲ್ಲವೆಂದು ತಿಳಿಸಿದರು. ಅದ–ಕ್ಕೆ ರಂಭಾಪುರಿ ಶ್ರೀಗಳು ಮೊದಲು ಅನುಮತಿ ಸೂಚಿಸಿದರು. ಆದರೆ ಇತ್ತೀಚನ ದಿನಮಾನಗಳಲ್ಲಿ ದಸರಾ ದರ್ಬಾರದ ಅಂಗವಾಗಿ ಅಡ್ಡಪಲ್ಲಕ್ಕಿ ಮನುಷ್ಯರ ಹೆಗಲಮೇಲೆ ಮಾಡಲಾಗುತ್ತದೆ ಎಂಬ ಹಠ ಮಾಡಿರುವ ವಿಷಯ ಹಾರಕೂಡ ಪೂಜ್ಯರಿಗೆ ನೋವನ್ನುಂಟು ಮಾಡಿದೆ.

ಬಸವಾದಿ ಶರಣರ ಕುರಿತು ಅಪಾರ ಭಕ್ತಿ, ಗೌರವ ಇಟ್ಟುಕೊಂಡಿರುವ ಹಾರಕೂಡದ ಪೂಜ್ಯರು ಬಸವಕಲ್ಯಾಣದ ನೆಲದಲ್ಲಿ ಮನುಷ್ಯರ ಹೆಗಲಿನ ಮೇಲೆ ಅಡ್ಡಪಲ್ಲಕಿ ಮಾಡುವುದು ಸೂಕ್ತವಲ್ಲವೆಂದು ಗೌರವಾಧ್ಯಕ್ಷ ಸ್ಥಾನದಿಂದ ಹಿಂದೆ ಸರಿಯುತ್ತೇವೆ ಎಂದು ತಿಳಿಸಿದರು. ಹಾರಕೂಡ ಪೂಜ್ಯರ ಈ ನಿರ್ಧಾರ ನಾಡಿನ ಸಮಸ್ತ ಬಸವಭಕ್ತರಿಗೆ ಅತ್ಯಂತ ಸಂತೋಷವನ್ನುಂಟು ಮಾಡಿದೆ. ಹಾಗೂ ಪೂಜ್ಯರ ಈ ಬಸವತತ್ವಪರ ನಿಲುವು ನಾವು ಆತ್ಮೀಯವಾಗಿ ಸ್ವಾಗತಿಸುತ್ತೇವೆ ಎಂದು ಭಾಲ್ಕಿ ಹಿರೇಮಠ ಸಂಸ್ಥಾನದ ಹಾಗೂ ಬಸವಕಲ್ಯಾಣ ಅನುಭವ ಮಂಟಪದ ಟ್ರಸ್ಟಿನ

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ



# ಸ್ವಾವಲಂಬನೆ

## ಹುಟ್ಟಿದೂರಲ್ಲೇ ದುಪ್ಪಟ್ಟು ಆದಾಯ ಗಳಿಕೆ!

- 150 ಗ್ರಾಮೀಣ ಮಹಿಳೆಯರಿಗೆ ಐಐಎಂ-ಬಿ ಸಹಯೋಗದೊಂದಿಗೆ ತರಬೇತಿ
- ತರಬೇತಿಯಲ್ಲಿ ಪಾಲ್ಗೊಂಡವರ ಸರಾಸರಿ ವಾರ್ಷಿಕ ಆದಾಯ 108% ಹೆಚ್ಚಳ
- 144 ಬ್ರ್ಯಾಂಡೆಡ್ ಉತ್ಪನ್ನಗಳ ಅಭಿವೃದ್ಧಿ
- 148 ಉದ್ಯಮಗಳಿಂದ ಪ್ರಮುಖ ಸಾಮಾಜಿಕ ಜಾಲತಾಣಗಳ ಜೊತೆಗೆ ಪ್ರಚಾರದ ಒಪ್ಪಂದ
- ಮಾರುಕಟ್ಟೆ, ಹಣಕಾಸು ಹಾಗೂ ಕಾನೂನು ಪಾಲನೆ ಬಗ್ಗೆ ಸಹಕಾರ

ಮಹಿಳೆಯರ ಸಬಲೀಕರಣ
**ಕರ್ನಾಟಕದ ಸಬಲೀಕರಣ**



**ಕರ್ನಾಟಕ ನವ ನಿರ್ಮಾಣಕ್ಕೆ**
# ಗ್ಯಾರಂಟಿ ಸರ್ಕಾರ...

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನುಷ್ಯತ್ವ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಗಡಿ ತಾಲ್ಲೂಕುಗಳಿಂದ ಪ್ರಕಟವಾಗುವ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು